ಸಂಪುಟ: 14 Volume | ಸಂಚಿಕೆ: 87 Issue | ಪುಟಗಳು 08 Pages | ಗುರುವಾರ 09 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕ್ಷಮಿಸುವುದು ಉತ್ತಮ. ಮರೆತುಬಿಡುವುದು ಸರ್ವೋತ್ತಮ.
–ರಾಬರ್ಟ್ ಬ್ರೌನಿಂಗ್



ಬೀದರ್: ನಗರಕ್ಕೆ ಸೋಮವಾರ ಭೇಟಿ ನೀಡಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ರಾಜ್ಯ ಕುರಿ ಮಹಾ ಮಂಡಳದ ನಿರ್ದೇಶಕ ಪಂಡಿತರಾವ್ ಚಿದ್ರಿ ಅವರು ಕುರಿ ಮರಿಯನ್ನು ಉಡುಗೊರೆಯಾಗಿ ನೀಡುವ ಮೂಲಕ ಗಮನ ಸೆಳೆದರು.

## ರೈತರ ಆತ್ಮಹತ್ಯೆ ರಾಜ್ಯದಲ್ಲಿ ಹೆಚ್ಚು ಪ್ರಕರಣ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ದೇಶದಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದ್ದು, ಪರಿಸ್ಥಿತಿ ಅತ್ಯಂತ ಕಳವಳಕಾರಿಯಾಗಿದೆ ಎಂದು ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಆತಂಕ ವ್ಯಕ್ತಪಡಿಸಿದ್ದಾರೆ.



ಬುಧವಾರ ನಗರದ ಬಿಜೆಪಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಅಧಿಕೃತ ಅಂಕಿ–ಅಂಶಗಳ ಪ್ರಕಾರವೇ ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 2850 ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪ್ರಸ್ತುತ ಎದುರಾಗಿರುವ ಭೀಕರ ಬರಗಾಲದಿಂದ ರೈತರ ಆತ್ಮವಿಶ್ವಾಸವನ್ನು ಕುಗ್ಗಿಸಲು ಸರ್ಕಾರ ಅವಕಾಶ ನೀಡಬಾರದು ಎಂದು ಎಚ್ಚರಿಸಿದರು.

ರೈತರಲ್ಲಿ ಧೈರ್ಯ ತುಂಬುವ ಮತ್ತು ಆತ್ಮವಿಶ್ವಾಸ ಹೆಚ್ಚಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ. ಬರಗಾಲದ ತೀವ್ರತೆಯನ್ನು ಸಮರ್ಥವಾಗಿ ಎದುರಿಸಲು ಸರ್ಕಾರ ಅಗತ್ಯವಿರುವ ಎಲ್ಲಾ ಪೂರ್ವ ಸಿದ್ಧತೆಗಳನ್ನು ತಕ್ಷಣವೇ ಮಾಡಿಕೊಳ್ಳಬೇಕು ಎಂದು ರವಿ ಹೇಳಿದರು.

ರಾಜ್ಯದಲ್ಲಿ ಲಭ್ಯವಿರುವ ಜಲಸಂಪನ್ಮೂಲವನ್ನು ಮೊದಲ ಆದ್ಯತೆಯಾಗಿ ಕುಡಿಯುವ ನೀರಿಗಾಗಿ ಹಾಗೂ ಉಳಿದಂತೆ ಸಾರ್ವಜನಿಕರಿಗೆ ಮತ್ತು ಜಾನುವಾರುಗಳಿಗೆ ನೀರು ಹಾಗೂ ಮೇವು ಒದಗಿಸಲು ಬಳಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಕಟ್ಟುನಿಟ್ಟಿನ ಪ್ರಾಮಾಣಿಕ ಕಾರ್ಯಾಚರಣೆ ವಿಧಾನವನ್ನು ರೂಪಿಸಬೇಕು ಎಂದರು.

ನಾವು ಕೇವಲ ವಿರೋಧ ಪಕ್ಷವಾಗಿ ಸರ್ಕಾರವನ್ನು ಟೀಕಿಸುವುದಕ್ಕಷ್ಟೇ ಸೀಮಿತವಾಗಲು ಬಯಸುವುದಿಲ್ಲ. ರೈತರ ಹಿತದೃಷ್ಟಿಯಿಂದ ಸರ್ಕಾರಕ್ಕೆ ಸಕಾರಾತ್ಮಕ ಮತ್ತು ಯೋಗ್ಯವಾದ ಸಲಹೆಗಳನ್ನು ನೀಡುವ ಉದ್ದೇಶದಿಂದಲೇ ಈ ವಿಷಯಗಳನ್ನು ಪ್ರಸ್ತಾಪಿಸುತ್ತಿದ್ದೇವೆ ಎಂದು ಸಿ.ಟಿ.ರವಿ ತಿಳಿಸಿದರು.

## ಎಸ್‌ಐಆರ್‌ನಲ್ಲಿ ಪ್ರಕಾಶ್ ಖಂಡ್ರೆ ಭಾಗಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (SIR) ಅಭಿಯಾನದ ಅಂಗವಾಗಿ ಇಂದು ನಡೆದ ಮನೆ–ಮನೆ ಸಮೀಕ್ಷೆ (Enumeration) ಕಾರ್ಯದಲ್ಲಿ ಮಾಜಿ ಶಾಸಕ ಪ್ರಕಾಶ್ ಖಂಡ್ರೆ ಅವರು ಭಾಗವಹಿಸಿ, ತಮ್ಮ ಮತದಾರರ ವಿವರಗಳನ್ನು ಪರಿಶೀಲಿಸಿ ನೋಂದಾಯಿಸಿಕೊಂಡರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, "ಮತದಾನದ ಹಕ್ಕು ಪ್ರತಿಯೊಬ್ಬ ಭಾರತೀಯ ಪ್ರಜೆಯ ಅಮೂಲ್ಯ ಸಾಂವಿಧಾನಿಕ ಹಕ್ಕಾಗಿದೆ. ಶುದ್ಧ, ನಿಖರ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಚುನಾವಣಾ ಆಯೋಗದ ಈ ಅಭಿಯಾನದಲ್ಲಿ ಪ್ರತಿಯೊಬ್ಬ ಅರ್ಹ ಮತದಾರರೂ ಸಕ್ರಿಯವಾಗಿ ಭಾಗವಹಿಸಬೇಕು" ಎಂದು ಕರೆ ನೀಡಿದರು.

ಈ ವೇಳೆ ಮತದಾರರು ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ, ಅಗತ್ಯವಿದ್ದರೆ



ತಿದ್ದುಪಡಿ ಮಾಡಿಸಿಕೊಳ್ಳಬೇಕು. ಹೊಸದಾಗಿ ಮತದಾನದ ಅರ್ಹತೆ ಪಡೆದವರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಿಕೊಳ್ಳುವಂತೆ ಅವರು ಮನವಿ ಮಾಡಿದರು. "ನಮ್ಮ ಮತ – ನಮ್ಮ ಹಕ್ಕು, ನಮ್ಮ ಜವಾಬ್ದಾರಿ" ಎಂಬ ಸಂದೇಶದೊಂದಿಗೆ ಪ್ರತಿಯೊಬ್ಬರೂ ಮತದಾರರ ಪಟ್ಟಿ ಪರಿಷ್ಕರಣೆ ಅಭಿಯಾನದಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವವನ್ನು ಮತ್ತಷ್ಟು ಸದೃಢಗೊಳಿಸೋಣ ಎಂದು ಅವರು ಕರೆ ನೀಡಿದರು. ಈ ಸಂದರ್ಭದಲ್ಲಿ ತಹಶೀಲ್ದಾರರು , ಗ್ರಾಮ ಆಡಳಿತ ಅಧಿಕಾರಿ, ಬಿಎಲ್ಒ, ಪ್ರಭುರಾವ್ ಧೂಪೆ, ಮಧುಕರ್ ದೇಶ ಪಾಂಡೆ ಉಪಸ್ಥಿತರಿದ್ದರು.

## ಸಿಎಂ ಸಚಿವಾಲಯಕ್ಕೆ 3 ಮಾಧ್ಯಮ ಕಾರ್ಯದರ್ಶಿಗಳ ನೇಮಕ



**ಬೀದರ್:** ಮುಖ್ಯಮಂತ್ರಿಯವರ ಸಚಿವಾಲಯಕ್ಕೆ ಈ ಕೆಳಕಂಡ ಮೂವ್ವರನ್ನು ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿಗಳಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರ ನೇಮಿಸಿ ಜುಲೈ 8 ರಂದು ಅಧಿಸೂಚನೆ ಹೊರಡಿಸಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–6) ಯ ಸರ್ಕಾರದ ಅಧೀನ ಕಾರ್ಯದರ್ಶಿ ಗಾಯತ್ರಿ ಜಿ. ಎನ್ ಅವರು ಅಧಿಸೂಚನೆ ಹೊರಡಿಸಿದ್ದಾರೆ.

1. ಶ್ರೀ ಪಿ. ತ್ಯಾಗರಾಜ್, ಬೆಂಗಳೂರು – ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ –1
2. ಆರ್. ಜಯಪ್ರಕಾಶ್, ಬೆಂಗಳೂರು – ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ – 2
3. ರಾಘವೇಂದ್ರಭಟ್, ಬೆಂಗಳೂರು – ಮುಖ್ಯಮಂತ್ರಿಯವ ಮಾಧ್ಯಮ ಕಾರ್ಯದರ್ಶಿ–3

## ಶೇ.83.79ರಷ್ಟು ಲಕ್ಷ ಗಣತಿ ನಮೂನೆ ವಿತರಣೆ

**ಕಲಬುರಗಿ:** ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು, ಜಿಲ್ಲೆಯಾದ್ಯಂತ ಬುಧವಾರದ ಅಂತ್ಯ–ಕ್ಕೆ ಒಟ್ಟು 23,71,542 ಮತದಾರರ ಪೈಕಿ 19,87,086 (ಶೇ.83.79) ಗಣತಿ ನಮೂನೆ ವಿತರಣೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ. ಇದೂವರೆಗೆ ಬಿ.ಎಲ್.ಓಗಳು 87,995 (ಶೇ.03.71) ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆ ಪಡೆದು ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಿದ್ದಾರೆ. ಇನ್ನು 5,016 (ಶೇ.0.21) ಮತದಾರರು ಸ್ವ–ಯಂ ಪ್ರೇರಿತವಾಗಿ ಆನ್ ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಬಿ.ಎಲ್.ಓ.ಗಳು ಮನೆ–ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 796 ಮತದಾರರು ಸ್ಥಳಾಂತರಗೊಂಡಿರುವುದು ಮತ್ತು 1,095 ಜನ ನಿಧನ ಹೊಂದಿರುವ ಬಗ್ಗೆ ವರದಿಯಾಗಿದೆ.

# ಕಡುಭ್ರಷ್ಟರಿಗೆ ಲೋಕಾ ಬೇಟೆ

## ಅಕ್ರಮ ಸಂಪಾದನೆಗೆ ಬಿಸಿ | ರಾಜ್ಯದ 30ಕ್ಕೂ ಹೆಚ್ಚು ಕಡೆ ಏಕಕಾಲದಲ್ಲಿ ಲೋಕಾಯುಕ್ತ ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಹಲವೆಡೆ ಮಿಂಚಿನ ದಾಳಿ ನಡೆಸಿದ ಲೋಕಾಯುಕ್ತ ಪೊಲೀಸರು, 10 ಸರ್ಕಾರಿ ಅಧಿಕಾರಿಗಳ ಅಕ್ರಮ ಸಂಪಾದನೆಯನ್ನು ಜಪ್ತಿ ಮಾಡಿದ್ದು ಗಮನ ಸೆಳೆದಿದೆ. ಅಕ್ರಮ ಸಂಪತ್ತಿನ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಲೋಕ ಸೂಕ್ತ ಕ್ರಮ ಕೈಗೊಂಡಿದೆ. ರಾಜ್ಯದ 30ಕ್ಕೂ ಹೆಚ್ಚು ಕಡೆ ಏಕಕಾಲದಲ್ಲಿ ದಾಳಿ ನಡೆಸು ಸಂಚಲ ಉಂಟು ಮಾಡಿದೆ.

**ಅಧಿಕಾರಿಗಳು ಎಲ್ಲೆಲ್ಲಿ ದಾಳಿ?:** ಬೆಂಗಳೂರು, ಚಿತ್ರದುರ್ಗ, ತುಮಕೂರು, ಕಲಬುರಗಿ, ಶಿವಮೊಗ್ಗ ಜಿಲ್ಲೆ ಸೇರಿದಂತೆ ರಾಜ್ಯದ ಹಲವೆಡೆ ದಾಳಿ ನಡೆದಿದೆ. ರಾಯಚೂರಿನಲ್ಲಿ ಕೃಷ್ಣಾ ಜಲಭಾಗ್ಯ ನಿಗಮ ನಾರಾಯಣಪುರ ಬಲದಂಡೆ ಕಾಲುವೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಬಸನಗೌಡ ಪಾಟೀಲ್ ಅವರ ಎಚ್‌ಆರ್‌ಬಿ ಲೇಔಟ್‌ನಲ್ಲಿರುವ ಮನೆ ಮೇಲೆ ದಾಳಿ ನಡೆದಿದೆ. ತೋಟದ ಭ್ರಷಷ್ಟನ ಮನೆಗೂ ಲಗ್ಗೆ: ಚಿಕ್ಕಹೊನ್ನಕುಣಿಯಲ್ಲಿರುವ ಬಸನಗೌಡರ ಇಇ ಕಚೇರಿ, ಇವರ ಅಣ್ಣನ ಮನೆ ಹಾಗೂ ಇವರ ಪತ್ನಿಯವರ ಹೆಸರಿನಲ್ಲಿರುವ ಶ್ರೀ ಫಿಲ್ಲಿಂಗ್ ನಯಾರ ಪೆಟ್ರೋಲ್‌ಬಂಕ್ ಹಾಗೂ ಪಕ್ಕದಲ್ಲೇ ಇರುವ ಬಾರ್ ರೆಸ್ಟೋರೆಂಟ್ ಮತ್ತು ಗೋಡನ್ಗಳ ಮೇಲೆಯೂ ದಾಳಿ ನಡೆದಿದೆ. ಇವರ ಯಕ್ಲಾಸಪುರ ಪಕ್ಕದ ತೋಟದ ಮನೆಯಲ್ಲೂ ಕೂಡ ತಪಾಸಣೆ ನಡೆದಿದೆ.



### ಲೋಕಾ ಬಲೆಗೆ ಸಿಕ್ಕಿ ಬಿದ್ದ ಪ್ರಮುಖರು

- ಬಸನಗೌಡ ಪಾಟೀಲ್– ಕಾರ್ಯಕಾರಿ ಎಂಜಿನಿಯರ್ ರಾಯಚೂರು
- ಎಂ.ಶಂಕರ್– ಸಹಾಯಕ ಉಪನ್ಯಾಸಕ ತೋಟಗಾರಿಕಾ ವಿವಿ, ಚಿತ್ರದುರ್ಗ
- ನರೇಂದ್ರಕುಮಾರ್– ಕಾರ್ಯಪಾಲಕ ಪಿಡಬ್ಲುಡಿ ಎಂಜಿನಿಯರ್ ಬೆಂಗಳೂರು
- ಡಿ.ಆರ್.ಪುಷ್ಪ ಉಪನಿರ್ದೇ ಶಕರು(ಆಡಳಿತ), ಎಪಿಎಂಸಿ, ಬೆಂಗಳೂರು
- ಎನ್.ಮಧುಸೂದನ್– ಎಂಜಿನಿಯರ್, ನೀರಾವರಿ ಇಲಾಖೆ, ತುಮಕೂರು
- ಕಿರಣ್ ಅಂಗಡಿ– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಶಿವಮೊಗ್ಗ

### ಅಪಾರ ಪ್ರಮಾಣದ ಆಸ್ತಿ..!

ಅಪಾರ ಪ್ರಮಾಣದ ಆಸ್ತಿ ದಾಖಲೆ, ನಗದು, ಚಿನ್ನಾಭರಣ ಪತ್ತೆಯಾಗಿದ್ದು, ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆಯಲ್ಲಿ ತೊಡಗಿದ್ದಾರೆ. ಅಧಿಕಾರಿಗಳು ಬರುತ್ತಿದ್ದಂತೆಯೇ ಎಚ್ಚೆತ್ತು–ಕೊಂಡ ಬಸನಗೌಡ, ಮಹಡಿ ಮೇಲೆ ಓಡಿಹೋದ ಘಟನೆ ನಡೆದಿದೆ. ಮನೆ ಸೇರಿದಂತೆ ವಿವಿಧೆಡೆ ದಾಳಿ ನಡೆಸಿದ್ದು, ಅಪಾರ ಪ್ರಮಾಣದ ಅಕ್ರಮ ಸಂಪತ್ತು ಬೆಳಕಿಗೆ ಬಂದಿರುವುದು ತಿಳಿದುಬಂದಿದೆ.

### ಜೆಸ್ಕಾಂ ಎಇಇ ಮೇಲೂ ದಾಳಿ

ಕಲಬುರಗಿಯಲ್ಲಿ ಜೇಸ್ಕಾಂ ಎಇಇ ಅಮೃತರಾವ್ ಯಲಾಲ್ ಮನೆ, ಕಚೇರಿ ಸೇರಿ 7 ಕಡೆ ದಾಳಿ ನಡೆಸಲಾಗಿದೆ. ಜಾಗೃತಿ ಕಾಲೋನಿಯ ಮನೆ, ಬಸವ ಅಪಾರ್ಟ್‌ಮೆಂಟ್‌ನಲ್ಲಿರುವ ಫ್ಲಾಟ್, ಕೊತ್ತಂಬರಿ ಲೇಔಟ್‌ನಲ್ಲಿರುವ ಕಚೇರಿ, ಚಿಂಚೋಳಿ ತಾಲೂಕಿನ ಸುಲೇಪೇಟ್ ಗ್ರಾಮದಲ್ಲಿರುವ ಮನೆ ಸೇರಿದಂತೆ ಹಲವೆಡೆ ದಾಳಿ ನಡೆಸಿ ಚಿನ್ನಾಭರಣ ಸೇರಿದಂತೆ ಚರ ಚಿರಾಸ್ತಿಗಳನ್ನು ಪತ್ತೆ ಹಚ್ಚಿದ್ದಾರೆ.

### ಎಲ್ಲೆಲ್ಲೂ ಸಂಪತ್ತು..!


ಬೆಂಗಳೂರಿನಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ನರೇಂದ್ರಕುಮಾರ್, ಸೂಪರಿಡೆಂಡೆಂಟ್ ಇಂಜಿನಿಯರ್ ಪ್ರವೀಣ್ ಬಿ.ಶ್ರೀಹರಿ, ಕುಂಬಳಗೋಡು ಪಂ. ಪಿಡಿಓ ತಿಮೇಗೌಡರ ತೋಟದ ಮನೆ, ಪಿಡಬ್ಲ್ಯೂಡಿಯ ಕಾರ್ಯಪಾಲಕ ಇಂಜಿನಿಯರ್ ನರೇಂದ್ರಕುಮಾರ್ ಅವರ ನಿವಾಸದಲ್ಲೂ ಕೂಡಾ ಅಪಾರ ಪ್ರಮಾಣದ ಸಂಪತ್ತು ಪತ್ತೆಯಾಗಿದೆ.

## ಪ್ರಧಾನಿ ಮೋದಿ ಅವರಿಂದ ಪತ್ರ ಸ್ವೀಕರಿಸಿದ ವೀರಣ್ಣ ಕಾರಬಾರಿ; ಕೃತಜ್ಞತೆ ಸಲ್ಲಿಕೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮಾನ್ಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಉದ್ದೇಶಿಸಿ ಕಳುಹಿಸಲಾದ ಪತ್ರ ಸ್ವೀಕರಿಸಿರುವುದಾಗಿ ತಿಳಿಸಿದ ಬಿಜೆಪಿ ಕಾರ್ಯಕರ್ತರು, ಇದನ್ನು ತಮ್ಮ ಜೀವನದ ಅತ್ಯಂತ ಸಂತಸದ ಹಾಗೂ ಪ್ರೇರಣಾದಾಯಕ ಕ್ಷಣವೆಂದು ಬಣ್ಣಿಸಿದ್ದಾರೆ.

ಪ್ರಧಾನಿಯವರು ಕಳುಹಿಸಿರುವ ಪತ್ರದಲ್ಲಿ ಶುಭಾಶಯಗಳನ್ನು ಸ್ವೀಕರಿಸಿ ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸುವುದರ ಜೊತೆಗೆ, "ವಿಕಸಿತ ಭಾರತ–2047" ಸಂಕಲ್ಪವನ್ನು ಸಾಕಾರಗೊಳಿಸಲು ಪ್ರತಿಯೊಬ್ಬರೂ ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿರುವುದಾಗಿ ಅವರು ತಿಳಿಸಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿದ ವೀರಣ್ಣ ಕಾರಬಾರಿ ಅವರು, "ದೇವದುರ್ಲಭ ಕಾರ್ಯಕರ್ತ" ಎನ್ನುವುದು ಕೇವಲ ಪದವಲ್ಲ; ಕಾರ್ಯಕರ್ತರ ಪರಿಶ್ರಮ, ನಿಷ್ಠೆ ಮತ್ತು ಭಾವನೆಗಳಿಗೆ ಗೌರವ ನೀಡಿ ಅವರನ್ನು ಸದಾ ಪ್ರೋತ್ಸಾಹಿಸುವ ನಾಯಕತ್ವವೇ ಅದರ ನಿಜವಾದ ಅರ್ಥ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕಾರ್ಯವೈಖರಿ ಮತ್ತು ಕಾರ್ಯಕರ್ತರ ಮೇಲಿನ ವಿಶ್ವಾಸವು ಭಾರತೀಯ ಜನತಾ ಪಕ್ಷದ ಸಂಘಟನಾ ಸಂಸ್ಕೃತಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು. ಪ್ರಧಾನಿಯವರ ಪತ್ರವು ತಮ್ಮಲ್ಲಿ ಹೊಸ ಉತ್ಸಾಹ, ಆತ್ಮವಿಶ್ವಾಸ ಮತ್ತು ಜವಾಬ್ದಾರಿಯ ಭಾವನೆ ಮೂಡಿಸಿದ್ದು, ಪಕ್ಷ ಸಂಘಟನೆ, ಸಮಾಜಸೇವೆ ಹಾಗೂ ವಿಕಸಿತ ಭಾರತ–2047 ಸಂಕಲ್ಪವನ್ನು ಸಾಕಾರಗೊಳಿಸಲು ಇನ್ನಷ್ಟು ಸಮರ್ಪಣೆಯಿಂದ ಕಾರ್ಯನಿರ್ವಹಿಸುವ ಸಂಕಲ್ಪವನ್ನು ಬಲಪಡಿಸಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿ, "ಭಾರತ ಮಾತಾ ಕೀ ಜೈ" ಹಾಗೂ "ವಂದೇ ಮಾತರಂ" ಘೋಷಣೆಗಳೊಂದಿಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

# ನೂತನ ಆಯುಕ್ತ ಅನುಚೇತ್‌ಗೆ ಸಂಪಾದಕರಿಂದ ಗೌರವ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿರುವ ಹಿರಿಯ ಐಪಿಎಸ್ ಅಧಿಕಾರಿ ಎಂ. ಎನ್. ಅನುಚೇತ್, ಐಪಿಎಸ್ ಅವರಿಗೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆ ಸಂಪಾದಕರ ಸಂಘದ ಬೀದರ್ ಜಿಲ್ಲಾ ಘಟಕದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಿ, ಸನ್ಮಾನಿಸಲಾಯಿತು.

**ಬೇಡಿಕೆಗಳ ಮನವಿ ಪತ್ರ:** ಬೆಂಗಳೂರಿನ ವಾರ್ತಾ ಇಲಾಖೆಯ ಕಚೇರಿಯಲ್ಲಿ ನೂತನ ಆಯುಕ್ತರನ್ನು ಭೇಟಿಯಾದ ಸಂಘದ ನಿಯೋಗವು, ಅವರಿಗೆ ಹೂಗುಚ್ಛ ನೀಡಿ ಶುಭ ಕೋರಿತು. ಇದೇ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ಪತ್ರಿಕಾ ಭವನದ ನಿರ್ವಹಣೆಗೆ ಸಂಬಂಧಿಸಿದಂತೆ ಪ್ರಮುಖ ಬೇಡಿಕೆಗಳನ್ನೊಳಗೊಂಡ ಮನವಿ ಪತ್ರವನ್ನು ಸಲ್ಲಿಸಲಾಯಿತು.

**ಅಗತ್ಯ ಸಹಕಾರಕ್ಕೆ ಒತ್ತಾಯ:** ಬೀದರ್ ಜಿಲ್ಲೆಯ ಪತ್ರಿಕಾ ಭವನವು ಎಲ್ಲಾ ಸಂಘಟನೆಗಳ ಮಾನ್ಯತೆ ಪಡೆದ ಪತ್ರಕರ್ತರ ನಿರ್ವಹಣಾ ಸಮಿತಿಯನ್ನು ಹೊಂದಿದೆ. ಪ್ರಸ್ತುತ ಇರುವ ಸಮಿತಿ ಒಳ್ಳೆಯ ಕೆಲಸ ಮಾಡುತ್ತ ಬಂದಿದೆ. ಮುಂದೆಯೂ ಮುಂದುವರಿಸಿಕೊಂಡು ಹೋಗಬೇಕು ಮತ್ತು ಇದರಲ್ಲಿ ಕೆಲವು ಸಂಘಟನೆಗಳ ಮುಖಂಡರು ಮತ್ತು ಮಾನ್ಯತೆ ಹೊಂದಿದ ಪತ್ರಕರ್ತರ ನ್ನೊಳಗೊಂಡ ಸಮಿತಿ ರಚಿಸಿ ಪತ್ರಿಕಾ ಭವನದ ಸುಗಮ ನಿರ್ವಹಣೆಗೆ ಇಲಾಖೆಯಿಂದ ಅಗತ್ಯ ಸಹಕಾರ ನೀಡಬೇಕು ಎಂದು ನಿಯೋಗವು ಒತ್ತಾಯಿಸಿತು. ಇಲಾಖೆಯ ಹಿರಿಯ ಅಧಿಕಾರಿಗಳಾದ ಮಂಜುನಾಥ್ ಡೊಳ್ಳಿನ್, ರಾಮಲಿಂಗಪ್ಪ, ಸಂಘದ ಪ್ರಮುಖರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಪತ್ರಿಕಾ ಭವನ ನಿರ್ವಹಣೆ ಕುರಿತು ಮನವಿ**





### ಪತ್ರಕರ್ತರ ಬೇಡಿಕೆಗಳಿಗೆ ಸಕಾರಾತ್ಮಕ ಸ್ಪಂದನೆ

ಬೀದರ್ ಜಿಲ್ಲೆಯ ಹಿಂದಿನ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿಯೇ ಈ ನಿರ್ವಹಣಾ ಸಮಿತಿಯನ್ನು ರಚಿಸಲಾಗಿತ್ತು. ಆದರೆ ಈಗ ಕೆಲವು ಸಂಘಟನೆಗಳು ಪತ್ರಿಕಾ ಭವನದ ಕುರಿತು ಬೇರೆ ಬೇರೆ ಬೇಡಿಕೆಗಳನ್ನು ಸಲ್ಲಿಸುತ್ತಿವೆ. ಪ್ರಸ್ತುತ ಪತ್ರಿಕಾ ಭವನದ ನಿರ್ವಹಣೆಗೆ ಸಂಬಂಧಿಸಿದ ನಮ್ಮ ಈ ಪ್ರಮುಖ ಬೇಡಿಕೆಯು ಯಾವುದೇ ಒಂದು ನಿರ್ದಿಷ್ಟ ಸಂಘಕ್ಕೆ ಮಾತ್ರ ಸೀಮಿತವಾಗಿದ್ದಲ್ಲ, ಬದಲಿಗೆ ಇದು ಇಡೀ ಜಿಲ್ಲೆಯ ಎಲ್ಲಾ ಪತ್ರಕರ್ತರ ಹಿತದೃಷ್ಟಿಯಿಂದ ಕೂಡಿದಾಗಿದೆ ಎನ್ನುವುದನ್ನು ನಿಯೋಗವು ಆಯುಕ್ತರ ಮುಂದೆ ಸ್ಪಷ್ಟಪಡಿಸಿತು. ಮನವಿ ಸ್ವೀಕರಿಸಿದ ಆಯುಕ್ತ ಎಂ. ಎನ್. ಅನುಚೇತ್ ಅವರು, ಪತ್ರಕರ್ತರ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವುದಾಗಿ ಭರವಸೆ ನೀಡಿದರು.

### ನಿಯೋಗದಲ್ಲಿದ್ದ ಜಿಲ್ಲೆಯ ಗಣ್ಯರು

ನಿಯೋಗದಲ್ಲಿ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ, ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಂಘದ ಅಧ್ಯಕ್ಷ ಬಾಬುವಾಲಿ, ಹಿರಿಯ ಸಂಪಾದಕ ಡಾ.ರಜನೀಶ ವಾಲಿ, ಸಯ್ಯದ್ ಉಲ್ ಶಾಖಾದ್ರಿ, ಮಾಳಪ್ಪ ಅಡಸಾರೆ, ರಾಜ್ಯ ಸಂಘಟನಾ ಕಾರ್ಯದರ್ಶಿ ರಮೇಶ ರಡ್ಡಿ, ರಾಜ್ಯ ಪ್ರತಿನಿಧಿ ಅಜಯ ಭೋಸ್ಲೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಶಿಕುಮಾರ ಪಾಟೀಲ, ಶ್ರೀನಿವಾಸ ಚೌಧರಿ, ಅಬ್ದುಲ್ ಖದೀರ ಸೇರಿ ಅನೇಕರು ಉಪಸ್ಥಿತರಿದ್ದರು.

## ಬೆಂಗಳೂರಿನಾಚೆಗೆ ಮತ್ತಷ್ಟು ಹೊಸ ಬೆಂಗಳೂರುಗಳ ನಿರ್ಮಾಣ: ಸಿಎಂ ಡಿಕೆ ಶಿವಕುಮಾರ್

# ಚುನಾಯಿತ ಜನಪ್ರತಿನಿಧಿಗಳು ಗ್ರಾಮೀಣ ಭಾಗದ ಜನರ ನೆರವಿಗೆ ಬರಬೇಕು

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಆಶೋತ್ತರಗಳಿಗೆ ಸ್ಪಂದಿಸುವ ಜವಾಬ್ದಾರಿ ಚುನಾಯಿತ ಜನಪ್ರತಿನಿಧಿಗಳ ಮೇಲಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು, ರಸ್ತೆ, ಆರೋಗ್ಯ, ಶಿಕ್ಷಣ, ಕೃಷಿ, ವಿದ್ಯುತ್ ಸೇರಿದಂತೆ ಅನೇಕ ಮೂಲಭೂತ ಸಮಸ್ಯೆಗಳು ಇಂದಿಗೂ ಜನರನ್ನು ಕಾಡುತ್ತಿವೆ. ಇಂತಹ ಸಂದರ್ಭದಲ್ಲಿ ಚುನಾಯಿತ ಜನಪ್ರತಿನಿಧಿಗಳು ಕೇವಲ ಚುನಾವಣೆ ಸಮಯದಲ್ಲಿ ಮಾತ್ರವಲ್ಲದೆ, ವರ್ಷಪೂರ್ತಿ ಗ್ರಾಮಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸಿ ಶಾಶ್ವತ ಪರಿಹಾರ ಕಲ್ಪಿಸುವ ಕೆಲಸ ಮಾಡಬೇಕು.

## ಸಂಪಾದಕೀಯ


ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349




ರೈತರು ಮಳೆ ಕೊರತೆ, ಬೆಳೆ ನಷ್ಟ ಹಾಗೂ ಆರ್ಥಿಕ ಸಂಕಷ್ಟದಿಂದ ತತ್ತರಿಸುತ್ತಿದ್ದಾರೆ. ನಿರುದ್ಯೋಗ, ಮೂಲಸೌಕರ್ಯಗಳ ಕೊರತೆ ಮತ್ತು ಅಭಿವೃದ್ಧಿ ಕಾಮಗಾರಿಗಳ ವಿಳಂಬದಿಂದ ಗ್ರಾಮೀಣ ಜನರ ಬದುಕು ಸಂಕಷ್ಟದಲ್ಲಿದೆ. ಈ ಸಮಸ್ಯೆಗಳ ಪರಿಹಾರಕ್ಕೆ ಜನಪ್ರತಿನಿಧಿಗಳು ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ತ್ವರಿತ ಕ್ರಮ ಕೈಗೊಳ್ಳಬೇಕು.

ಜನರು ತಮ್ಮ ಅಭಿವೃದ್ಧಿಗಾಗಿ ವಿಶ್ವಾಸವಿಟ್ಟು ಆಯ್ಕೆ ಮಾಡಿದ ಪ್ರತಿನಿಧಿಗಳು ಜನರ ನಡುವೆ ಸದಾ ಲಭ್ಯರಾಗಿ, ಅವರ ಕಷ್ಟ–ಸುಖಗಳಲ್ಲಿ ಭಾಗಿಯಾಗುವುದು ಪ್ರಜಾಪ್ರಭುತ್ವದ ನಿಜವಾದ ಅರ್ಥವಾಗಿದೆ. ಗ್ರಾಮೀಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿ, ಜನರ ವಿಶ್ವಾಸ ಉಳಿಸಿಕೊಳ್ಳುವ ರೀತಿಯಲ್ಲಿ ಕಾರ್ಯನಿರ್ವಹಿಸುವುದು ಪ್ರತಿಯೊಬ್ಬ ಚುನಾಯಿತ ಜನಪ್ರತಿನಿಧಿಯ ಕರ್ತವ್ಯವಾಗಿದೆ.



# ಹೆಣ್ಣುಮಕ್ಕಳನ್ನು ಚುಡಾಯಿಸಿದ ಆರೋಪ: ಬೀದರ್‌ನಲ್ಲಿ ಯುವಕನ ಭೀಕರ ಕೊಲೆ




**ಬೀದರ್:** ಜಿಲ್ಲೆಯಲ್ಲಿ ತಡರಾತ್ರಿ ಭೀಕರ ಕೊಲೆ ಪ್ರಕರಣವೊಂದು ಬೆಳಕಿಗೆ ಬಂದಿದೆ. ಹಳೆಯ ವೈಷಮ್ಯ ಹಾಗೂ ಹೆಣ್ಣುಮಕ್ಕಳನ್ನು ಚುಡಾಯಿಸಿದ ಆರೋಪದ ಹಿನ್ನೆಲೆಯಲ್ಲಿ, ಪಲ್ಸರ್ ಬೈಕ್ ಮೇಲೆ ತೆರಳುತ್ತಿದ್ದ ಯುವಕನೊಬ್ಬನನ್ನು ನಡುರಸ್ತೆಯಲ್ಲೇ ಅಡ್ಡಗಟ್ಟಿ ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಹತ್ಯೆ ಮಾಡಲಾಗಿದೆ.

ಈ ಘಟನೆಯು ಸ್ಥಳೀಯವಾಗಿ ತೀವ್ರ ಆತಂಕ ಹಾಗೂ ಸಂಚಲನ ಮೂಡಿಸಿದೆ.

**ಜಮಿಸ್ತಾನಪುರ ಗ್ರಾಮದಲ್ಲಿ ನಡೆದ ಘೋರ ಕೃತ್ಯ**

ಬೀದರ್ ತಾಲೂಕಿನ ಜಮಿಸ್ತಾನಪುರ ಗ್ರಾಮದಲ್ಲಿ ಈ ಭೀಕರ ಹತ್ಯೆ ನಡೆದಿದೆ. ಗ್ರಾಮದ ನಿವಾಸಿ ಕಿರಣ್‌ಕುಮಾರ್ (26) ಕೊಲೆಯಾದ ದುರ್ದೈವಿ ಎಂದು ಗುರುತಿಸಲಾಗಿದೆ. ನಿನ್ನೆ ಸಂಜೆ ವೇಳೆ ಪಲ್ಸರ್ ಬೈಕ್ ಮೇಲೇರಿ ಹೋಗುತ್ತಿದ್ದ ಕಿರಣ್‌ಕುಮಾರ್‌ನನ್ನು ಹೊಂಚು ಹಾಕಿ ಕುಳಿತಿದ್ದ ಹಂತಕರ ತಂಡವೊಂದು ಅಡ್ಡಗಟ್ಟಿದೆ. ಆತನ ಮೇಲೆ ಏಕಾಏಕಿ ಮಾರಕಾಸ್ತ್ರಗಳಿಂದ ಭೀಕರವಾಗಿ ದಾಳಿ ನಡೆಸಿ, ರಕ್ತದ ಮಡುವಿನಲ್ಲಿ ಒದ್ದಾಡಿ ಪ್ರಾಣ ಬಿಡುವಂತೆ ಮಾಡಿ ಹಂತಕರು ಸ್ಥಳದಿಂದ ಪರಾರಿಯಾಗಿದ್ದಾರೆ.

**ಸಂಧಾನಕ್ಕೆಂದು ಕರೆದು ಕೊಲೆ ಮಾಡಿದರು' ಎಂದು ಕಣ್ಣೀರಿಟ್ಟ ಕುಟುಂಬಸ್ಥರು**

ಮೃತನ ಕುಟುಂಬಸ್ಥರು ನೀಡಿರುವ ಮಾಹಿತಿಯ ಪ್ರಕಾರ, ಕಳೆದ ಮೂರು ದಿನಗಳ ಹಿಂದೆ "ನಮ್ಮ ಮನೆಯ ಹೆಣ್ಣುಮಕ್ಕಳನ್ನು ನೀನು ಚುಡಾಯಿಸುತ್ತಿದ್ದೀಯಾ" ಎಂದು ಆರೋಪಿಸಿ ಕೆಲವು ವ್ಯಕ್ತಿಗಳು ಕಿರಣಕುಮಾರ್‌ಗೆ ತೀವ್ರವಾಗಿ ಧಮ್ಕಿ ಹಾಕಿದ್ದರು. ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿ ಗೊಂದಲ ಬಗೆಹರಿಸಿಕೊಳ್ಳೋಣ ಎಂದು ನಿನ್ನೆ ಸಂಜೆ 5 ಗಂಟೆಗೆ ಕಿರಣ್‌ಕುಮಾರ್‌ನನ್ನು ಸಂಧಾನಕ್ಕಾಗಿ ಕರೆಯಲಾಗಿತ್ತು. ಆದರೆ, ಅಲ್ಲಿಗೆ ಹೋದ ತನ್ನ ಮಗನನ್ನು ಕ್ರೂರವಾಗಿ ಕೊಲೆ ಮಾಡಲಾಗಿದೆ ಎಂದು ಪೋಷಕರು ಕಣ್ಣೀರು ಹಾಕುತ್ತಾ ನ್ಯಾಯಕ್ಕಾಗಿ ಆಗ್ರಹಿಸಿದ್ದಾರೆ.

**ಎಂ.ಡಿ.ಜುನೈದ್ ಸಿರಾಜ್ ಸೇರಿ ನಾಲ್ವರ ವಿರುದ್ಧ ಪ್ರಕರಣ ದಾಖಲು**

ಘಟನೆಯ ಕುರಿತು ಮಾಹಿತಿ ತಿಳಿಯುತ್ತಿದ್ದಂತೆಯೇ ಬೀದರ್ ಗ್ರಾಮೀಣ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತನ ಕುಟುಂಬದವರು ನೀಡಿದ ದೂರಿನ ಮೇರೆಗೆ ಪೊಲೀಸರು ಎಂ.ಡಿ. ಜುನೈದ್ ಸಿರಾಜ್ ಸೇರಿದಂತೆ ಒಟ್ಟು ನಾಲ್ಕು ಜನರ ವಿರುದ್ಧ ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸದ್ಯಕ್ಕೆ ತಲೆಮರೆಸಿಕೊಂಡಿರುವ ಆರೋಪಿಗಳ ಬಂಧನಕ್ಕಾಗಿ ಬೀದರ್ ಗ್ರಾಮೀಣ ಪೊಲೀಸರು ವಿಶೇಷ ತಂಡಗಳನ್ನು ರಚಿಸಿದ್ದು, ತೀವ್ರ ಶೋಧ ಕಾರ್ಯ ಕೈಗೊಂಡಿದ್ದಾರೆ.

# ವಿಶ್ವವಿದ್ಯಾಲಯದಲ್ಲಿ ಎರಡು ದಿನದ ಕಾರ್ಯಾಗಾರಕ್ಕೆ ಚಾಲನೆ






• ಮಲ್ಲಮ್ಮ ನುಡಿ ವಾರ್ತೆ ಬೀದರ್

ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗ ಹಾಗೂ ಅರ್ಥಶಾಸ್ತ್ರ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ "ಇತ್ತೀಚಿನ ಸಂಶೋಧನಾ ವಿಧಾನಗಳ ಪ್ರವೃತ್ತಿಗಳು ಹಾಗೂ ಸಂಖ್ಯಾಶಾಸ್ತ್ರೀಯ ಸಾಧನಗಳ ಬಳಕೆ" (Recent Trends in Research Methodology and Usage of Statistical Tools) ವಿಷಯದ ಕುರಿತು ಎರಡು ದಿನಗಳ ಕಾರ್ಯಾಗಾರವು ಇಂದು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ವಿಜೃಂಭಣೆಯಿಂದ ಉದ್ಘಾಟನೆಯಾಯಿತು.

ಕಾರ್ಯಕ್ರಮವನ್ನು ಮಾನ್ಯ ಕುಲಪತಿಗಳು ಪ್ರೊ. ಬಿ. ಎಸ್. ಬಿರಾದಾರ್ ಅವರು ಉದ್ಘಾಟಿಸಿ ಮಾತನಾಡಿ, ಗುಣಮಟ್ಟದ ಸಂಶೋಧನೆಗೆ ವೈಜ್ಞಾನಿಕ ಸಂಶೋಧನಾ ವಿಧಾನಗಳು ಹಾಗೂ ಸಂಖ್ಯಾಶಾಸ್ತ್ರೀಯ ವಿಶ್ಲೇಷಣಾ ಸಾಧನಗಳ ಸಮರ್ಪಕ ಬಳಕೆ ಅತ್ಯಗತ್ಯವಾಗಿದೆ ಎಂದು ತಿಳಿಸಿದರು. ಇಂದಿನ ಸ್ಪರ್ಧಾತ್ಮಕ ಹಾಗೂ ಜಾಗತಿಕ ಶೈಕ್ಷಣಿಕ ವಾತಾವರಣದಲ್ಲಿ ಸಂಶೋಧಕರು ನವೀನ ತಂತ್ರಜ್ಞಾನ ಮತ್ತು ಆಧುನಿಕ ಸಂಖ್ಯಾಶಾಸ್ತ್ರೀಯ ತಂತ್ರಾಂಶಗಳ ಜ್ಞಾನವನ್ನು ಅಳವಡಿಸಿಕೊಳ್ಳುವುದು ಕಾಲದ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಬೀದರ್ ವಿಶ್ವವಿದ್ಯಾಲಯದ ಕುಲಸಚಿವರು ಪ್ರೊ. ಪರಮೇಶ್ವರ್ ನಾಯಕ್ ಅವರು

ದತ್ತಾಂಶ ಸಂಗ್ರಹಣೆ, ವಿಶ್ಲೇಷಣೆ ಹಾಗೂ ಸಂಖ್ಯಾಶಾಸ್ತ್ರೀಯ ಸಾಧನಗಳ ಬಳಕೆಯ ಮಹತ್ವವನ್ನು ವಿವರಿಸಿದರು. ವಿಶ್ವವಿದ್ಯಾಲಯವು ಸಂಶೋಧನಾ ಸಂಸ್ಕೃತಿಯನ್ನು ಬಲಪಡಿಸಲು ಇಂತಹ ಶೈಕ್ಷಣಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುತ್ತದೆ ಎಂದು ತಿಳಿಸಿದರು. ಬೀದರ್ ವಿಶ್ವವಿದ್ಯಾಲಯದ ವಿಜ್ಞಾನ ನಿಕಾಯದ ಡೀನರು ಹಾಗೂ ವಿಶೇಷ ಅಧಿಕಾರಿಗಳು ಡಾ. ರವೀಂದ್ರನಾಥ್ ಗಬಾಡಿ ಹಾಗೂ ವಾಣಿಜ್ಯ ನಿಕಾಯದ ಡೀನರು ಡಾ. ಶರಣಪ್ಪ ಮಲ್ಗೊಂಡ ಅವರು ಗೌರವ ಉಪಸ್ಥಿತಿ ನೀಡಿದರು. ಕಾರ್ಯಾಗಾರದ ಸಂಯೋಜಕರಾದ ಡಾ. ಅಂಬರೀಶ್ ವೀರನಾಯಕ್ ಅವರು ಅತಿಥಿಗಳ ಪರಿಚಯ ನೀಡಿ, ಕಾರ್ಯಾಗಾರದ ಉದ್ದೇಶ ಹಾಗೂ ಎರಡು ದಿನಗಳ ಕಾರ್ಯಕ್ರಮಗಳ ರೂಪರೇಖೆಯನ್ನು ಪರಿಚಯಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ಪ್ರೊ. ಬಿ.ಟಿ. ಸಂಪತ್ ಕುಮಾರ್ ಹಿರಿಯ ಪ್ರಾಧ್ಯಾಪಕರು ತುಮಕೂರು ವಿಶ್ವವಿದ್ಯಾಲಯ ತುಮಕೂರು ಅವರು ಸಂಶೋಧನಾ ಪ್ರಬಂಧಗಳ ಗುಣಮಟ್ಟ ಹೆಚ್ಚಿಸಲು ಸೂಕ್ತ ಸಂಶೋಧನಾ ವಿನ್ಯಾಸ, ಸಂಶೋಧನೆಯಲ್ಲಿ ನೈತಿಕತೆ, ನಿಖರತೆ ಹಾಗೂ ವೈಜ್ಞಾನಿಕ ದೃಷ್ಟಿಕೋನಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಕಾರ್ಯಾಗಾರದ ಇನ್ನೂರುವ ಸಂಯೋಜಕರಾದ ಡಾ. ಶಿವಕುಮಾರ್ ಹೂಗಾರ್ ಅತಿಥಿಗಳನ್ನು ಸ್ವಾಗತಿದರು.

ವಿವಿಧ ಕಾಲೇಜುಗಳಿಂದ ಆಗಮಿಸಿದ ಅಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತ–ಕೋತ್ತರ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದರು.

ಪ್ರಾಣಿಶಾಸ್ತ್ರ ವಿಭಾಗದ ಉಪನ್ಯಾಸಕಿ ಪ್ರಿಯಾ ಚಂದ್ರಕಾಂತ್ ನಿರೂಪಿಸಿದರು, ಅಫ್ರೋಜ್ ಫಾತಿಮಾ ವಂದನಾರ್ಪಣೆ ಮಾಡಿದರು.

# 11ರಂದು ಮಹಮೂದ್ ಗವಾನ್ ಐತಿಹಾಸಿಕ ನಾಟಕ ಪ್ರದರ್ಶನ: ಡಾ.ಅಬ್ದುಲ್ ಖದಿರ್

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಶಾಹೀನ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಹಾಗೂ ಬೆಂಗಳೂರಿನ ಕಥ್‌ಪುತ್ಲಿಯಾನ್ ಥಿಯೇಟರ್ ಗ್ರೂಪ್ (KTG) ಸಂಯುಕ್ತವಾಗಿ "ಮಹಮೂದ್ ಗವಾನ್" ಎಂಬ ಭವ್ಯ ಐತಿಹಾಸಿಕ ನಾಟಕವನ್ನು ಈ ತಿಂಗಳ 11ರಂದು ಸಂಜೆ 7.30 ಗಂಟೆಗೆ ನಗರದ ಹೊರವಲಯದಲ್ಲಿರುವ ಶಹಾಪುರ ಗೇಟ್ ಬಳಿ ಇರುವ ಶಾಹಿನ್ ನಗರದಲ್ಲಿನ ಅಬ್ದುಲ್ ರಹೆಮಾನ್ ಸಭಾಂಗಣದಲ್ಲಿ ಪ್ರಸ್ತುತಪಡಿಸುತ್ತಿವೆ ಎಂದು ಶಾಹಿನ್ ಶಿಕ್ಷಣ ಸಮೂಹ ಸಂಸ್ಥೆಯ ಅಧ್ಯಕ್ಷರಾದ ಡಾ.ಅಬ್ದುಲ್ ಖದೀರ್ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ.ಚಂದ್ರಶೇಖರ ಕಂಬಾರ ಅವರು ರಚಿಸಿರುವ ಈ ನಾಟಕವನ್ನು, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಝುಫರ್ ಮೊಹಿಯುದ್ದೀನ್ ಅವರು ನಿರ್ದೇಶಿಸುತ್ತಿದ್ದಾರೆ ಎಂದು ಹೇಳಿದರು.


ಕಥ್‌ಪುತ್ಲಿಯಾನ್ ಥಿಯೇಟರ್ ಗ್ರೂಪ್‌ನ ಸಂಸ್ಥಾಪಕರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಆಗಿರುವ ಝುಫರ್ ಮೊಹಿಯುದ್ದೀನ್ ಅವರು ಈ ಸಂದರ್ಭದಲ್ಲಿ ಮಾತನಾಡಿ, ತಾನು 1979ರಿಂದ ಉರ್ದು ಹಾಗೂ ಹಿಂದಿ ರಂಗಭೂಮಿಯಲ್ಲಿ ಸಕ್ರಿಯರಾಗಿದ್ದು, ಇದರ ಸೇವೆಗಾಗಿ 2025ರ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಒಲಿದಿದೆ. ಡಾ.ಗಿರಿಶ ಕಾರ್ನಾಡ ಅವರ ಜೊತೆ ಹಲವಾರು ವರ್ಷಗಳ ಕಾಲ ರಂಗಭೂಮಿಯಲ್ಲಿ ತೊಡಗಿದ್ದಾಗಿ ಹೇಳಿದರು.

ಈ ನಾಟಕದಲ್ಲಿ ಸಾಗ್ನಿಕ್ ಸಿನ್ಹಾ ಅವರು 'ಮಹಮೂದ್ ಗವಾನ್' ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಪ್ರತೀಕ ಸುಲ್ತಾನಿಯಾ (ಟರ್ಕ್), ಅಶೋಕ ಧಾರಿವಾಲ್ (ಸೂತ್ರಧಾರ), ರಕ್ಷಿತ ರಾವ್ (ನಿಜಾಮ್–ಉಲ್–ಮುಲ್ಕ್), ಹಾಗೂ ಡಾ. ಕವಿತಾ ಅಗರ್ವಾಲ್ (ಬೇಗಂ ನರ್ಗಿಸ್) ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಲಿದ್ದಾರೆ. ಸೃಜನಾತ್ಮಕ ತಂಡದಲ್ಲಿ ಹಿರಿಯ ರಂಗಸಜ್ಜಿಕೆ ತಜ್ಞ ಶಶಿಧರ್ ಅಡಪ, ಬೆಳಕು ವಿನ್ಯಾಸಕಾರ ಪ್ರದೀಪ್ ಬೆಳವಾಡಿ ಮತ್ತು ಸಂಗೀತ ನಿರ್ದೇಶಕ ಉಸ್ತಾದ್ ಫಯಾಜ್ ಖಾನ್ ಕಾರ್ಯನಿರ್ವಹಿಸಿದ್ದು, ಪ್ರೇಕ್ಷಕರಿಗೆ ಅದ್ಭುತ ದೃಶ್ಯ ಹಾಗೂ ಸಂಗೀತದ ಅನುಭವವನ್ನು ನೀಡಲಿದ್ದಾರೆ ಎಂದರು.

ಶಾಹಿನ್ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯೆ ಅಫ್ರಾನಾಝ್ ಮಾತನಾಡಿದರು. ಪ್ರಾಧ್ಯಾಪಕ ಡಾ.ಸಿರಾಜುಲ್ ಹಸನ್ ಪತ್ರಿಕಾಗೋಷ್ಠಿಯಲ್ಲಿದ್ದರು.

# ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ನ್ಯಾಯಾಧೀಶರ ಕರೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ, ತಾಲ್ಲೂಕು ಕಾನೂನು ಸೇವಾ ಸಮಿತಿಯ ವತಿಯಿಂದ ಜುಲೈ 11ರಂದು ನ್ಯಾಯಾಲಯದ ಆವರಣದಲ್ಲಿ 'ರಾಷ್ಟ್ರೀಯ ಲೋಕ ಅದಾಲತ್' ಆಯೋಜಿಸಲಾಗಿದೆ ಎಂದು ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸೋಮಶೇಖರ ಅವರು ತಿಳಿಸಿದರು.

ಮಂಗಳವಾರ ನ್ಯಾಯಾಲಯದ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಲೋಕ ಅದಾಲತ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಈಗಾಗಲೇ ಪೂರ್ವಭಾವಿ ಸಭೆ ನಡೆಸಲಾಗಿದೆ. ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಸಿವಿಲ್, ಕ್ರಿಮಿನಲ್, ಬ್ಯಾಂಕ್ ಪ್ರಕರಣಗಳು, ಪಿಎಲ್‌ಸಿ, ಚೆಕ್ ಬೌನ್ಸ್, ಎಂವಿಸಿ (ಮೋಟಾರ್ ವಾಹನ ಅಪಘಾತ ಪರಿಹಾರ), ವಿದ್ಯುತ್‌ಚ್ಛಕ್ತಿ, ಕಂದಾಯ ಹಾಗೂ ನೀರಿನ ಶುಲ್ಕ ವಸೂಲಾತಿ ಸೇರಿದಂತೆ ರಾಜಿಸಂಧಾನಕ್ಕೆ ಒಳಪಡುವ ಪ್ರಕರಣಗಳನ್ನು ಈ ದಿನದಂದು ಇತ್ಯರ್ಥಪಡಿಸಿಕೊಳ್ಳಲು ವಕೀಲರು ಹಾಗೂ ಕಕ್ಷಿದಾರರು ಸಹಕರಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಸ್ಥಳೀಯ ಆಡಳಿತದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಾಧೀಶರು, "ನಗರಸಭೆ ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿದಾಗ ಅಲ್ಲಿನ ಅವ್ಯವಸ್ಥೆಗಳು ನನ್ನ ಗಮನಕ್ಕೆ ಬಂದಿವೆ. ತಾಲ್ಲೂಕು ಆಡಳಿತ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ. ಇಂತಹ ಲೋಪದೋಷಗಳಿಂದಾಗಿ ಸಾರ್ವಜನಿಕ ಸಮಸ್ಯೆಗಳು ಹೆಚ್ಚುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದರು.

ನ್ಯಾಯಾಲಯದ ಆವರಣದಲ್ಲಿ ವಾಹನಗಳ ನಿಲುಗಡೆ ಸಮಸ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿ ವಾಹನಗಳನ್ನು ಸುಸೂತ್ರವಾಗಿ ನಿಲ್ಲಿಸಲು ವ್ಯವಸ್ಥೆ ಮಾಡಲಾಗುವುದು ಎಂದರು.

ಈ ಸುದ್ದಿಗೋಷ್ಠಿಯಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶೆ ರೂಪಾ ಸಿ. ವಗ್ಗಾ, ಒಂದನೇ ಅಪರ ಸಿವಿಲ್ ನ್ಯಾಯಾಧೀಶೆ ಸರಸ್ವತಿ ಹೋಟಕರ್, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ. ಭೀಮನಗೌಡ, ಸಹಕಾರ್ಯದರ್ಶಿ ಹೀನಾ ಅಮೀನ್ ದೇಸಾಯಿ, ವಕೀಲರು ಹಾಗೂ ವಿವಿಧ ಬ್ಯಾಂಕ್‌ಗಳ ವ್ಯವಸ್ಥಾಪಕರು ಉಪಸ್ಥಿತರಿದ್ದರು.

# ಸೇಡಂಕರ್ ಆಸ್ಪತ್ರೆಯಲ್ಲಿ ಸ್ವಯಂ–ಪ್ರೇರಿತ ಅಂಗದಾನ






• ಮಲ್ಲಮ್ಮ ನುಡಿ ವಾರ್ತೆ ಬೀದರ್

ನಗರದ ಸೇಡಂಕರ್ ಆಸ್ಪತ್ರೆಯಲ್ಲಿ ಸ್ವಯಂ–ಪ್ರೇರಿತ ಅಂಗದಾನ ಜಾಗೃತಿ ಮತ್ತು ನೋಂದಣಿ ಕೇಂದ್ರವನ್ನು ಉದ್ಘಾಟಿಸಲಾಯಿತು. ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಅಂಗದಾನದ ಮಹತ್ವ ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಹೀಮ್ ಖಾನ್, ಆಸ್ಪತ್ರೆ ಮುಖ್ಯಸ್ಥರಾದ ಡಾ. ರಾಜಶೇಖರ ಸೇಡಂಕರ್, ಶಾಹೀನ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಅಬ್ದುಲ್ ಖದೀರ್, ಬೀದರ್ ಜಿಲ್ಲಾ ಒಬಿಸಿ ಒಕ್ಕೂಟದ ಗೌರವಾಧ್ಯಕ್ಷ ಬಸವರಾಜ ಮಾಳಗೆ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಸುರೇಶ್ ಚನಶೆಟ್ಟಿ, ರೋಟರಿ ಕಲ್ಯಾಣ ವಲಯದ ಮಾಜಿ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಜಿಲ್ಲಾ ಒಬಿಸಿ ಘಟಕದ ಅಧ್ಯಕ್ಷ ತಾನಾಜಿ ಸಗರ್, ದಕ್ಷಿಣ ಘಟಕದ ಅಧ್ಯಕ್ಷ ಸುನಿಲ್ ಖಾಶಂಪುರ್, ಪ್ರಧಾನ ಕಾರ್ಯದರ್ಶಿ ರಾಜಕುಮಾರ್ ಟಿಲೆಕರ್, ಸಾಯಿಕುಮಾರ್ ಘೋಡ್ಕೆ, ವೈಜಿನಾಥ್ ಪೋಲ್, ರಮೇಶ್ ಪೋಲ್, ಮೊಹಮ್ಮದ್ ಜಾವೇದ್ ಸೇರಿದಂತೆ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಅಂಗದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ಭಾರತದಲ್ಲಿ ಮೂತ್ರಪಿಂಡ, ಯಕೃತ್ತು, ಹೃದಯ, ಶ್ವಾಸಕೋಶ, ಮೇದೋಜೀರಕ ಗ್ರಂಥಿ ಹಾಗೂ ಕರುಳಿನ ಕಸಿ ಕಾನೂನುಬದ್ಧವಾಗಿ ನಡೆಯುತ್ತಿದ್ದು, ಅಂಗಾಂಗಗಳ ಹಂಚಿಕೆಯನ್ನು ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಂಗಾಂಗ ಕಸಿ ಸಂಸ್ಥೆಗಳು ವೈದ್ಯಕೀಯ ಆದ್ಯತೆ, ರಕ್ತದ ಗುಂಪು, ಹೊಂದಾಣಿಕೆ ಹಾಗೂ ಕಾಯುವ ಅವಧಿಯ ಆಧಾರದ ಮೇಲೆ ನಡೆಸುತ್ತವೆ ಎಂದು ತಿಳಿಸಲಾಯಿತು.

**ಭಾರತದಲ್ಲಿ ಸಾಮಾನ್ಯವಾಗಿ ಕಸಿ ಮಾಡಲಾಗುವ ಅಂಗಗಳು:** ಮೂತ್ರಪಿಂಡ (ಜೀವಂತ ಅಥವಾ ಮೃತ ದಾನಿಗಳಿಂದ) ಯಕೃತ್ತು (ಜೀವಂತ ಅಥವಾ ಮೃತ ದಾನಿಗಳು) ಹೃದಯ (ಮೃತ ದಾನಿಗಳು ಮಾತ್ರ) ಶ್ವಾಸಕೋಶ (ಮೃತ ದಾನಿಗಳು ಮಾತ್ರ) ಮೇದೋಜೀರಕ ಗ್ರಂಥಿ (ಮೃತ ದಾನಿಗಳು ಮಾತ್ರ) ಕರುಳು (ಅಪರೂಪದ, ಮೃತ ದಾನಿಗಳು)

ಭಾರತದಲ್ಲಿ ಅಂಗಾಂಗ ಹಂಚಿಕೆಯನ್ನು ರಾಷ್ಟ್ರೀಯ ಅಂಗ ಮತ್ತು ಅಂಗಾಂಶ ಕಸಿ ಸಂಸ್ಥೆ ಮತ್ತು ರಾಜ್ಯ ಮಟ್ಟದ ಅಂಗಾಂಗ ಕಸಿ ಸಂಸ್ಥೆಗಳ ಅಡಿಯಲ್ಲಿ ನಿಯಂತ್ರಿಸಲಾಗುತ್ತದೆ. ಮೃತ ದಾನಿಗಳ ಅಂಗಗಳನ್ನು ವೈದ್ಯಕೀಯ ತುರ್ತುಸ್ಥಿತಿ, ಹೊಂದಾಣಿಕೆ, ರಕ್ತದ ಗುಂಪು, ಕಾಯುವ ಸಮಯ ಮತ್ತು ಇತರ ವೈದ್ಯಕೀಯ ಮಾನದಂಡಗಳ ಆಧಾರದ ಮೇಲೆ ಹಂಚಲಾಗುತ್ತದೆ – ಪಾವತಿ ಅಥವಾ ವೈಯಕ್ತಿಕ ಆದ್ಯತೆಯ ಮೇಲೆ ಅಲ್ಲ.

ದೇಶದಲ್ಲಿ ವಿಶೇಷವಾಗಿ ಮೂತ್ರಪಿಂಡ ಹಾಗೂ ಯಕೃತ್ತಿನಂತಹ ಅಂಗಗಳಿಗೆ ಬೇಡಿಕೆ ಹೆಚ್ಚಿದ್ದು, ಸಾವಿರಾರು ರೋಗಿಗಳು ಅಂಗಾಂಗ ಕಸಿಗಾಗಿ ಕಾಯುವ ಪಟ್ಟಿಯಲ್ಲಿದ್ದಾರೆ. ಜೀವಂತ ದಾನವನ್ನು ಕೆಲವು ಅಂಗಗಳಿಗೆ ಮಾತ್ರ ಅನುಮತಿಸಲಾಗಿದ್ದು, ಮಾನವ ಅಂಗಾಂಗಗಳ ಖರೀದಿ ಮತ್ತು ಮಾರಾಟವು ಕಾನೂನುಬಾಹಿರವಾಗಿದೆ ಎಂದು ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು.


ಅಂಗದಾನದ ಕುರಿತು ಜನರಲ್ಲಿ ಜಾಗೃತಿ ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಪ್ರೇರಿತ ನೋಂದಣಿಗೆ ಮುಂದಾಗುವಂತೆ ಕಾರ್ಯಕ್ರಮದಲ್ಲಿ ಕರೆ ನೀಡಲಾಯಿತು.



ಬಸವಕಲ್ಯಾಣ :– ಎಂ.ಬಿ.ಬಿ.ಎಸ್. ಪದವಿ ಪಡೆದ ಹಾರಕೂಡ ಗ್ರಾಮದ ಡಾ।। ಜ್ಞಾನೇಶ್ವರಿ ಶರಣಬಸಪ್ಪ ಹತ್ತೆ ಅವರಿಗೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಹಾರಕೂಡ ಶ್ರೀಮಠದಲ್ಲಿ ಸತ್ಕರಿಸಿ ಆಶೀರ್ವದಿಸಿದರು. ಶರಣಬಸಪ್ಪ ಹತ್ತೆ, ಶೋಭಾವತಿ ಎಸ್. ಹತ್ತೆ, ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸಡಗರ ಸಂಭ್ರಮದಿಂದ ಸೈಯದಾ ಮರ್ಹಾ ಖಾದ್ರಿಯವರ ಬಿಸ್ಮಿಲ್

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕ ಪ್ರಧಾನ ಕಾರ್ಯದರ್ಶಿ ಸೈಯದ್ ಮುಸ್ತಫಾ ಖಾದ್ರಿಯವರ ಪುತ್ರಿ ಸೈಯದ್ ಮರ್ಹಾ ಖಾದ್ರಿಯವರ ಬಿಸ್ಮಿಲ್ ಸಮಾರಂಭವು ತಾಲೂಕಿನ ಬೆಳಕೇರಾ ಕ್ರಾಸ್ ಹತ್ತಿರ ಇರುವ ದರ್ಗಾ ಪಾಷಾ ತವಕೋಲಿ ಹಜರಾತ್ ಸೈಯದ್ ಅಝೀಜ್ ಅಹ್ಮದ್ ತಾವಾಕಲಿ ಮಿರಜಾಯಿ ಚಿಸ್ತಿ ಖಾದ್ರಿ ಸಾರಥ್ಯದಲ್ಲಿ ನಡೆಯಿತು. ಮುಫ್ತಿ ಮುಹಮ್ಮದ್ ಬಶೀರುದ್ದೀನ್ ನಿಜಾಮಿ ಹುಮನಾಬಾದ್ ಬಿಸ್ಮಿಲ್ಲಾ ಪಠಣ ಹಾಗೂ ಪವಿತ್ರ ಖುರಾನ್ ಪಠಣ ಮಾಡಿದರು. ಬಳಿಕ ಫಾತಿಹಾ ಪಠಿಸಿ ಶೀರ್ಣಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ಜಮೀಯತ್ ಉಲೇಮಾ ಹಿಂದ್ ತಾಲೂಕಾಧ್ಯಕ್ಷ ಮೌಲಾನಾ ಖುರ್ಶಿದ್ ಅಹ್ಮದ್ ಖಾಸ್ಮಿ, ಡಾ. ಮಕಬೂಲ ಅಹ್ಮದ್ ಮಕಬೋಲ, ಪಿಕೆಪಿಎಸ್ ನಿರ್ದೇಶಕ ಸೈಯದ್ ರಶೀದ್ ಅಲಿ ಪಟೇಲ್, ಮಹಮ್ಮದ್ ಮೊಹಿಯುದ್ದೀನ್ ಲಾಥೋಡಿ, ಮಿಯಾಸಾಬ್ ಜಾಮದಾರ, ಮುಹಮ್ಮದ್ ಮಜೀದ್ ತಲಾಬ್ ವಾಲೆ, ಶೇಖ್ ಸೂಫಿ ಸರ್ಮಸ್ತ್, ಮಹಮ್ಮದ್ ಅಯಾಜ್ ಪಾಷಾ, ಸೈಯದ್ ಇಬ್ರಾಹಿಂ, ಸೈಯದ್ ರಿಯಾಜ್ ಪಾಷಾ, ಸೈಯದ್ ಯೂನಸ್ ಖಾದ್ರಿ, ಸೈಯದ್ ಸಾದಿಕ್ ಪಟೇಲ್, ಸೈಯದ್ ಮುನೀರ್ ಪಾಷಾ ತವಕಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಭಗವದರ್ಪಿತ ಭಾವದಿಂದ ಬದುಕು ಸುಂದರ :ಹಾರಕೂಡ ಶ್ರೀ



• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ನಮ್ಮ ದೈನಂದಿನ ಲೋಕ ವ್ಯವಹಾರ ಭಗವದರ್ಪಿತ ಭಾವದಿಂದ ಕೂಡಿದಾಗ ಇಡೀ ಬದುಕು ಸರಳ ಹಾಗೂ ಸುಂದರವಾಗಿ ಮಾರ್ಪಡುತ್ತದೆ ಎಂದು ಹಾರಕೂಡ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ಹಾರಕೂಡ ಶ್ರೀಮಠದಲ್ಲಿ ಗುರುವಂದನೆ ನಿಮಿತ್ಯ ಆಯೋಜಿಸಿದ ಧರ್ಮಸಭೆಯ ಪಾವನ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು, ಭಕ್ತಿ ಶ್ರದ್ಧೆಯಿಂದ ಗುರುವಿನ ಸಾನಿಧ್ಯ ವಹಿಸುವವರು ಭಗವಂತನಿಗೂ ಸಮೀಪವಾಗಿರುತ್ತಾರೆ.

ಗುರುವಿನ ಅಂತ:ಕರಣದ ಆಶೀರ್ವಾದದಿಂದ ಶಿವ ತೇಜಸ್ಸು ಲಭ್ಯವಾಗಿ ನಿರ್ಭೀತ ಸಾತ್ವಿಕ ಬದುಕು ಸಾಗಿಸಲು ಸಾಧ್ಯವಾಗುತ್ತದೆ, ಹಾಗಾಗಿ ಭಾರತ ಈ ಜಗತ್ತಿಗೆ ಗುರು ಪರಂಪರೆ ಎನ್ನುವ ಶ್ರೇಷ್ಠ ಆದರ್ಶವನ್ನು ಕೊಟ್ಟಿದೆ.

ಅಚಲವಾದ ಗುರು ನಿಷ್ಠೆಯಿಂದ ಸಂಕಷ್ಟಗಳನ್ನು ಎದುರಿಸುವ ಆತ್ಮಸ್ಥೈರ್ಯ ಮಾಡಿ ಧೈರ್ಯದಿಂದ ಜೀವನ ಸಾಗಿಸಲು ಸಾಧ್ಯವಾಗುತ್ತದೆ ಎಂದು ನುಡಿದ ಶ್ರೀಗಳು ಸೇರಿರುವ ಸಮಸ್ತ ಭಕ್ತರಿಗೆ ಸನ್ಮಂಗಳವಾಗಲೆಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಜಯಶ್ರೀ ಮಿಣಜಗಿ, ಸವೀತಾ ಸಂಧಿ, ಸಂತೋಷ ಮಿಣಜಗಿ ಹಾಗೂ ಸ್ಮಿತಾ ಬಾಳಿಗಿಡದ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಬಸವರಾಜ ಮಿಣಜಗಿ ಸ್ವಾಗತಿಸಿದರು.

ಕಾರ್ತಿಕ ಸ್ವಾಮಿ ಮತ್ತು ಶರಣಪ್ಪ ಜಮಾದಾರ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು.

ಇದೇ ಸಂದರ್ಭದಲ್ಲಿ ಹಾರಕೂಡ ಶ್ರೀಗಳ 1010ನೇ ತುಲಾಭಾರ ಸೇವೆ ಜರುಗಿತು.

# ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆ ಪತ್ರ ನೀಡಿ: ತಹಶೀಲ್ದಾರ್ ರವೀಂದ್ರ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಮತದಾರರ ಪಟ್ಟಿಯಿಂದ ಅರ್ಹ ನಾಗರಿಕರ ಹೆಸರು ತಪ್ಪದಂತೆ ಪ್ರತಿಯೊಬ್ಬರ ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆ ಪತ್ರ ನೀಡಬೇಕೆಂದು ಬೀದರ್ ತಹಸೀಲ್ದಾರ ರವೀಂದ್ರ ದಾಮಾ ತಿಳಿಸಿದರು. ಬೀದರ್ ತಾಲೂಕಿನ ಬಗದಲ್ ಗ್ರಾಮದಲ್ಲಿ ಮತದಾರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮ ವೀಕ್ಷಣೆ ಮಾಡಿ ಬಿಎಲ್‌ಒ ಅವರು ಮನೆ ಮನೆಗೆ ಭೇಟಿ ನೀಡಿ, ಗಣತಿ ನಮೂನೆ ಪತ್ರ ವಿತರಿಸಬೇಕು ಎಂದು ಸೂಚನೆ ನೀಡಿ ಮಾತನಾಡಿದರು. ಬಿಎಲ್‌ಒ ಅವರು ಶಾಲೆಯಲ್ಲಿ ಕುಳಿತು ಅಥವಾ ತಮ್ಮ ಬಳಿಗೆ ಕರೆಸಿಕೊಂಡು ಗಣತಿ ನಮೂನೆ ಪತ್ರ ವಿತರಿಸಬಾರದು. ಮತದಾರ ಪಟ್ಟಿಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಯಾವುದೇ ಲೋಪದೋಷಗಳಿಲ್ಲದಂತೆ ಪಟ್ಟಿ ತಯಾರಿಸಬೇಕು ಎಂದು ಹೇಳಿದರು. ಕಂದಾಯ ಇಲಾಖೆಯ ಲಕ್ಷ್ಮಣ, ಬಾಲಾಜಿ, ಎಂ.ಡಿ. ಯುನೂಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಅನಾಮಧೇಯ ವ್ಯಕ್ತಿ ಮೃತ: ವಾರಸುದಾರರ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಚಿಕಿತ್ಸೆಗಾಗಿ ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ದಾಖಲಾಗಿದ್ದ ಅನಾಮಧೇಯ ವ್ಯಕ್ತಿಯು ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಕೊಪ್ಪಳ ನಗರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸಪೆಕ್ಟರ್ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.ಜುಲೈ 3 ರಂದು ರಾತ್ರಿ ಸಮಯದಲ್ಲಿ ಸುಮಾರು 50 ರಿಂದ 60 ವಯಸ್ಸಿನ ಅನಾಮಧೇಯ ವ್ಯಕ್ತಿಯು ಯಾವುದೋ ಖಾಯಿಲೆಯಿಂದ ಚಿಕಿತ್ಸೆಗೆ ಕೊಪ್ಪಳ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದು, ಚಿಕಿತ್ಸೆ ಮುಂದುವರೆಯುತ್ತಿದ್ದಾಗ ಜುಲೈ 6 ರಂದು ರಾತ್ರಿ 9 ಗಂಟೆಗೆ ಸುಮಾರಿಗೆ ಚಿಕಿತ್ಸೆ ಫಲಕಾರಿಯಾಗದೇ ವ್ಯಕ್ತಿಯು ಮೃತಪಟ್ಟಿರುತ್ತಾರೆ. ಈ ಮೃತನ ಹೆಸರು ವಿಳಾಸ ಹಾಗೂ ಸಂಬಂಧಿಕರು ಯಾರು ಎಂಬುದು ಪತ್ತೆಯಾಗಿರುವುದಿಲ್ಲ.ಮೃತನ ಚಹರೆ ಪಟ್ಟಿ: ಅನಾಮಧೇಯ ವ್ಯಕ್ತಿ ವಯಸ್ಸು 50 ರಿಂದ 60 ವರ್ಷ, ದುಂಡು ಮುಖ, ಗೋದಿ ಮೈಬಣ್ಣ, ತಲೆಯಲ್ಲಿ ಕಪ್ಪು ಬಿಳಿ ಮಿಶ್ರಿತ ಕೂದಲು ಇದ್ದು, ಒಂದು ಬಳಿ ಲುಂಗಿ, ಬಿಳಿ ಶರ್ಟ್ ಧರಿಸಿರುತ್ತಾರೆ.ಈ ಮೃತನ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ವಾರಸುದಾರರಿದ್ದಲ್ಲಿ ಕೊಪ್ಪಳ ನಗರ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08539–220333, ಪೊಲೀಸ್ ಇನ್ಸಪೆಕ್ಟರ್ ಮೊ.ನಂ: 9480803745 ಅಥವಾ ಪಿ.ಎಸ್.ಐ ಮೊ.ನಂ: 9611589433 ಗೆ ಸಂಪರ್ಕಿಸುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.

# ಎಸ್‌ಐಆರ್: ಕೊಪ್ಪಳ ಜಿಲ್ಲೆಯಲ್ಲಿ ಒಂಬತನೇ ದಿನಕ್ಕೆ 11,51,979 ಗಣತಿ ನಮೂನೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ರ ಮನೆಮನೆ ಭೇಟಿ ಮುಂದುವರೆದಿದ್ದು, ಜೂನ್ 30 ರಿಂದ ಜುಲೈ 8ರ ಸಂಜೆ 06 ಗಂಟೆವರೆಗೆ ಒಟ್ಟು 11,51,979 ಗಣತಿ ನಮೂನೆಗಳನ್ನು ಮತದಾರರಿಗೆ ಹಂಚಿಕೆ ಮಾಡಲಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಒಟ್ಟು 11,90,214 ಮತದಾರರಿದ್ದು, ಈ ಎಲ್ಲಾ ಮತದಾರರ ಮುದ್ರಿತವಾಗಿರುವ ಗಣತಿ ನಮೂನೆಗಳನ್ನು ಈಗಾಗಲೇ ಸಂಬಂಧಪಟ್ಟ ಬೂತ್ ಮಟ್ಟದ ಅಧಿಕಾರಿಗಳಿಗೆ ವಿತರಿಸಲಾಗಿರುತ್ತದೆ. ಇಲ್ಲಿಯವರೆಗೆ ಒಟ್ಟು 11,51,979 ಗಣತಿ ನಮೂನೆಗಳನ್ನು (ಇಟಿಣಟಜಡಿಚಿಣುಂಟಿ ಈಂಡಿಥ) ಮತದಾರರಿಗೆ ಹಂಚಿಕೆ ಮಾಡಲಾಗಿದ್ದು, 2,78,346 ಗಣತಿ ನಮೂನೆಗಳನ್ನು ಡಿಜಿಟಲೀಕರಣ ಮಾಡಲಾಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

# ಬೆಡಕುಂದಾ ಪಿಕೆಪಿಎಸ್ ನೂತನ ಅಧ್ಯಕ್ಷರಾಗಿ ಶ್ರೀಕಾಂತ ಮಡಿವಾಳಪ್ಪ, ಉಪಾಧ್ಯಕ್ಷರಾಗಿ ಲಕ್ಷ್ಮಣರಾವ ಅವಿರೋಧ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಬೇಡಕುಂದಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ನಿಯಮಿತ (ಪಿಕೆಪಿಎಸ್) ಬ್ಯಾಂಕ್‌ನ ಮುಂದಿನ ಅವಧಿಗೆ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಎಂ.ಡಿ. ಫರಾಜ ಅಹ್ಮದ ತಿಳಿಸಿದ್ದಾರೆ.

ಬ್ಯಾಂಕ್‌ನ ನೂತನ ಅಧ್ಯಕ್ಷರಾಗಿ ಶ್ರೀಕಾಂತ ಮಡಿವಾಳಪ್ಪ ಹಾಗೂ ಉಪಾಧ್ಯಕ್ಷರಾಗಿ ಲಕ್ಷ್ಮಣರಾವ ಯಾದವರಾವ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.ನೂತನ ಸದಸ್ಯರ ವಿವರ:

ಬ್ಯಾಂಕ್‌ನ ಆಡಳಿತ ಮಂಡಳಿ ಸದಸ್ಯರುಗಳಾಗಿ ಮಚಿಂದ್ರನಾಥ ಬಾಪೂರಾವ, ಸಂಗಪ್ಪ ಭಗವಂತರಾವ, ರಾಜಕುಮಾರ ದೇವಿದಾಸ, ಭಾನುದಾಸ ಪಾಂಡುರಂಗ, ರಾಜಾರಾಮ ಸಿದ್ರೂ, ಮಹಿಮುದ್ ಹಯಾತ್ ಖಾನ್, ವಿವೇಕಾನಂದ ವರದಾಶಂಕರ, ಅರುಣಾಬಾಯಿ ಕಶಿರಾಮ, ಇಂದುಮತಿ ಸನ್ಮುಖರಾವ ಹಾಗೂ ಮಹಾದೇವ ಕಾಶಿರಾಮ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳ ಅವಿರೋಧ ಆಯ್ಕೆಗೆ ಸಹಕಾರಿ ಕ್ಷೇತ್ರದ ಗಣ್ಯರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿ, ಅಭಿನಂದಿಸಿದ್ದಾರೆ.

# ಭಾಷಾ ಅಧಿನಿಯಮದಂತೆ ನಾಮಫಕಗಳಲ್ಲಿ ಶೇ.೬೦ ರಷ್ಟ ಕನ್ನಡ ಬಳಕೆ ಕಡ್ಡಾಯ: ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಭಾಷಾ ಅಧಿನಿಯಮದಂತೆ ಜಿಲ್ಲೆಯಲ್ಲಿ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಅದರಂತೆ ಜಿಲ್ಲೆಯಲ್ಲಿನ ಎಲ್ಲ ಅಂಗಡಿ ಮುಂಗಟ್ಟುಗಳು, ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷಾ ಬಳಕೆ ಕಡ್ಡಾಯ. ತಪ್ಪಿದಲ್ಲಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಹೇಳಿದರು.ಬುಧವಾರದಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಕನ್ನಡ ಅನುಷ್ಠಾನದ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಸರ್ಕಾರದ ಭಾಷಾ ನೀತಿ ಅನುಷ್ಠಾನದಲ್ಲಿ ಜನರು ಪಾಲ್ಗೊಳ್ಳುವಂತೆ ನೋಡಿಕೊಳ್ಳಲು ಕನ್ನಡ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಿದೆ. ಈ ಪ್ರಾಧಿಕಾರವು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022 ಹಾಗೂ ತಿದ್ದುಪಡಿ ಅಧಿನಿಯಮ 2024 ದಡಿ ಕಾರ್ಯನಿರ್ವಹಿಸುತ್ತದೆ. ಅದರಂತೆ ಕನ್ನಡ ಅನುಷ್ಠಾನ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಳ್ಳುವುದು ಕೂಡ ಪ್ರಮುಖವಾಗಿದೆ. ಇದರ ಅಂಗವಾಗಿ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯಲ್ಲಿ ತೆಗೆದುಕೊಳ್ಳುವ ನಿರ್ಧಾರಗಳು ಕನ್ನಡ ಭಾಷೆ ಅಭಿವೃದ್ಧಿಗೆ ಪೂರಕವಾಗಿರುತ್ತವೆ ಎಂದು ಹೇಳಿದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022ರಂತೆ ಜಿಲ್ಲೆಯ ಎಲ್ಲಾ ನಗರ ಪ್ರದೇಶಗಳಲ್ಲಿ, ಗ್ರಾಮಗಳಲ್ಲಿ ಎಲ್ಲಾ ಸರ್ಕಾರಿ ಇಲಾಖೆಗಳು, ಸರ್ಕಾರಿ ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು, ಹೋಟೆಲ್‌ಗಳು ಹಾಗೂ ಬ್ಯಾಂಕುಗಳು ಮಂತಾದವು ಅಳವಡಿಸಿದ ನಾಮಫಲಕಗಳಲ್ಲಿ ಕಡ್ಡಾಯವಾಗಿ ಒಂದು ತಿಂಗಳೊಳಗಾಗಿ ಕನ್ನಡ ಭಾಷೆಯನ್ನು ಶೇ.60 ರಷ್ಟು ಪ್ರದರ್ಶಿಸಬೇಕು. ತಪ್ಪಿದಲ್ಲಿ ಅಧಿನಿಯಮದ ಅನುಸಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.ಸರ್ಕಾರ, ಸ್ಥಳೀಯ ಪ್ರಾಧಿಕಾರ, ಅನುದಾನಿತ ಅಥವಾ ಅನುದಾನ ರಹಿತ ಸಂಸ್ಥೆಗಳು ನಡೆಸುವ ಶಾಲಾ ಕಾರ್ಯಕ್ರಮಗಳಲ್ಲಿ ಬಳಸುವ ಕರಪತ್ರ, ಬ್ಯಾನರ್, ಫ್ಲೆಕ್ಸ್, ಎಲೆಕ್ಟ್ರಾನಿಕ್ ಪ್ರದರ್ಶನ ಫಲಕಗಳು, ಮಾಹಿತಿಗಳು, ಸೂಚನಾ ಪತ್ರಗಳು, ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿ ಇರುವಂತೆ ಕ್ರಮವಹಿಸಬೇಕು. ಸರ್ಕಾರವು ಕೈಗೊಂಡಂತಹ ಅಥವಾ ಸರ್ಕಾರದ ಸಂಬಂಧಿತ ಸಂಸ್ಥೆಗಳು ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಯಾವುದೇ ರೀತಿಯ ಪ್ರತಿಫಲ, ಅನುದಾನ, ರಿಯಾಯಿತಿ ಪಡೆದು ಅನುಷ್ಠಾನಗೊಳಿಸುತ್ತಿರುವ ಯಾವುದೇ ಯೋಜನೆಗೆ ಸಂಬಂಧಿಸಿದ ಫಲಕ, ಜಾಹೀರಾತು, ರಸೀದಿ, ಸೂಚನಾ ಪತ್ರಗಳು ಕಡ್ಡಾಯವಾಗಿ ಕನ್ನಡದಲ್ಲಿರಬೇಕು ಎಂದು ಅವರು ಸೂಚಿಸಿದರು.ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022 ಹಾಗೂ ತಿದ್ದುಪಡಿ ಅಧಿನಿಯಮ 2024ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಪ್ರತಿ ತಾಲ್ಲೂಕಿನಲ್ಲಿ ಅಧಿನಿಯಮದನ್ವಯ ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಸಮಿತಿಯನ್ನು ರಚಿಸಿ ಆಯಾ ತಾಲ್ಲೂಕಿನಾದ್ಯಂತ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿಯನ್ನು ಕೈಗೊಳ್ಳಲು ಕ್ರಮವಹಿಸಬೇಕು. ಕ್ರಮವಹಿಸಿದ ವರದಿಯನ್ನು ಜಿಲ್ಲಾ ಸಮಿತಿಗೆ ಕಾಲಕಾಲಕ್ಕೆ ಸಲ್ಲಿಸಬೇಕು. ಉದ್ಯೋಗದಲ್ಲಿ ಜಿಲ್ಲೆಯ ವಾಣಿಜ್ಯ ಕೈಗಾರಿಕೆಗಳು, ಹೋಟೇಲ್‌ಗಳು, ಉದ್ಯಮ ಸಂಸ್ಥೆಗಳು, ಕಡ್ಡಾಯವಾಗಿ ಸ್ಥಳೀಯರಿಗೆ ಆದ್ಯತೆ ನೀಡಬೇಕು. ವಿಫಲವಾದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ– 2022ರ ಕಾಯ್ದೆಯಂತೆ ಸರ್ವರು ಕನ್ನಡ ಭಾಷಾ ಅನುಷ್ಠಾನಕ್ಕಾಗಿ ಶ್ರಮಿಸಬೇಕು. ಕನ್ನಡ ಭಾಷೆ ನಮ್ಮ ಸ್ವಾಭಿಮಾನವಾದ್ದರಿಂದ ಅದರ ಬಳಕೆ ಮತ್ತು ಉಳಿಯುವಿಕೆಗೆ ನಾವೆಲ್ಲರೂ ಕನ್ನಡ ಭಾಷೆಯನ್ನು ಬಳಸಬೇಕು ಎಂದು ಅವರು ಹೇಳಿದರು.ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ವಿರುಪಣ್ಣ ನವಲಿ, ಜಿಲ್ಲಾ ಜಾಗೃತಿ ಸಮಿತಿಯ ಸದಸದ್ಯರಾದ ಜಿ.ಎಸ್ ಗೋನಾಳ, ಡಾ. ನಾಗರಾಜ ದಂಡೋತಿ, ಮಹೇಶ ಬಳ್ಳಾರಿ, ಡಾ. ಸಿದ್ದಲಿಂಗಪ್ಪ ಕೊಟ್ನೆಕಲ್, ಡಾ. ನಿಂಗಪ್ಪ ಕಂಬಳಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೃಹಜ್ಯೋತಿ ಯೋಜನೆ ಮರುಪರಿಶೀಲನೆ ಮನೆ-ಮನೆಗೆ ಜೆಸ್ಕಾಂ ಅಧಿಕಾರಿಗಳ ಭೇಟಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದಲ್ಲಿ ಗೃಹ ಜ್ಯೋತಿ ಯೋಜನೆಯ ಪುನರ್ ಪರಿಶೀಲನಾ ಕಾರ್ಯವು ಜೆಸ್ಕಾಂ ಜೆಇ ಬಸಲಿಂಗಪ್ಪ ಮಿರ್ಜಾಪುರೆ ನೇತೃತ್ವದಲ್ಲಿ ಚುರುಕಿನಿಂದ ಸಾಗಿದೆ. ಜೆಸ್ಕಾಂ ಮೀಟರ್ ರೀಡರ್‌ಗಳು ಹಾಗೂ ಸಿಬ್ಬಂದಿ ವರ್ಗವು ಗ್ರಾಹಕರ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ, ಫಲಾನುಭವಿಗಳ ದಾಖಲೆಗಳನ್ನು ಮರುಪರಿಶೀಲಿಸಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಜೆಇ ಬಸಲಿಂಗಪ್ಪ ಅವರು, "ಕೆಲವರು ಮೃತಪಟ್ಟವರ ಹೆಸರಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಖಾತೆ ತೆರೆದು ಯೋಜನೆಯ ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಯೋಜನೆಯಲ್ಲಿ ಪಾರದರ್ಶಕತೆ ತರಲು ರಾಜ್ಯ ಸರ್ಕಾರವು ಮರುಪರಿಶೀಲನೆಗೆ ಮುಂದಾಗಿದೆ," ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಸೌಲಭ್ಯವನ್ನು ಮುಂದುವರಿಸಲು ಗ್ರಾಹಕರು ಮತ್ತೊಮ್ಮೆ ತಮ್ಮ ಅಧಿಕೃತ ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಮೊಬೈಲ್ ಆಪ್ ಹಾಗೂ ನಿಗದಿತ ಘೋಷಣಾ ಪತ್ರದ ಮೂಲಕ ಅರ್ಜಿ ಭರ್ತಿ ಮಾಡಿದ ನಂತರವೇ ಈ ಪರಿಶೀಲನಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

ದಾಖಲೆಗಳ ಪರಿಶೀಲನೆ ನಡೆಸಿದ ಅಧಿಕಾರಿಗಳು, ಫಲಾನುಭವಿಗಳಿಗೆ ಮಾಹಿತಿ ಸಂಗ್ರಹಣೆಯ ಅಧಿಕೃತ ಪತ್ರವನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಕಮಲನಗರ ಸೆಕ್ಷನ್ ಆಫೀಸರ್ ಬಸಲಿಂಗಪ್ಪ, ಎಂಆರ್ ಸುರೇಶ, ಎಲ್‌ಎಮ್ ರಾಜಕುಮಾರ, ಎಎಂಆರ್‌ಪಾದ ಸಹಾಯಕ ರಾಜಕುಮಾರ ಬಿರಾದಾರ ಸೇರಿದಂತೆ ಜೆಸ್ಕಾಂ ಸಿಬ್ಬಂದಿ ಹಾಗೂ ಸ್ಥಳೀಯ ಫಲಾನುಭವಿಗಳು ಉಪಸ್ಥಿತರಿದ್ದರು.

# ಕೈ ತೊಳೆಯುವ ಕಾರ್ಯಕ್ರಮ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ವಡಗೇರಾ ತಾಲ್ಲೂಕಿನ ಹಾಲಗೇರಾ ಗ್ರಾಮದಲ್ಲಿ ಯಾದಗಿರಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಯಾದಗಿರಿಯ ಸ್ಮೈಲ್ ಫೌಂಡೇಶನ್ (ಎಂಎಸ್ಡಿ ಫಾರ್ಮಾಸ್ಯುಟಿಕಲ್ಸ್ ಪ್ರೈವೇಟ್ ಲಿಮಿಟೆಡ್) ಜಂಟಿಯಾಗಿ ಕೈ ತೊಳೆಯುವ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಕಾರ್ಯಕ್ರಮದ ಮುಖ್ಯ ಉದ್ದೇಶವೆಂದರೆ ಶಾಲಾ ಮಕ್ಕಳಲ್ಲಿ ಜಾಗೃತಿ/ಸೂಕ್ಷ್ಮತೆಯನ್ನು ಹೆಚ್ಚಿಸುವುದು ಮತ್ತು ನಿಯಮಿತವಾಗಿ ಕೈ ತೊಳೆಯುವ ಅಭ್ಯಾಸವನ್ನು ಉತ್ತೇಜಿಸುವುದು. ಈ ಕಾರ್ಯಕ್ರಮದಲ್ಲಿ ಸ್ಮೈಲ್ ಫೌಂಡೇಶನ್ನ ಯೋಜನಾ ಸಂಯೋಜಕರಾದ ಅಬ್ದುಲ್ ಶಫೀ ಅಹ್ಮದ್ ಅವರು ಕೈ ತೊಳೆಯುವಿಕೆಯ ನೇರ ಪ್ರದರ್ಶನವನ್ನು ನೀಡಿದರು ಮತ್ತು ಸೋಂಕುಗಳ ಹರಡುವಿಕೆಯನ್ನು ತಡೆಗಟ್ಟುವ ಏಕೈಕ ಪರಿಣಾಮಕಾರಿ ವಿಧಾನವೆಂದರೆ ಕೈ ತೊಳೆಯುವುದು ಎಂದು ಒತ್ತಿ ಹೇಳಿದರು. ಸಾಮಾನ್ಯ ಶೀತ, ಇನ್ಫ್ಲುಯೆನ್ಸ (ಜ್ವರ), ಕಿವಿ ಸೋಂಕುಗಳು, ಗಂಟಲು ನೋವು, ಅತಿಸಾರ ಮತ್ತು ಇತರ ಕರುಳಿನ ಸೋಂಕುಗಳಂತಹ ಅನೇಕ ರೋಗಗಳು ತೊಳೆಯದ ಅಥವಾ ಸರಿಯಾಗಿ ತೊಳೆಯದ ಕೈಗಳಿಂದ ಹರಡಬಹುದು. ಸ್ಮೈಲ್ ಫೌಂಡೇಶನ್ ಯಾದಗಿರಿಯ ವೈದ್ಯಾಧಿಕಾರಿ ಡಾ. ಯಲ್ಲಪ್ಪ ಕೆ.ಎ. ಅವರು "ರೋಗಗಳು ಹೇಗೆ ಹರಡುತ್ತವೆ?" ಕುರಿತು ಮಾತನಾಡಿದರು. ರೋಗವನ್ನು ಉಂಟುಮಾಡುವ ಬ್ಯಾಕ್ಟೀರಿಯಾ ಮತ್ತು ವೈರಸ್ಗಳು ನಿಮ್ಮ ಕೈಗಳಿಗೆ ಆಹಾರ ಅಥವಾ ಪ್ರಾಣಿಗಳನ್ನು ಮುಟ್ಟುವುದು, ಬಾಗಿಲಿನ ಹಿಡಿಕೆಗಳನ್ನು ಮುಟ್ಟುವುದು, ಕೈಕುಲುಕುವುದು, ಫೋನ್ ರಿಸೀವರ್ಗಳು ಅಥವಾ ಕಂಪ್ಯೂಟರ್ ಕೀಬೋರ್ಡ್ಗಳನ್ನು ಬಳಸುವುದು ಮತ್ತು ಶೌಚಾಲಯವನ್ನು ಬಳಸುವುದು ಮುಂತಾದ ಹಲವು ವಿಧಗಳಲ್ಲಿ ಬರಬಹುದು. ನಿಮ್ಮ ಕೈಗಳನ್ನು ಸೋಪ್ ಮತ್ತು ನೀರಿನಿಂದ ಸರಿಯಾಗಿ ತೊಳೆಯುವ ಮೂಲಕ ನೀವು ಅನೇಕ ಬ್ಯಾಕ್ಟೀರಿಯಾ ಮತ್ತು ವೈರಸ್ಗಳ ಹರಡುವಿಕೆಯನ್ನು ಕಡಿಮೆ ಮಾಡಬಹುದು. ಈ ಸಂದರ್ಭದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರು ನರೇಂದ್ರ ಜೋಶಿ, ನರ್ಸ್ ಅಶ್ವಿನಿ, ಸಮುದಾಯ ಸಂಚಾಲಕ ಶ್ರೀಮತಿ ನಾಗಮ್ಮ, ವಿನೋದ್ ಕುಮಾರ್, ಸಹಾಯಕ ಶಿಕ್ಷಕ ಪವನ್ ಕುಮಾರ, ಶ್ರೀಮತಿ ತಾಯಮ್ಮ, ಶ್ರೀಮತಿ ಅಬ್ದುಲ್‌ಬೀ, ಶ್ರೀಮತಿ ಬಾನು ಬೇಗಂ, ಶ್ರೀಮತಿ ಲಕ್ಷ್ಮಿ, ಶ್ರೀಮತಿ ಇಂದ್ರ, ಶ್ರೀಮತಿ ಮಾಲಿಂಗಮ್ಮ, ಶ್ರೀಮತಿ ಶ್ರಾವತಿ ಮತ್ತು ಮಕ್ಕಳು ಇದ್ದರು.


# ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷರನ್ನಾಗಿ ಸುರೇಶ್ ರೆಡ್ಡಿ ಪಾಟೀಲ್ ಗೋನಾಲ್ ನೇಮಕ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ ಬೆಂಗಳೂರಿನಲ್ಲಿ ನಡೆದ ಕೇಂದ್ರ ಕಾರ್ಯಕಾರಿ ಸಮಿತಿಯ ಸಭೆಯಲ್ಲಿ, ಸುರೇಶ್ ರೆಡ್ಡಿ ರವರನ್ನು ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷರನ್ನಾಗಿ ರಾಜ್ಯಾಧ್ಯಕ್ಷ ಸಿ ರಮೇಶ್ ಹಾಗೂ ಯಾದಗಿರಿಯ ಜಿಲ್ಲಾಧ್ಯಕ್ಷ ವಿನೋದ್ ರೆಡ್ಡಿ ರವರ ವಿರೋಧವಾಗಿ ಆಯ್ಕೆ ಮಾಡಿ, ಆದೇಶ ಪತ್ರ ನೀಡಿ ಗೌರವಿಸ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸಿಟಿಸಿ ಮೆಂಬರ್ ಮುದುಕಪ್ಪ, ಉಪಾಧ್ಯಕ್ಷ ಲಕ್ಷ್ಮಣ ನಾಯಕ್, ಟಿಪ್ಪು ಸುಲ್ತಾನ್, ಅಶೋಕ್ ಇಟಗಿ, ರಾಜಪಾಲ್, ಬಾಬಾ ತಾಹಾ, ಸಾಬಯ್ಯ ಉಪಸ್ಥಿತರಿದ್ದರು.

# ವಿಬಿ-ಜಿ ರಾಮ ಜಿ ಯೋಜನೆ ಜನ ಬಗ್ಗೆ ಜಾಗೃತಿ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ತಾಲ್ಲೂಕಿನ ಗೋನಾಲ್ ಗ್ರಾಮದಲ್ಲಿ ವಿಕಾಸಿತ ಭಾರತ– ಗ್ಯಾರಂಟಿ ಫಾರ್ ರೋಜಗಾರ್ ಆಯಿಂಡ್ ಅಜೀವಿಕ ಮಿಷನ್ ಗ್ರಾಮೀಣ ಯೋಜನೆ ಬಗ್ಗೆ ಐಇಸಿ ಜನ ಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ರೋಜಗಾರ್ ದಿವಸ್ ಬ್ಯಾನರ್ ಹಿಡಿದು ಗ್ರಾಮದಲ್ಲಿ ಯೋಜನೆ ಬಗ್ಗೆ ಅರಿವು ಮೂಡಿಸಲಾಯಿತು. ಇದೇ ಜುಲೈ ಒಂದರಿಂದ ಜಿಲ್ಲೆಯಲ್ಲಿ ವಿಬಿ–ಜಿ ರಾಮಜಿ ಜಿ (ಗ್ರಾಮೀಣ) ಯೋಜನೆ ಜಾರಿಗೆ ಹಿನ್ನಲೆ ದಿನದ ಕೂಲಿ ಮೊತ್ತ 370 ರಿಂದ 382 ರೂಪಾಯಿ ಗೆ ಹೆಚ್ಚಿಸಲಾಗಿದೆ.

ಅಲ್ಲದೆ ಪ್ರತಿ ಗ್ಯಾರಂಟಿ ಕಾರ್ಡಿಗೆ ವಾರ್ಷಿಕ ಮಾನವ ದಿನಗಳು ಗುರಿ 100 ರಿಂದ 125 ಗಳ ವರಗೆ ಹೆಚ್ಚಿಸಲಾಗಿದೆ. ಕೂಲಿ ಕೆಲಸಕ್ಕೆ ಬರುವ ಕಾರ್ಮಿಕರಿಗಾಗಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ ಹಾಗೂ ತಾಲ್ಲೂಕು ಪಂಚಾಯತಿಯಿಂದ ತಾಲ್ಲೂಕಿನ ವಿವಿಧ ಗ್ರಾಮದಲ್ಲಿ ವ್ಯಾಪಕ ಪ್ರಚಾರ ಕಾರ್ಯಕ್ರಮ ಮಾಡಲಾಗುತ್ತಿದೆ. ಗ್ರಾಮೀಣ ಭಾಗದ ಜನರ ಜೀವಾಳದ ವಿಬಿ–ಬಿ ರಾಜಮ ಜಿ ಯೋಜನೆ ಯಲ್ಲಿ ಕಾರ್ಮಿಕರು ಭಾಗಿಯಾಗುವ ಮೂಲಕ ಸ್ವಾವಲಂಬಿಯಾಗಿ ಬದುಕ ಬಹುದೆಂದು ಹೇಳಲಾಯಿತು. ಸಮಗ್ರ ಕೆರೆ ಅಭಿವೃದ್ಧಿ, ಗೋಕಟ್ಟೆ, ಕೃಷಿಹೊಂಡ ಹಾಗೂ ಕಾಲುವೆ ಅಭಿವೃದ್ಧಿ, ವೈಯಕ್ತಿಕ ದನದ ಶೇಡ್, ಕಿರು ಗ್ರಾಮೀಣ ಬಸ್ ನಿಲ್ದಾಣ ಸೇರಿದಂತೆ ಒಟ್ಟು 318 ಕಾಮಗಾರಿಗಳನ್ನು ಈ ಯೋಜನೆಯಲ್ಲಿ ಅಳವಡಿಸಿದ್ದಾರೆ. ಗ್ರಾಮೀಣ ಭಾಗದ ಕೂಲಿ ಕಾರ್ಮಿಕರು, ರೈತರು ಯೋಜನೆ ಲಾಭ ಪಡೆಯಲು ತಿಳಿಸಲಾಯಿತು.

ಈ ವೇಳೆ ಪಿಡಿಓ ಸಿ ಬಿ ಪಾಟೀಲ್, ಟಿಐಇಸಿ ದುರ್ಗೇಶ್, ಟಿಎಇ ಮಂಜುನಾಥ ಹಾಗೂ ಗ್ರಾಪಂ ಸಿಬ್ಬಂದಿಗಳು, ಗ್ರಾಮಸ್ಥರು ಇದ್ದರು.

# ಜಾವೀದ ಹುಸೇನ್ ಹವಲ್ದಾರ್‌ಗೆ ಸಾಹಿತ್ಯ ರತ್ನ ರಾಜ್ಯ ಪ್ರಶಸ್ತಿಗೆ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಸುವರ್ಣ ಕರ್ನಾಟಕ ಪ್ರೆಸ್ ಅಸೋಸಿಯೇಷನ್ ಹಾಗೂ ಕರ್ನಾಟಕ ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಸ್ಥಾನ ಇವರು ಕೂಡ ಮಾಡುವ 2026ನೇ ಸಾಲಿನ ಪ್ರತಿಷ್ಠಿತ ರಾಜ್ಯ ಮಟ್ಟದ ಸಾಹಿತ್ಯ ರತ್ನ ಪ್ರಶಸ್ತಿಗೆ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಶಿಕ್ಷಕ ಹಾಗೂ ಸಾಹಿತಿಗಳಾದ ಜಾವೀದ ಹುಸೇನ ಹವಲ್ದಾರ ಅವರು ಆಯ್ಕೆಯಾಗಿದ್ದಾರೆ. ಜಾವೀದ ಅವರ ಸಾಹಿತ್ಯ ಸೇವೆ ಸಾಧನೆಯನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ಜುಲೈ 11 ಶನಿವಾರದಂದು ಮಯೂರ ಸ್ಕೂಲ್ ಹತ್ತಿರ ಸಮುದಾಯ ಭವನ ಗೋಕಾಕದಲ್ಲಿ ನಡೆಯುವ ಜಾನಪದ ಕಲಾ ಮೇಳ ಹಾಗೂ ಸಾಧಕರಿಗೆ ಸನ್ಮಾನ –2026ರ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿರುವ ರಮೇಶ.ಲ.ಜಾರಕಿಹೊಳಿ ಜನಪ್ರೀಯ ಶಾಸಕರು ಗೋಕಾಕ ಹಾಗೂ ಘನ ಉಪಸ್ಥಿತಿಯನ್ನು ಬಾಲಚಂದ್ರ.ಲ.ಜಾರಕಿಹೊಳಿ ಜನಪ್ರೀಯ ಶಾಸಕರು ಅರಭಾವಿ ಹಾಗೆಯೇ ನಾಡಿನ ಗಣ್ಯ ಮಾನ್ಯರ ಸಮ್ಮುಖದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ಸಂಸ್ಥಾಪಕ ರಾಜ್ಯಾಧ್ಯಾಕ್ಷರಾದ ಡಾ.ಮಂಜುಳಾ ಪಾವಗಡ ಹಾಗೂ ಕನ್ನಡ ಜಾನಪದ ಸಂಸ್ಥೆ ಗೋಕಾಕನ ಅಧ್ಯಕ್ಷರಾದ ಡಾ.ಉದ್ದಣ್ಣ ಗೌಡರು ಹಾಗೂ ಡಾ.ಲಕ್ಷ್ಮಣ ಎಸ್ ಚೌರಿ ಮಕ್ಕಳ ಸಾಹಿತಿಗಳು ಗೋಕಾಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಶ್ರೀಯುತರು ಮುಂದಿನ ದಿನಮಾನಗಳಲ್ಲಿ ಇನ್ನು ಹೆಚ್ಚಿನ ಸಾಹಿತ್ಯ ಕೃಷಿ ಮಾಡಿ ಹೊಸ ಹೊಸ ರೀತಿಯಲ್ಲಿ ಪುಸ್ತಕಗಳು ರಚಿಸುವ ಮೂಲಕ ನಾಡಿಗೆ ಕೀರ್ತಿ ತರುವಂತಹ ಸಾಧನೆ ಮಾಡಿ ರಾಷ್ಟ್ರ,ಅಂತರರಾಷ್ಟ್ರೀಯ ಮಟ್ಟದ ಪ್ರಶಸ್ತಿಗೆ ಭಾಜನರಾಗಿ ಕನ್ನಡ ಭಾಷೆ ಉಳಿವೆಗಾಗಿ ಕನ್ನಡ ಭಾಷೆ ರಕ್ಷಿಸುವಗಾಗಿ ಕನ್ನಡ ಸಾಹಿತ್ಯ ಸೇವೆ ನಿರಂತರವಾಗಿರಲಿ ಎಂದು ಶುಭ ಹಾರೈಸಿ ಪ್ರಕಟಣೆಗೆ ತಿಳಿಸಿದ್ದಾರೆ.

# ನಿರಾಶ್ರಿತರಿಗೆ ಯಾವುದೇ ಸೌಲಭ್ಯ ಕೊರತೆಯಾಗದಂತೆ ಸೇವೆ ನೀಡಿ: ಗುರುಪಾದ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು, 08: ನಿರಾಶ್ರಿತರಿಗೆ ಅಗತ್ಯ ಸೌಲಭ್ಯಗಳನ್ನು ಯಾವುದೇ ಕೊರತೆಯಾಗದಂತೆ ಒದಗಿಸಿ, ಮಾನವೀಯ ನೆಲೆಯಲ್ಲಿ ಸೇವೆ ಸಲ್ಲಿಸಬೇಕು ಎಂದು ಶಹಾಪುರ ನಗರಸಭೆಯ ಅಭಿಯಾನ ವ್ಯವಸ್ಥಾಪಕ ಗುರುಪಾದ ತಳವಾರ ಅವರು ಸೂಚಿಸಿದರು.

ಶಹಪುರ ನಗರದ ವಸತಿ ರಹಿತರ ಆಶ್ರಯ ಕೇಂದ್ರಕ್ಕೆ ಭೇಟಿ ನೀಡಿ ಕೇಂದ್ರದಲ್ಲಿನ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ಆಶ್ರಯ ಕೇಂದ್ರದಲ್ಲಿ ನಿರಾಶ್ರಿತರಿಗೆ ಸುರಕ್ಷಿತ ವಸತಿ, ಶುದ್ಧ ಕುಡಿಯುವ ನೀರು, ಪೌಷ್ಟಿಕ ಆಹಾರ, ಸ್ವಚ್ಛ ಮತ್ತು ಆರೋಗ್ಯಕರ ವಾತಾವರಣ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿ ದೊರೆಯುವಂತೆ ನಿರಂತರ ಗಮನಹರಿಸಬೇಕು ಎಂದು ಹೇಳಿದರು.ಕೌಶಲ್ಯಾಭಿವೃದ್ಧಿ ಇಲಾಖೆಯ



ಅಭಿಯಾನ ವ್ಯವಸ್ಥಾಪಕರಾದ ಶ್ರೀ ಡಾ.ವಿಠೋಬ ಯಾದವ್ ಅವರು ಕೇಂದ್ರದಲ್ಲಿ ನಿರಾಶ್ರಿತರಿಗೆ ನೀಡಲಾಗುತ್ತಿರುವ ಸೇವೆಗಳು, ನಿರ್ವಹಣಾ ವ್ಯವಸ್ಥೆ ಹಾಗೂ ಲಭ್ಯವಿರುವ ಮೂಲಸೌಕರ್ಯಗಳ ಕುರಿತು ಮಾಹಿತಿ ಪಡೆದು, ಸೇವೆಯಲ್ಲಿ ಯಾವುದೇ ಲೋಪ ಉಂಟಾಗದಂತೆ ನೋಡಿಕೊಳ್ಳುವಂತೆ ಸೂಚಿಸಿದರು.

ಪರಿಶೀಲನೆ ವೇಳೆ ಕುಡಿಯುವ ನೀರು, ಸ್ವಚ್ಛತೆ, ವಿದ್ಯುತ್, ಆಹಾರ, ಹಾಸಿಗೆ, ಬಟ್ಟೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಸ್ಥಿತಿಗತಿಯನ್ನು ಅವಲೋಕಿಸಿದರು. ಮಹಿಳಾ ನಿರಾಶ್ರಿತರಿಗೆ ಪ್ರತ್ಯೇಕ ಕೊಠಡಿಗಳ ವ್ಯವಸ್ಥೆ, ಸುರಕ್ಷಿತ ವಸತಿ ಹಾಗೂ ಕೇಂದ್ರದ ಸ್ವಚ್ಛತಾ ನಿರ್ವಹಣೆ ಕುರಿತು ಅಧಿಕಾರಿಗಳು ಖಚಿತಪಡಿಸಿಕೊಂಡರು.

ಈ ಸಂದರ್ಭದಲ್ಲಿ ನಿರಾಶ್ರಿತರ ಕೇಂದ್ರದ ನಿರ್ವಹಣೆ ಮಾಡುತ್ತಿರುವ ಕೇರ್ ಟೇಕರಗಳಾದ ಶ್ರೀ ಮಲ್ಲಪ್ಪ ಹಾಗೂ ಮಲ್ಲಿಕಾರ್ಜುನ ಉಪಸ್ಥಿತರಿದ್ದರು.

# ಶಿಕ್ಷಕ, ಸ್ವಯಂಸೇವಕರಿಗೆ ಮಾನಸಿಕ ಆರೋಗ್ಯ ತರಬೇತಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು.8: ಡಾನ್ ಬಾಸ್ಕೋ ಸಮಾಜ ಸೇವಾ ಕೇಂದ್ರ (DBCSA) ಯಾದಗಿರಿ, ಬ್ರೇಡ್ಸ್ ಬೆಂಗಳೂರು ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಹಯೋಗದಲ್ಲಿ ಅನುಷ್ಠಾನಗೊಳ್ಳುತ್ತಿರುವ MINDS (Mental Health Initiative for Nurturing Development and Support) ಯೋಜನೆಯಡಿ ಶಿಕ್ಷಕರು ಹಾಗೂ ಸ್ವಯಂಸೇವಕರಿಗೆ ಮಾನಸಿಕ ಆರೋಗ್ಯ ಕುರಿತ ತರಬೇತಿ ಕಾರ್ಯಕ್ರಮವನ್ನು ಗ್ರಾಮ ಸೈದಾಪುರದ ಸರ್ಕಾರಿ ಪ್ರೌಢಶಾಲೆ (TLC) ಸಭಾಂಗಣದಲ್ಲಿ ಮಂಗಳವಾರ ಫಾದರ್ ಶಾಬು ಫ್ರಾನ್ಸಿಸ್ ಎಸ್‌ಡಿಬಿ ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾಯಿತು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಈರಣ್ಣ ಯರಗಟ್ಟಿ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಅನಿಲ್ ಅವರು ಮಾನಸಿಕ ಆರೋಗ್ಯ ಮತ್ತು ಭಾವನಾತ್ಮಕ ಯೋಗಕ್ಷೇಮ ವಿಷಯದ ಕುರಿತು ಉಪನ್ಯಾಸ ನೀಡಿ, ಮಕ್ಕಳ ಮಾನಸಿಕ ಆರೋಗ್ಯವನ್ನು ಕಾಪಾಡುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ಮಕ್ಕಳ ಭಾವನೆಗಳನ್ನು ಅರ್ಥಮಾಡಿಕೊಂಡು ಅವರಿಗೆ ಸುರಕ್ಷಿತ, ಪ್ರೋತ್ಸಾಹದಾಯಕ ಹಾಗೂ ಮಕ್ಕಳ ಸ್ನೇಹಿ ಶಾಲಾ ವಾತಾವರಣ ಕಲ್ಪಿಸುವುದು ಅಗತ್ಯವೆಂದು ತಿಳಿಸಿದರು.

ಬಳಿಕ ಬಳಿಚಕ್ರ ಕ್ಲಸ್ಟರ್‌ನ ಇಸಿಓ ಚಾಂದ್ ಸಾಬ್ ಮಾತನಾಡಿ, ಮಾನಸಿಕ ಒತ್ತಡ, ಖಿನ್ನತೆ ಹಾಗೂ ಇತರ ಭಾವನಾತ್ಮಕ ಸಮಸ್ಯೆಗಳನ್ನು ಎದುರಿಸುತ್ತಿರುವ ಮಕ್ಕಳು ಮತ್ತು ವಯಸ್ಕರ ನೆರವಿಗಾಗಿ ಕೇಂದ್ರ ಸರ್ಕಾರದ 14416 ಟೆಲಿ–ಮಾನಸ ರಾಷ್ಟ್ರೀಯ ಉಚಿತ ಸಹಾಯವಾಣಿ ಕಾರ್ಯನಿರ್ವಹಿಸುತ್ತಿದ್ದು, ಅಗತ್ಯವಿದ್ದಾಗ ಕರೆ ಮಾಡಿ ತಜ್ಞರಿಂದ ಸಮಾಲೋಚನೆ ಹಾಗೂ ಮಾರ್ಗದರ್ಶನ ಪಡೆಯಬಹುದಾಗಿದೆ ಎಂದು ಮಾಹಿತಿ ನೀಡಿದರು. ಮಕ್ಕಳ ಸುರಕ್ಷತೆ, ಮಕ್ಕಳ ಹಕ್ಕುಗಳು ಹಾಗೂ ಶಾಲೆಗಳಲ್ಲಿ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣದ ಅಗತ್ಯತೆಯ ಬಗ್ಗೆಯೂ ಅವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಮೈಂಡ್ಸ್ ಯೋಜನೆ ಸಂಯೋಜಕರಾದ ಶರಣಪ್ಪ ಸಿ. ಅಮರಾಪುರ ಸ್ವಾಗತಿಸಿದರು. ಮಹಿಪಾಲರೆಡ್ಡಿ ಕಾರ್ಯಕ್ರಮ ನಿರೂಪಿಸಿದರು. ಆಪ್ತ ಸಮಾಲೋಚಕರಾದ ಸೂರ್ಯಕಾಂತ ವಂದಿಸಿದರು. ಲಿಂಗಾರೆಡ್ಡಿ (ಸಿಆರ್‌ಪಿ, ಸೈದಾಪುರ), ಷಣ್ಮುಖ ಬಾಡಿಯಾಲಾ (ಸಿಆರ್‌ಪಿ) ಹಾಗೂ ಸುಬ್ರಮಣ್ಯ (ಸಿಆರ್‌ಪಿ) ಉಪಸ್ಥಿತರಿದ್ದರು.

ತರಬೇತಿಯಲ್ಲಿ 40 ಶಿಕ್ಷಕರು ಹಾಗೂ 7 ಜನ ಸ್ವಯಂಸೇವಕರು ಸೇರಿದಂತೆ ಒಟ್ಟು 47 ಮಂದಿ ಭಾಗವಹಿಸಿ, ಮಾನಸಿಕ ಆರೋಗ್ಯ, ಮಕ್ಕಳ ಭಾವನಾತ್ಮಕ ಯೋಗಕ್ಷೇಮ, ಆರಂಭಿಕ ಗುರುತಿಸುವಿಕೆ ಹಾಗೂ ಸಮಾಲೋಚನಾ ಸೇವೆಗಳ ಕುರಿತು ಉಪಯುಕ್ತ ಮಾಹಿತಿ ಪಡೆದುಕೊಂಡರು.

# ಗ್ಯಾರಂಟಿ ನಿಲ್ಲಿಸಿ, ರೈತರ ಸಾಲ ಮನ್ನಾ ಮಾಡಿ: ಶಾಸಕ ಶರಣಗೌಡ ಕಂದಕೂರ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕೇವಲ 38 ಶಾಸಕರಿಂದ ಆಯ್ಕೆಯಾದ ಜೆಡಿಎಸ್ ರೈತರ ಅಭಿವೃದ್ಧಿ ಗಾಗಿ ಅವರ ಕಷ್ಟಕ್ಕೆ ಮಿಡಿದು ರೈತರ ಸಾಲ ಮನ್ನಾ ಮಾಡಿದ್ದೇವೆ. ಕೇವಲ 14 ತಿಂಗಳು ಅಧಿಕಾರ ಇದ್ದು ನಾವು ರೈತರ ಸಾಲ ಮನ್ನಾ ಮಾಡಿವಿ 138 ಶಾಸಕರನ್ನು ಕೊಟ್ಟ ನಮ್ಮ ಜನರಿಗೆ ಏನ್ ಮಾಡಿದ್ದರಿ ಈಗ ಸಾಲ ಮನ್ನಾ ಮಾಡಿರಿ, ಒಂದ್ ವರ್ಷ ಬೇಕಿದ್ರೆ ಗ್ಯಾರಂಟಿ ಯೋಜನೆ ನಿಲ್ಲಿಸಿ ಎಲ್ಲಾ ರೈತರ ಸಾಲ ಮನ್ನಾ ಮಾಡಿ, ನಮ್ಮ ಭಾಗದ ರೈತರಿಗೆ ಮಳಿ ಇಲ್ಲ ಬೆಳಿಇಲ್ಲ ರೈತರು ಆತ್ಮಹತ್ಯೆಯಂತಹ ಕೆಟ್ಟ ಹಾದಿ ತುಳಿಲಾರದಂಗ ಅವರನ್ನು ಉಳಿಸಿ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಮುಖ್ಯಮಂತ್ರಿಗಳಿಗೆ ಆಗ್ರಹಿಸಿದರು.

ಗುರುಮಠಕಲ್ ಮತಕ್ಷೇತ್ರದ ಹೊನಗೇರಾ, ಆಶನಾಳ, ಯಡ್ಡಳ್ಳಿ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕೇಂದ್ರ ಸಚಿವ ಸೋಮಣ್ಣನ ಮರಿಬ್ಯಾಡ್ರಿ : ಹತ್ತಿಕುಣಿ ಡ್ಯಾಂ ನವೀಕರಣಕ್ಕೆ ಅನುದಾನ ತಂದ ಮೇಲೆ ಸಭೆಗೆ ಬರ್ತಿನಿ ಅಂದಿದ್ದೇ ಈಗ 75 ಕೋಟಿ ಬಂದಿದೆ ಈಗ ಸಭೆಗೆ ಬರ್ತಿನಿ. ಕೇಂದ್ರ ಸಚಿವ ವಿ. ಸೋಮಣ್ಣ ನಾಲಾ ಆಧುನಿಕರಣಕ್ಕೆ 75 ಕೋಟಿ ಕೊಟ್ಟಾರ ಅವರನ್ನು ರೈತರುಎಂದಿಗೂ ಮರೆಯಬೇಡಿ, ಹತ್ತಿಕುಣಿ ಡ್ಯಾಂ ಕೆಳ ಹಂತದ ರೈತರು ನೀರಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಹೊನಗೇರಾ ಗ್ರಾಮದಲ್ಲಿನ ಗುಂಡಗುರ್ತಿ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಕಲ್ಯಾಣ ಮಂಟಪ ನಿರ್ಮಾಣಕ್ಕೆ 1ಕೋಟಿ ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು.

ಇವತ್ತೇ ಶಾಲೆಗೆ ಕುಡಿವ ನೀರಿನ ಸೌಲಭ್ಯ ಮಾಡಿಸಿಕೊಡ್ತಿನಿ, ಶಾಲೆ ಮಕ್ಕಳನ್ನು ನಿಮ್ಮ ಮಕ್ಕಳಂತೆ ಪ್ರೀತಿಸಿ ಅವರಿಗೆ ಶಿಕ್ಷಣ, ಸಂಸ್ಕೃತಿ ಕೊಡಿವ, ಹೊನಗೇರಾ ಶಾಲೆಯ ಶೌಚಾಲಯ, ಕಾಂಪೌಂಡ್ ಮಾಡಿಕೊಡ್ತಿನಿ ಎಂದು ಭರವಸೆ ನೀಡಿದರು.

ಜೆಸ್ಕಾಂ ಇಲಾಖೆಯ ಅಧಿಕಾರಿಗಳ ಬೇಜಾವಾಬ್ದಾರಿತನದಿಂದ ರೈತರಿಗೆ ಸಿಗಬೇಕಾದ 7 ತಾಸು ವಿದ್ಯುತ್ ಸಿಗುತ್ತಿಲ್ಲ, ನಿಗದಿತ ಸಮಯದಲ್ಲಿ ಕರೆಂಟ್ ಸಿಗದಿದ್ದ ಪಕ್ಷದಲ್ಲಿ ಎಷ್ಟು ತಾಸು ಕರೆಂಟ್ ತೆಗೆದಿರುತ್ತಿರೋ ಅಷ್ಟು ತಾಸು ಕರೆಂಟ್ ವಿದ್ಯುತ್ ನಮ್ಮ ರೈತರಿಗೆ ಕೊಡಬೇಕು, ಯಾವದೇ ಸಬೂಬೂ ನೀಡದೇ ನಮ್ ರೈತರಿಗೆ 7 ತಾಸು ಕರೆಂಟ್ ಕೊಡಿ ಜೆಸ್ಕಾಂ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಕೆಇಬಿ ಯವರಿಗೆ ಮಾನವೀಯತೆ ಇರಲಿ, ಎಷ್ಟು ಸಮಯ ಕರೆಂಟ್ ತೆಗೆದಿದ್ದಿರಿ ಅಷ್ಟು ಕೊಡಿ ಸಾಕು, 7 ತಾಸು ತ್ರೀಫೇಸ್ ಕರೆಂಟ್ ಕೊಡಿ, ರೈತರು ಟಿಸಿ ಕೇಳಿದ್ರ ರೊಕ್ಕ ಇರಲಾರದ್ರ ಟಿಸಿ ಕೊಡಲ್ಲ ನೀವು ಪಾಪದಾಗ ಬಿದ್ದೊಗ್ತಿರಿ ನೀವು ಎಂದು ಶಾಸಕ ಕಂದಕೂರ ಗರಂ ಆದರು.ಹೊನಗೇರಾ ಬಸ್ ಸೌಲಭ್ಯ ಕಲ್ಪಿಸಬೇಕು, ಡಿಪೋ ಮ್ಯಾನೇಜರ್ ಕಚೇರಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಅಸಭ್ಯವಾಗಿ ವರ್ತಿಸುತ್ತಿರುವುದು ಶಾಸಕರ ಗಮನಕ್ಕೆ ವಿದ್ಯಾರ್ಥಿಗಳು ತಂದ ಕೂಡಲೇ ಶಾಸಕರು ಗರಂ ಆದರು, ಮೇಲಾಧಿಕಾರಿಗಳ ಜೊತೆಗೆ ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳುವುದಾಗಿ ಭರವಸೆ ನೀಡಿದರು.

ಆಶನಾಳ ಗ್ರಾಮದಲ್ಲಿ : ಯಾದಗಿರಿ ಹೈದರಾಬಾದ್ ಮೇನ್ ರೋಡ್ ನಿಂದ ಆಶನಾಳ ಗ್ರಾಮದವರೆಗೆ 1 ಕೋಟಿ ವೆಚ್ಚದಲ್ಲಿ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಲಾಯಿತು.

ಪ್ರಾಥಮಿಕ ಶಾಲೆ ಆಶನಾಳ 4 ಕೋಣೆ ನಿರ್ಮಾಣಕ್ಕೆ ಭರವಸೆ ನೀಡಿ, ಸರ್ಕಾರದಲ್ಲಿ ಅನುದಾನ ಜಲ್ದಿ ಬರಲ್ಲ ಸ್ವಲ್ಪ ತಾಳ್ಮೆ ಇರಲಿ, 15 ಲಕ್ಷ ವೆಚ್ಚ ದ ರಸ್ತೆ ಚರಂಡಿ ಮಾಡಿಕೊಡ್ತಿನಿ ಎಂದು ಭರವಸೆ ನೀಡಿದರು.

ಯಡ್ಡಳ್ಳಿ ಗ್ರಾಮದಲ್ಲಿ : 25 ಲಕ್ಷ ಬ್ರಿಡ್ಜ್ ರಸ್ತೆ ಸುಧಾರಣೆ ಹಾಗೂ 20ಲಕ್ಷ ಸಿಸಿ ರಸ್ತೆ ಮಾಡಲಾಗಿದೆ. 13.58ಲಕ್ಷ ವಾಲ್ಮೀಕಿ ಸಮುದಾಯ ಭವನಕ್ಕೆ ಅನುದಾನ ನೀಡಿದ್ದೇನೆ ಎಂದು ಶಾಸಕರು ತಿಳಿಸಿದರು.

ಈ ಸಂದರ್ಭದಲ್ಲಿ ತಾಪಂ ಇಒ ಮಹಾದೇವ, ಪಿಡಬ್ಲೂಡಿ ಎಇಇ ಕೈಲಾಶ, ನಿರ್ಮಿತಿ ಕೇಂದ್ರದ ಅಧಿಕಾರಿ ಕಿರಣಕುಮಾರ ಹೂಗಾರ, ಜೆಸ್ಕಾಂ ಎಇಇ ಮಾರ್ಕಂಡೇಯ, ಎಇ ಶಂಕರಗೌಡ, ರಾಮಸಮುದ್ರ ಗ್ರಾಪಂ ಆಡಳಿತಾಧಿಕಾರಿ ಪರಶುರಾಮ, ಪಿಆರ್‌ಇ ಅಧಿಕಾರಿ ಶರಣಬಸವ, ಲ್ಯಾಂಡ್ ಆರ್ಮಿಯ ಬನ್ನಪ್ಪ ಕೋಮಾರ, ಬಿಇಓ ಈರಣ್ಣ ಕನ್ನಳ್ಳಿ, ಆರ್‌ಐ ರಾಜಶೇಖರ ಪಾಟೀಲ, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಟಿಎಪಿಸಿಎಂಸಿಯ ಅಧ್ಯಕ್ಷರಾದ ಹಣಮಂತ ಅಕ್ಕಿ, ಬಸ್ಸುಗೌಡ ಚಾಮನಳ್ಳಿ, ಸೋಮನಗೌಡ ಬೆಳಗೇರಾ, ಬಾಪೂಗೌಡ ರಾಮಸಮುದ್ರ, ಈಶ್ವರ ನಾಯಕ, ಮಲ್ಲಿಕಾರ್ಜುನ ಅರುಣಿ, ಸಿದ್ದಣ್ಣ ಬೆಳಗೇರಾ, ಶರಣು ಗಾಡಿ,ನರಸಿಂಹರಡ್ಡಿ ಚಿಂತಗುಂಟಾ, ಬನ್ನಪ್ಪ ಬೆಳಗೇರಾ, ಹೊನಗೇರಾ ಗ್ರಾಮದ ಈಶಪ್ಪ ಸಾಹುಕಾರ, ಸೂಗಣ್ಣಗೌಡ, ಸಾಬಣ್ಣ ಗಜ್ಜಿ, ಶಿವರಾಜ ಸಾಹುಕಾರ, ಭೀಮಲಿಂಗಪ್ಪ ಕೋಳಿ, ನಾಗಪ್ಪ ಹೊಸಮನಿ, ಬಸವರಾಜ ಕೊಳ್ಳಿ, ಹಣಮಂತ ಬಳಿಚಕ್ರ, ಮಾರ್ಥಂಡಪ್ಪ ಕಟಕಟಿ, ಹಣಮಂತ ಬಾಳಿ, ಮಲ್ಲು ಡೊಳ್ಳಿನೋರ್, ರವೀಂದ್ರ ಬಂದಳ್ಳಿ, ಸಿದ್ರಾಮಪ್ಪ ಹೊಸಳ್ಳಿ, ಮಲ್ಲಪ್ಪ ಎಸ್.ಟಿ, ಕಟಗಿ ಶಹಾಪೂರದ ಶರಣಗೌಡ, ಭೀಮರಾಯ, ರಾಮಣ್ಣ ಕೆ. ಸಾಬಣ್ಣ ನಾಯಿಕೋಡಿ, ದೇವು ರಾಠೋಡ ಹೊಸಳ್ಳಿ, ಆಶನಾಳ ಗ್ರಾಮದ ಉದಯ ದೊಡ್ಮನಿ, ಸಿದ್ದು ಸಾಹುಕಾರ ಬಿರೆದಾರ, ಶಿವಾರಡ್ಡಿ, ಶರಣಗೌಡ, ಮಲ್ಲಪ್ಪ, ಕಿಶನ ಕುರಕುಂಬಳ ತಾಂಡಾ, ನೇಹರು ಆಶನಾಳ ತಾಂಡಾ, ಯಡ್ಡಳ್ಳಿ ಗ್ರಾಮದ ಭೋಜನಗೌಡ, ಸುಬ್ಬಾರಡ್ಡಿ, ಶರಣಪ್ಪ ಗಡೇದ್, ಶರಣಯ್ಯಸ್ವಾಮಿ, ಅಂಬರೇಶಗೌಡ ಬಂದಳ್ಳಿ, ಮಲ್ಲಣಗೌಡ ದಳಪತಿ, ಶರಣಗೌಡ ಮಾನ್ವಿ, ಬಾಬರಡ್ಡಿ, ಭೀಮರಾಯ ಬಂದಳ್ಳಿ, ನಾಗಪ್ಪ ಬಂದಳ್ಳಿ, ಸತ್ಯಪ್ಪ, ಸುಮುಂತ, ಮಂಜು ನಾಯಕ, ಶಿವಪ್ಪ ಯಡ್ಡಳ್ಳಿ, ನಾಗಪ್ಪ ಮಾಣೆನೋರ್, ನಿಂಗಪ್ಪ, ದೊಡ್ಡ ಭೀಮರಾಯ ಸೇರಿದಂತೆ ಇತರರಿದ್ದರು.

### ಯಾದಗಿರಿ ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆ ಶಾಸಕ ಕಂದಕೂರ ಗರಂ

ಗುರುಮಠಕಲ್ ಮತಕ್ಷೇತ್ರದ ಹೊನಗೇರಾ ಗ್ರಾಮದಲ್ಲಿ ನಡೆದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಭೇಟಿಯಾದ ನೂರಾರು ವಿದ್ಯಾರ್ಥಿನಿಯರ ನಿಯೋಗ ಯಾದಗಿರಿ ಜಿಲ್ಲಾ ಕೇಂದ್ರ ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆಗಳನ್ನು ಗಮನಕ್ಕೆ ತಂದ ಕೂಡಲೇ ಗರಂ ಆದ ಶಾಸಕರು ಮೇಲಾಧಿಕಾರಿಗಳಿಗೆ ಫೋನ್ ಮಾಡಿ ಕೂಡಲೇ ಸರಿಪಡಿಸಬೇಕು ಎಂದು ಸೂಚಿಸಿದರು. ಹಾಗೇಯೇ ಬಸ್ ವ್ಯವಸ್ಥೆ ಸರಿಪಡಿಸಬೇಕು, ವಿದ್ಯಾರ್ಥಿನಿಯರಿಗೆ ತೊಂದರೆಯಾದಲ್ಲಿ ಸೂಕ್ತ ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಎಚ್ಚರಿಸಿದರು. ಹಾಗೇಯೇ ಬಸ್ ನಿಲ್ದಾಣದಲ್ಲಿ ಪೊಲೀಸ್ ಬಂದೋಬಸ್ತ್ ಜೊತೆಗೆ ಬಸ್‌ನಲ್ಲಿ ನಿಗಾ ಇರಿಸಲು ಕೂಡ ತಿಳಿಸಲಾಗುವುದು ಎಂದು ವಿದ್ಯಾರ್ಥಿನಿಯರಿಗೆ ಭರವಸೆ ನೀಡಿದರು.

### ಗುರಮಠಕಲ್ ಶಾಸಕರ ಭೇಟಿಯ ಸಂದರ್ಭದಲ್ಲಿನ ಪ್ರಮುಖ ಭರವಸೆ

- ಅಕ್ಷರ ಅವಿಷ್ಕಾರದಲ್ಲಿ ಹೊನಗೇರಾ ಗ್ರಾಮಕ್ಕೆ ಶಾಲೆ ಕೋಣೆ ನಿರ್ಮಾಣಕ್ಕೆ ಭರವಸೆ
- ಪ್ರತಿಯೊಂದು ಗ್ರಾಮಕ್ಕೆ ಸೋಲಾರ ಕೊಟ್ಟಿವಿ, ಈಗಾಗಲೇ ರಸ್ತೆ, ಚರಂಡಿ ನಿರ್ಮಾಣಕ್ಕಾಗಿ 40 ಲಕ್ಷ ಅನುದಾನ ನೀಡಲಾಗಿದೆ.
- ಹೊನಗೇರಾ ಗ್ರಾಮದಲ್ಲಿನ ಗುಂಡಗುರ್ತಿ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಕಲ್ಯಾಣ ಮಂಟಪ ನಿರ್ಮಾಣಕ್ಕೆ 1ಕೋಟಿ ಅನುದಾನ
- ಬಸ್‌ನಲ್ಲಿ ವಿದ್ಯಾರ್ಥಿಗಳ ಸುರಕ್ಷತೆಗೆ ಕ್ರಮ
- ಸರ್ಕಾರದಿಂದ ಬರುವ ಎಲ್ಲಾ ಸೌಲಭ್ಯಗಳನ್ನು ನಾನು ಕೊಡ್ತಿನಿ, ತಂದೆ ತಾಯಿಗೆ ಗೌರವ ತರುವ ಕೆಲಸ ಮಕ್ಕಳು ಮಾಡಬೇಕು
- ನಮ್ ರೈತರಿಗೆ 7 ತಾಸು ಕರೆಂಟ್ ಕೊಡಿ ಜೆಸ್ಕಾಂ ಅಧಿಕಾರಿಗಳಿಗೆ ತಾಕೀತು
- ಹೊನಗೇರಾ ಶಾಲೆಯ ಶೌಚಾಲಯ, ಕಾಂಪೌಂಡ್ ಮಾಡಿಕೊಡ್ತಿನಿ
- ಆಶನಾಳ ಶಾಲೆಗೆ ಹೈಮಾಸ್ಕ ದೀಪ ಹಾಕಿಸುವ ಭರವಸೆ
- ಆಶನಾಳ ಗ್ರಾಮಕ್ಕೆ ಗ್ರಾಮ ಒನ್ ಮಾಡಿಸಿಕೊಡುವ ಭರವಸೆ

❛ ರಾಜ್ಯ ಸರ್ಕಾರದಲ್ಲಿ ರೈತರ ಮೇಲೆ ಕಿಂಚಿತ್ತಾದರೂ ಗೌರವ ಇದ್ದಲ್ಲಿ ಕೂಡಲೇ ರೈತರ ಸಾಲ ಮನ್ನಾ ಮಾಡುವ ವಿಚಾರ ಮಾಡಬೇಕು ಈ ಬಾರಿ ಮುಂಗಾರು ಮಳೆ ಕೊರತೆಯಿಂದ ರಾಜ್ಯದಲ್ಲಿ ರೈತರು ಸಂಕಷ್ಟದಲ್ಲಿದ್ದಾರೆ ಅವರ ನೆರವಿಗೆ ಬರಬೇಕಾಗಿರುವುದು ರಾಜ್ಯ ಸರ್ಕಾರದ ಮತ್ತು ಮುಖ್ಯಮಂತ್ರಿಗಳ ಕರ್ತವ್ಯ, ಒಂದು ವೇಳೆ ಕುಮಾರಣ್ಣ ಮುಖ್ಯಮಂತ್ರಿಯಾಗಿದ್ದರೆ ತತ್‌ಕ್ಷಣವೇ ರೈತರ ನೆರವಿಗೆ ಧಾವಿಸಿ ಬರುತ್ತಿದ್ದರು, ಈಗಿನ ಮುಖ್ಯಮಂತ್ರಿಗಳು ಕೇವಲ ಸಭೆಯಲ್ಲಿ ಬುಸಿಯಾಗಿದ್ದಾರೆ, ಕಡೆಪಕ್ಷ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿಯಾದರೂ ರೈತರ ಸಾಲ ಮನ್ನಾ ಮಾಡಿ ರೈತರನ್ನು ಉಳಿಸಿಕೊಳ್ಳುವ ಕೆಲಸ ಈ ಸರ್ಕಾರ ಮಾಡಬೇಕಿದೆ.

**– ಶರಣಗೌಡ ಕಂದಕೂರ ಶಾಸಕರು ಗುರುಮಠಕಲ್ ಮತಕ್ಷೇತ್ರ**




ಕಲಘಟಗಿ: ಪಟ್ಟಣದ ಪೊಲೀಸಠಾಣೆ ಬಳಿ ಟಿಸಿ ಇದ್ದ ವಿದ್ಯುತ ಕಂಬಕ್ಕೆ ಹುಬ್ಬಳ್ಳಿಯಿಂದ ಕಾರವಾರಕ್ಕೆ ಹೋರಟಿದ್ದ ಲಾರಿ ಚಾಲಕನ ನಿಯಂತ್ರಣ ತಪ್ಪಿ ಗುದ್ದಿದ ಪರಿಣಾಮ ಎನ್ ಎಚ್ಚ 63 ರಾಷ್ಟ್ರೀಯ ಹೆದ್ದಾರಿಯಲ್ಲಿ ಗಂಟೆಗಟ್ಟಲೆ ವಾಹನ ನಿಂತಿದ್ದರಿಂದ ಸಾರ್ವಜನಿಕರು ಪರದಾಟಪಡುವಂತಾಯಿತು. ಯಾವುದೇ ಪ್ರಾಣಪಾಯವಾಗಿಲ್ಲ.

## ಗಾಳಿಯ ರಭಸದಿಂದಾಗಿ ಧರೆಗುರುಳುತ್ತಿರುವ ವಿದ್ಯುತ್ ಕಂಬ, ಗಿಡಮರಗಳು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನಲ್ಲಿ ಈ ಬಾರಿ ಮಳೆಗಿಂತ ಗಾಳಿಯೇ ಹೆಚ್ಚು ಅನಾಹುತ ಸೃಷ್ಠಿಸಿದೆ. ಗಾಳಿಯ ವೇಗವಾದ ರಭಸಕ್ಕೆ ವಿದ್ಯುತ್ ಕಂಬಗಳ ಜತೆಗೆ ಗಿಡಮರಗಳು ಕೂಡ ಧರೆಗುರುತ್ತಿವೆ. ಹಲವು ಮನೆಗಳ ಮೇಲೆ ಗಿಡ ಮರಗಳು ಬಿದ್ದು ಸಾಕಷ್ಟು ಹಾನಿ ಉಂಟಾಗಿದೆ.

ಇಲ್ಲಿಯವರೆಗೆ ತಾಲೂಕಿನಲ್ಲಿ 161 ವಿದ್ಯುತ್ ಕಂಬಗಳು ಮುರಿದುಬಿದ್ದಿವೆ. ಹೀಗಾಗಿ ಹೆಸ್ಕಾಂ ಸಿಬ್ಬಂದಿಗಳು ಕೂಡ ನಿರಂತರವಾಗಿ ತಮ್ಮ ಕಾರ್ಯ ಮಾಡುತ್ತಲೇ ಇದ್ದಾರೆ. ಆಂದ್ಲೆ ಗ್ರಾಮದಲ್ಲಿ ಮರವೊಂದು ವಿದ್ಯುತ್ ಕಂಬದ ಮೇಲೆ ಬಿದ್ದು ಸಾಕಷ್ಟು ಹಾನಿ ಉಂಟಾಗಿದೆ. ಇದರಿಂದಾಗಿ ಸಿಬ್ಬಂದಿಗಳ ಕೊರತೆಯ ನಡುವೆಯು ಹೆಸ್ಕಾಂ ಸಿಬ್ಬಂದಿಗಳು ವಿದ್ಯುತ್ ಲೈನ್ ದುರಸ್ಥಿಗೊಳಿಸಲು ಪರದಾಡುತ್ತಿದ್ದಾರೆ.

## ಲಯನ್ಸ್ ಕ್ಲಬ್ ಕಾರ್ಯಕ್ರಮದಲ್ಲಿ ಸಾಧಕರಿಗೆ ಸನ್ಮಾನ




• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಲಾಯನ್ಸ್ ಕ್ಲಬ್ ಅಂಕೋಲಾ ಸಿಟಿ ಇದರ ನೂತನ ಅಧ್ಯಕ್ಷರಾಗಿ ಪ್ರದೀಪ ರಾಯ್ಕರ, ಕಾರ್ಯದರ್ಶಿಯಾಗಿ ಡಾ. ವಿಜಯದೀಪ ಎಂ., ಖಜಾಂಚಿಯಾಗಿ ಉದಯಕುಮಾರ ನೇರಲಕಟ್ಟೆ ಇವರು ಅಧಿಕಾರ ಸ್ವೀಕಾರ ಕಾರ್ಯಕ್ರಮ ಪಟ್ಟಣದ ನಾಡವರ ಸಮುದಾಯ ಭವನದಲ್ಲಿ ನಡೆಯಿತು.ಲಾಯನ್ಸ್ ಕ್ಲಬ್ ಪಿಡಿಜಿ ಶ್ರೀಕಾಂತ ಮೊರೆ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅಂಕೋಲಾ ಲಾಯನ್ಸ್ ಕ್ಲಬ್ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ನೂತನ ಅಧ್ಯಕ್ಷ ಪ್ರದೀಪ ರಾಯ್ಕರ ಮಾತನಾಡಿ, ಈಗಾಗಲೇ ಲಾಯನ್ಸ್ ಕ್ಲಬ್ ಸಾಕಷ್ಟು ವಿದಾಯಕ ಕಾರ್ಯಗಳನ್ನು ಮಾಡಿದ್ದು, ನನ್ನ ಅಧಿಕಾರ ಅವಧಿಯಲ್ಲಿ ಇನ್ನು ಹೆಚ್ಚಿನ ಸೇವೆ ಸಲ್ಲಿಸಲು ಬದ್ಧನಾಗಿದ್ದೇನೆ ಎಂದರು. ರಿಜನಲ್ ಚೇರಪರ್ಸನ್ ವಿನಯ ನಾಯ್ಕ, ಲಾಯನ್ಸ್ ಕ್ಲಬ್‌ನ ಡಾ. ಶಾಂತಾರಾಮ ಶಿರೋಡ್ಕರ, ಕೃಷ್ಣಾನಂದ ವಿ. ಶೆಟ್ಟಿ ಮಾತನಾಡಿದರು. ನಿಕಟಪೂರ್ವ ಅಧ್ಯಕ್ಷ ಶಶಿಧರ ಶೇಣ್ವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್. ಎಚ್.ನಾಯ್ಕ ವರದಿ ವಾಚಿಸಿದರು. ವಿಜಯಾ ಭಟ್ ಪ್ರಾರ್ಥಿಸಿದರು. ಜಿ.ಎಂ.ಹೆಗಡೆ ವಂದಿಸಿದರು. ಸನ್ಮಾನ : ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗುರುತಿಸಿಕೊಂಡ ಡಾ. ವೆಂಕಟೇಶ ಕೇಣಿಕರ, ಕಿರಣ ಕೇಣಿಕರ, ವಾಸುದೇವ ಗುನಗಾ ಇವರಿಗೆ ಸನ್ಮಾನಿಸಿ ಗೌರವಿಸಿದರು.

## ಜೇವರ್ಗಿಯಲ್ಲಿ ಜಾಥಾಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.08–"ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ" ದ ಅಂಗವಾಗಿ ಜೇವರ್ಗಿ ಕೋರ್ಟ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಾಥಾಕ್ಕೆ ಜೇವರ್ಗಿ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ತಯ್ಯಬಾ ಸುಲ್ತಾನಾ ಅವರು ಬುಧವಾರ ಚಾಲನೆ ನೀಡಿದರು.

# ಬಂಗಾಳದಲ್ಲಿ ಸಂಘ ಪರಿವಾರದ ಫ್ಯಾಸಿಸ್ಟ್ ದಾಳಿ ನಿಲ್ಲಿಸಲಿ: ಗಂಗಾಧರ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.08.ಆರ್‌ಎಸ್‌ಎಸ್–ಬಿಜೆಪಿ ನೇತೃತ್ವದ ಹಿಂದೂತ್ವ ಫ್ಯಾಸಿಸಂ ವಿರುದ್ಧ ಪ್ರಜಾಸತ್ತಾತ್ಮಕ ಶಕ್ತಿಗಳು ಪಶ್ಚಿಮ ಬಂಗಾಳದಲ್ಲಿ ಅಲ್ಪಸಂಖ್ಯಾತರ ಆರಾಧನಾ ಸ್ಥಳಗಳ ಮೇಲೆ ನಡೆಯುತ್ತಿರುವ ದಾಳಿಗಳು, ದ್ವೇಷದ ರಾಜಕೀಯ ಮತ್ತು ಭೀತಿಯ ವಾತಾವರಣವನ್ನು ನಿರ್ಮಿಸುವ ಪ್ರಯತ್ನಗಳು ಅತ್ಯಂತ ಆತಂಕಕಾರಿ ಬೆಳವಣಿಗೆಗಳಾಗಿವೆ ಎಂದು ಸಿಪಿಐಎಂಎಲ್ ರೆಡ್ ಸ್ಟಾರ್ ರಾಜ್ಯ ಸಮಿತಿ ಕಾರ್ಯದರ್ಶಿಎಂ, ಗಂಗಾಧರ ವಿಷಾದ ವ್ಯಕ್ತಪಡಿಸಿದರು.

ಇವು ಕೇವಲ ಪ್ರತ್ಯೇಕ ಘಟನೆಗಳಲ್ಲ; ದೇಶದ ಸಂವಿಧಾನಬದ್ಧ, ಜಾತ್ಯಾತೀತ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳ ಮೇಲಿನ ಸಂಘಟಿತ ದಾಳಿಗಳ ಭಾಗವಾಗಿವೆ

ಬಂಗಾಳದಲ್ಲಿ ನಡೆಯುತ್ತಿರುವ ಈ ಫ್ಯಾಸಿಸ್ಟ್ ಪ್ರವೃತ್ತಿಗಳನ್ನು ತೀವ್ರವಾಗಿ ಖಂಡಿಸುತ್ತದೆ. ಧರ್ಮ, ಜಾತಿ ಮತ್ತು ಸಮುದಾಯಗಳ ನಡುವೆ ದ್ವೇಷ ಬಿತ್ತಿ ರಾಜಕೀಯ ಲಾಭ ಪಡೆಯುವ ಆರ್‌ಎಸ್‌ಎಸ್ –ಬಿಜೆಪಿಯ ಹಿಂದೂತ್ವ ರಾಜಕೀಯವು ದೇಶದ ಏಕತೆ ಮತ್ತು ಪ್ರಜಾಪ್ರಭುತ್ವಕ್ಕೆ ಗಂಭೀರ ಅಪಾಯವಾಗಿದೆ.

ಇದಕ್ಕೂ ಮೊದಲು ಬಂಗಾಳದಲ್ಲಿ ಕ್ರಾಂತಿಕಾರಿ ನಾಯಕ ಲೆನಿನ್ ಅವರ ಪ್ರತಿಮೆಯನ್ನು ಧ್ವಂಸಗೊಳಿಸಿದ ಘಟನೆ, ಇಂದು



ಅಲ್ಪಸಂಖ್ಯಾತರ ಧಾರ್ಮಿಕ ಕೇಂದ್ರಗಳ ಮೇಲೆ ನಡೆಯುತ್ತಿರುವ ದಾಳಿಗಳು ಇವೆಲ್ಲವೂ ಭಿನ್ನಾಭಿಪ್ರಾಯಗಳನ್ನು ಮತ್ತು ಪ್ರಜಾಸತ್ತಾತ್ಮಕ ಧ್ವನಿಗಳನ್ನು ಹತ್ತಿಕ್ಕುವ ಫ್ಯಾಸಿಸ್ಟ್ ರಾಜಕೀಯದ ಲಕ್ಷಣಗಳಾಗಿವೆ

ಸಂವಿಧಾನದ ಆಶಯಗಳಿಗೆ ಬದ್ಧವಾಗಿರುವ ಎಲ್ಲಾ ಪ್ರಜಾಸತ್ತಾತ್ಮಕ, ಜಾತ್ಯಾತೀತ,ಕಾರ್ಮಿಕ, ರೈತ, ವಿದ್ಯಾರ್ಥಿ, ಯುವಜನ, ಮಹಿಳಾ ಹಾಗೂ ಜನಪರ ಸಂಘಟನೆಗಳು ಈ ಅಪಾಯಕಾರಿ ಪ್ರವೃತ್ತಿಯ ವಿರುದ್ಧ ಐಕ್ಯ ಹೋರಾಟ ಕಟ್ಟಬೇಕಾಗಿದೆ. ಮೌನವು ಫ್ಯಾಸಿಸಂಗೆ ಬಲ ನೀಡುತ್ತದೆ; ಪ್ರತಿರೋಧ ಮಾತ್ರ ಪ್ರಜಾಪ್ರಭುತ್ವವನ್ನು ರಕ್ಷಿಸುತ್ತದೆ

ಕೇಂದ್ರ ಮತ್ತು ಸಂಬಂಧಿತ ರಾಜ್ಯ ಸರ್ಕಾರಗಳು ಬಂಗಾಳದಲ್ಲಿ ನಡೆದಿರುವ ಹಿಂಸಾಚಾರ ಹಾಗೂ ಆರಾಧನಾ ಸ್ಥಳಗಳ ಮೇಲಿನ ದಾಳಿಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ದ್ವೇಷ ಪ್ರಚೋದನೆ ಮತ್ತು ಸಾಮುದಾಯಿಕ ಹಿಂಸೆಯನ್ನು ಪ್ರೋತ್ಸಾಹಿಸುವ ಶಕ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು.

ದೇಶದ ಸಂವಿಧಾನ, ಪ್ರಜಾಪ್ರಭುತ್ವ, ಜಾತ್ಯಾತೀತತೆ ಮತ್ತು ಜನರ ಹಕ್ಕುಗಳನ್ನು ರಕ್ಷಿಸಲು ಎಲ್ಲ ಪ್ರಗತಿಪರ ಹಾಗೂ ಪ್ರಜಾಸತ್ತಾತ್ಮಕ ಶಕ್ತಿಗಳು ಸಂಘಟಿತರಾಗಿ ಹೋರಾಟವನ್ನು ತೀವ್ರಗೊಳಿಸಬೇಕೆಂದು ಸಿಪಿಐ ಎಂಎಲ್ ರೆಡ್ ಸ್ಟಾರ್ ಕರ್ನಾಟಕ ರಾಜ್ಯ ಸಮಿತಿಯು ಕರೆ ನೀಡುತ್ತದೆ.ಎಂದು ಎಂ.ಗಂಗಾಧರರಾಜ್ಯಕಾರ್ಯದರ್ಶಿಸಿಪಿಐಎಂಎಲ್ ರೆಡ್ ಸ್ಟಾರ್ ಕರ್ನಾಟಕ ತಿಳಿಸಿದ್ದಾರೆ

# ಹಾರವಾಡದ ಕಡಲಕೊರೆತಕ್ಕೆ ಶಾಶ್ವತ ಪರಿಹಾರ ಯಾವಾಗ..?





ನಾಗರಾಜ ಮಂಜಗುಣಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಕಳೆದ ಹಲವು ವರ್ಷಗಳಿಂದ ಹಾರವಾಡ ಎಂಬ ಗ್ರಾಮವು ಕಡಲಕೊರೆತದಿಂದಾಗಿ ಸಾಕಷ್ಟು ನಷ್ಟ ಅನುಭವಿಸಿದೆ. ಈ ಗ್ರಾಮದಲ್ಲಿ ಇರುವವರೆಲ್ಲರೂ ಬಹುತೇಕ ಮೀನುಗಾರರು. ಹೀಗಾಗಿ ಇವರು ಕಡಲನ್ನೇ ನಂಬಿಕೊಂಡು ಸಮೀಪದಲ್ಲಿಯೇ ವಾಸವಾಗಿದ್ದವರು. ಆದರೆ ವರ್ಷದಿಂದ ವರ್ಷಕ್ಕೆ ಉಂಟಾಗುವ ಕಡಲಕೊರೆತದಿಂದಾಗಿ ಸಾಕಷ್ಟು ಜನರು ತಮ್ಮ ಮನೆಮಠವನ್ನು ಕಳೆದುಕೊಂಡಿದ್ದಾರೆ. ಹೀಗಾಗಿ ಹಾರವಾಡದ ಕಡಲಕೊರೆತಕ್ಕೆ ಶಾಶ್ವತ ಪರಿಹಾರವೇನು ಎನ್ನುವುದು ಈಗ ಒಂದು ರೀತಿಯ ಯಕ್ಷಪ್ರಶ್ನೆಯಾಗಿದೆ.

ಉಡುಪಿ ಜಿಲ್ಲೆಯ ಬೈಂದೂರು ತಾಲೂಕು ವ್ಯಾಪ್ತಿಯ ಕಡಲ ತೀರಗಳಲ್ಲಿ ಚಿರೆಕಲ್ಲಿನಲ್ಲಿ ನಿರ್ಮಿಸಲಾದ ತಡೆಗೋಡೆಯಂತೆ ಇಲ್ಲಿಯೂ ಕೂಡ ನಿರ್ಮಿಸಿದರೆ ಇದಕ್ಕೊಂದು ಶಾಶ್ವತ ಪರಿಹಾರ ಸಾಧ್ಯವಿದೆ ಎನ್ನುವುದು ಸ್ಥಳೀಯ ಮೀನುಗಾರರು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಪ್ರತಿವರ್ಷ ಒಂದೆರಡು ಮನೆ ತೆಂಗಿನಮರ ಸೇರಿದಂತೆ ಸಾಕಷ್ಟು ಆಸ್ತಿಪಾಸ್ತಿಗಳು ಹಾನಿಗೊಳಗಾಗಿವೆ. ಆದರೆ ತಾತ್ಕಾಲಿಕವಾಗಿ ತಡೆಗೋಡೆ ನಿರ್ಮಿಸಿದರು ಕೂಡ ಮಳೆಗಾಲದಲ್ಲಿ ಕಡಲಬ್ಬರದಿಂದಾಗಿ ಕಲ್ಲುಗಳನ್ನು ಕೂಡ ಕೊಚ್ಚಿಕೊಂಡು ಹೋಗುತ್ತಿದೆ.

ಹತ್ತಾರು ಕುಟುಂಬಗಳು ಈಗಾಗಲೇ ಸ್ಥಳಾಂತರಗೊಂಡಿದೆ. ಕೆಲವರು ಬೇರೆ ಕಡೆ ಜಾಗ ಖರೀದಿಸಿ ಮನೆ ನಿರ್ಮಿಸಿದ್ದಾರೆ. ಆದರೆ ಕೆಲವು ಸಾಮಾನ್ಯ ಮೀನುಗಾರರು ಜಾಗ ಖರೀದಿಸಲಾಗದೆ, ಹೊಸ ಮನೆ ನಿರ್ಮಿಸಲಾಗದೆ ವ್ಯಥೆ ಪಡುವಂತಾಗಿದೆ. ಹೀಗಾಗಿ ಮೀನುಗಾರಿಕೆಯ ದೃಷ್ಟಿಯಿಂದಲೇ ಕಡಲಕೊರೆತಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಾಗಿದೆ. ಮಳೆ ಇಲ್ಲದಿದ್ದರೂ ಕೂಡ ಗಾಳಿ ಜೋರಾದಾಗ ಅಲೆಗಳ ಅಬ್ಬರ ದಡಕ್ಕೆ ಬಂದು ಅಪ್ಪಳಿಸುತ್ತದೆ. ಇದರಿಂದಾಗಿ ಕಲ್ಲುಗಳ ಜತೆಗೆ ಉಸುಕಿನ ದಿಬ್ಬವನ್ನು ಕೂಡ ಬಲಿಪಡೆಯುತ್ತದೆ.

> ಹಾರವಾಡದ ಜನರು ಹಲವು ವರ್ಷಗಳಿಂದ ಪ್ರತಿ ಮಳೆಗಾಲದಲ್ಲಿ ಸಾಕಷ್ಟು ಸಮಸ್ಯೆಯನ್ನು ಅನುಭವಿಸುತ್ತಲೇ ಬರುತ್ತಿದ್ದಾರೆ. ಆದರೆ ಶಾಶ್ವತ ಪರಿಹಾರ ಇದುವರೆಗೂ ಮರಿಚಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಶಾಶ್ವತ ಪರಿಹಾರ ಪ್ರಯತ್ನಿಸಬೇಕಾಗಿದೆ.
> – ಉಮೇಶ ಹರಿಕಾಂತ ಮೀನುಗಾರ, ಹಾರವಾಡ

ಈ ವರ್ಷವೂ ಕೂಡ ಹಾರವಾಡದ ಪರಿಸ್ಥಿತಿ ತುಂಬ ಚಿಂತಾಜನಕವಾಗಿದೆ. ಹತ್ತಾರು ತೆಂಗಿನಮರಗಳು, ಶೌಚಾಲಯ ಸಮುದ್ರ ಪಾಲಾಗಿದೆ. ಹಾಗೇ ಸಾಕಷ್ಟು ಮನೆಗಳ ಮೇಲ್ಛಾವಣಿ ಕೂಡ ಹಾರಿಹೋಗಿದೆ. ಅಷ್ಟರಮಟ್ಟಿಗೆ ಗಾಳಿ ವೇಗವಾಗಿ ಬೀಸುತ್ತದೆ. ಇತ್ತೀಚಿಗೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ ಅವರಿಗೆ ಸ್ಥಳೀಯರು ಮನವಿಯನ್ನು ನೀಡಿ ಶಾಶ್ವತ ಪರಿಹಾರ ಕಲ್ಪಿಸುವಂತೆ ವಿನಂತಿಸಿಕೊಂಡಿದ್ದಾರೆ. ಇವರ ಮನವಿಗೆ ಸಕರಾತ್ಮಕವಾಗಿ ಸಚಿವರು ಪ್ರತಿಕ್ರಿಯಿಸಿದ್ದಾರೆ.

ಉಡುಪಿ ಮಾದರಿಯಲ್ಲಿ ತಡೆಗೋಡೆ ನಿರ್ಮಿಸಿದರೆ ಇಲ್ಲಿಯ ಸಮಸ್ಯೆ ಕಡಿಮೆಯಾಗುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾರವಾಡದ ಕಡಲಕೊರೆತದ ಬಗ್ಗೆ ಗಂಭೀರವಾಗಿ ಪರಿಗಣಿಸಿ ಸರಕಾರಕ್ಕೆ ವರದಿ ಸಲ್ಲಿಸಬೇಕಾಗಿದೆ. ಇನ್ನು ಶಾಸಕ ಸತೀಶ ಸೈಲ್, ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ ಇವರ ಪ್ರಯತ್ನವು ಅತಿಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಚಿಂತಿಸಬೇಕಾಗಿದೆ.

# ಜಾತಿ ಜನಗಣತಿಯ ಹೆಸರಿನಲ್ಲಿ ಓಟಿನ ರಾಜಕೀಯ ಕಾಂಗ್ರೆಸ್ ವಿರುದ್ಧ ಪ್ರಮೋದ್ ಮಧ್ವರಾಜ್ ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಕರ್ನಾಟಕ ಸರ್ಕಾರ ಜಾತಿ ಜನಗಣತಿಯ ಹೆಸರಿನಲ್ಲಿ ಓಟಿನ ರಾಜಕೀಯ ಬಿಟ್ಟರೆ ಮತ್ತೇನು ಮಾಡಿಲ್ಲ. ಕೇಂದ್ರ ಸರ್ಕಾರವೇ ಅಧಿಕೃತವಾಗಿ ಜಾತಿ ಜನಗಣತಿಯ ಸಿದ್ಧತೆ, ಪ್ರಕ್ರಿಯೆ ಆರಂಭಿಸಿದ್ದು, ಆಮೂಲಕವೇ ಕರ್ನಾಟಕದ ಜನತೆ ಸಾಮಾಜಿಕ ನ್ಯಾಯ ಪಡೆದುಕೊಳ್ಳಬೇಕಾಗಿದೆ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ಹಿರಿಯ ಮುಖಂಡ ಪ್ರಮೋದ್ ಮಧ್ವರಾಜ್ ಅವರು ಹೇಳಿದರು.

ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಬದ್ಧತೆಯ ರಾಜಕಾರಣದ ಕೊರತೆಯಿಂದ ಹಿಂದುಳಿದ ವರ್ಗಗಳಿಗೆ ಅನ್ಯಾಯ ಆಗಿದೆ. ಜಾತಿ ಜನಗಣತಿಯ ಹೆಸರಿನಲ್ಲಿ ಲೂಟಿ ಮಾಡಲಾಗುತ್ತಿದೆ ಎಂದು ದೂರಿದರು.

2013ರಲ್ಲಿ ಮೂಲ ಕಾಂಗ್ರೆಸ್ಸಿಗರನ್ನು ಮೂಲೆಗೆ ಹಾಕಿ ಅಧಿಕಾರದ ಚುಕ್ಕಾಣಿ ಹಿಡಿದ ಸಿದ್ಧರಾಮಯ್ಯನವರು ಜಾತಿ ಜನಗಣತಿಯ ವಿಷಯದಲ್ಲಿ ಬರೀ ಮಾತಿನ ಶೂರರಾದರು, ಒಬಿಸಿ ಸಮುದಾಯಗಳ ಅಶೋತ್ತರಗಳಿಗೆ ಕವಡೆ ಕಾಸಿನ ಕಿಮ್ಮತ್ತು ಸಿಗದಂತೆ ಮಾಡಿದರು. 600 ಕೋಟಿ ರೂ,ಗಳ ತೆರಿಗೆ ಹಣ ಮುಳುಗಿಸಿ ಕೈತೊಳೆದುಕೊಂಡಿದ್ದಾರೆ. 2014ರಲ್ಲಿ ಕಾಂತರಾಜ್ ಆಯೋಗಕ್ಕೆ ಜಾತಿ ಜನಗಣತಿ ಜವಾಬ್ದಾರಿ ಕೊಡಲಾಯಿತು. ಆನಂತರ ಜಯಪ್ರಕಾಶ್ ಹೆಗ್ಡೆ ಆಯೋಗಕ್ಕೆ ವಹಿಸಲಾಯಿತು. ಕೊನೆಗೆ 10 ವರ್ಷದ ನಂತರ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಹೆಸರಿನ ಜಾತಿ ಜನಗಣತಿಯ ವರದಿ ಮೂಲೆ ಸೇರಿತು ಎಂದು ಅವರು ಆಕ್ರೋಶ ಹೊರಹಾಕಿದರು.

ಬಿಹಾರದ ನಿತೀಶ್ ಕುಮಾರ್, ತೆಲಂಗಾಣದ ರೇವಂತ ರೆಡ್ಡಿ ಅವರು ಒಂದು ವರ್ಷದ ಕಾಲಮಿತಿಯಲ್ಲಿ ಮಾಡಿ ಮುಗಿಸಿದ ಕೆಲಸವನ್ನು, ಸಿದ್ಧರಾಮಯ್ಯನವರು 10 ವರ್ಷ ಕಾಲಹರಣ ಮಾಡಿ ಒಬಿಸಿ ಸಮುದಾಯಗಳನ್ನು ದಿಕ್ಕು ತಪ್ಪಿಸಿದ್ದಾರೆ ಎಂದು ರೋಪಿಸಿದ ಅವರು, ಕಳೆದ ವರ್ಷ ಸಿದ್ಧರಾಮಯ್ಯನವರು ಮತ್ತೊಂದು ಜಾತಿಗಣತಿಗೆ ಮುಂದಾದರು ಜೂನ್ 15 2025ರಂದು ಸಚಿವ ಸಂಪುಟ ಸಭೆಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಮಧುಸೂದನ್ ನಾಯಕ್ ನೇತೃತ್ವದಲ್ಲಿ ಮತ್ತೊಂದು ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯನ್ನು ಘೋಷಿಸಿದರು. ತಂತ್ರಜ್ಞಾನ ಬಳಸಿ ಸಮೀಕ್ಷೆ ಮಾಡಲಾಗುತ್ತಿದ್ದು ಮೂರೇ ತಿಂಗಳಲ್ಲಿ ವರದಿ ಸಿದ್ಧವಾಗುತ್ತದೆ ಎಂದು ಅಂದಿನ ಮುಖ್ಯಮಂತ್ರಿ ಸಿದ್ಧರಾಮಯ್ಯ ಘೋಷಿಸಿದ್ದರು ಎಂದು ಅವರು ಹೇಳಿದರು.

3 ತಿಂಗಳಲ್ಲ, 6 ತಿಂಗಳಲ್ಲ ಒಂದು ವರ್ಷವಾದರೂ ಜಾತಿ ಜನಗಣತಿ ಪ್ರಕ್ರಿಯೆ ಮುಗಿಯುತ್ತಿಲ್ಲ. ಸಮೀಕ್ಷೆ ಶುರುವಾದದ್ದೆ ಸೆಪ್ಟೆಂಬರ್ 22ಕ್ಕೆ. ಆಗಲೇ ಮೊದಲ ಮೂರು ತಿಂಗಳು ಮುಗಿದಿತ್ತು. ನವಂಬರ್ 10ಕ್ಕೆ ಸಮೀಕ್ಷೆ ಮುಗಿದರೂ ಆರು ತಿಂಗಳಾದರೂ ಸಮೀಕ್ಷೆಯ ವರದಿ ಪೂರ್ತಿಯಾಗಿರಲಿಲ್ಲ. ಮೇ 26ಕ್ಕೆ ಸಿದ್ಧರಾಮಯ್ಯನವರಿಗೆ ರಾಜೀನಾಮೆ ಕೊಡಲು ಕಾಂಗ್ರೆಸ್ ಹೈಕಮಾಂಡ್ ಆದೇಶಿಸಿತು . ಮರುದಿನ ಮೇ 27ರಂದು ಸಿದ್ಧರಾಮಯ್ಯ ತರಾತುರಿಯಲ್ಲಿ ವರದಿ ಸ್ವೀಕರಿಸಿದ ಶಾಸ್ತ್ರ ಮಾಡಿದರು. ಬದ್ಧತೆ ಇದ್ದಿದ್ದರೆ ಆಯೋಗ ಚುರುಕಾಗಿ ಕಾರ್ಯ ನಿರ್ವಹಿಸುವಂತೆ ಮಾಡಿ, ಶಿಫಾರಸ್ಸುಗಳನ್ನು ಜಾರಿಗೆ ತರಲು ಮುಂದಾಗಬೇಕಿತ್ತಲ್ಲವೇ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಪತ್ರಿಕೆಗಳಲ್ಲಿ ಸೋರಿದ ವರದಿಗಳು ಬಂದವು . ಜೂನ್ 16ರಂದು ಜಾತಿ ಜನಗಣತಿಯ ವಿಷಯ ಹೈಕೋರ್ಟ್ ಮೆಟ್ಟಿಲು ಏರಿದೆ. ಈಗ ಆಗಸ್ಟ್ 20ಕ್ಕೆ ಪ್ರಕರಣ ಮುಂದೆ ಹೋಗಿದೆ. ಕರ್ನಾಟಕ ಸರ್ಕಾರ ಕಾನೂನು ಹೋರಾಟದಲ್ಲಿಯೂ ಸರಿಯಾದ ಸಿದ್ಧತೆ ಮಾಡದೆ ವಿಫಲವಾಗಿದೆ. ಹೊಸ ಮುಖ್ಯಮಂತ್ರಿಗಳು ಜಾತಿ ಜನಗಣತಿಯ ಬಗ್ಗೆ ಒಂದು ಶಬ್ದವನ್ನು ಮಾತನಾಡುತ್ತಿಲ್ಲ. ಕಾಂಗ್ರೆಸ್ಸಿನಲ್ಲಿರುವ ಹಿಂದುಳಿದ ವರ್ಗಗಳ ನಾಯಕರಿಗೆ ಮಂತ್ರಿ ಸ್ಥಾನ, ಖಾತೆಗಳದ್ದೆ ಚಿಂತೆಯಾಗಿದೆ ಎಂದು ಅವರು ಟೀಕಿಸಿದರು.

ಫೆಬ್ರವರಿ ತಿಂಗಳ ರಾಜ್ಯಪಾಲರ ಭಾಷಣದಲ್ಲಿ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯ ಬಗ್ಗೆ ಒಂದು ಸಾಲೂ ಇರಲಿಲ್ಲ, ಮುಖ್ಯಮಂತ್ರಿಗಳ ಬಜೆಟ್ ಭಾಷಣದಲ್ಲಿಯೂ ಉಲ್ಲೇಖವಿಲ್ಲ. ಸರ್ಕಾರದ ನಿರ್ಲಕ್ಷ್ಯತೆಗೆ ಮತ್ಯಾವ ಸಾಕ್ಷಿ ಬೇಕು?, ಕರ್ನಾಟಕ ಸರ್ಕಾರ ಜಾತಿ ಜನಗಣತಿಯ ಹೆಸರಿನಲ್ಲಿ ಓಟಿನ ರಾಜಕೀಯ ಬಿಟ್ಟರೆ ಮತ್ತೇನು ಮಾಡಿಲ್ಲ. ಕೇಂದ್ರ ಸರ್ಕಾರವೇ ಅಧಿಕೃತವಾಗಿ ಜಾತಿ ಜನಗಣತಿಯ ಸಿದ್ಧತೆ, ಪ್ರಕ್ರಿಯೆ ಆರಂಭಿಸಿದ್ದು, ಆಮೂಲಕವೇ ಕರ್ನಾಟಕದ ಜನತೆ ಸಾಮಾಜಿಕ ನ್ಯಾಯ ಪಡೆದುಕೊಳ್ಳಬೇಕಾಗಿದೆ. ಕರ್ನಾಟಕದ ಜನತೆ ಅದರಲ್ಲೂ ವಿಶೇಷವಾಗಿ ಹಿಂದುಳಿದ ವರ್ಗಗಳು ರೋಸಿ ಹೋಗಿ ರೊಚ್ಚಿಗೆದ್ದು ಬೀದಿಗಿಳಿಯುವ ದಿನ ದೂರವಿಲ್ಲ ಎಂದು ಅವರು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಅವ್ವಣ್ಣ ಮ್ಯಾಕೇರಿ, ಶರಣಪ್ಪ ತಳವಾರ್, ಸುಭಾಷ ಗುತ್ತೇದಾರ್, ರೇವಣಸಿದ್ದಪ್ಪ ಸಂಕಾಲಿ, ವೆಂಕಟೇಶ್ವರಪ್ಪ, ಬಸವರಾಜ್ ಸಪ್ಪಣಗೋಳ್, ಲಿಂಗರಾಜ್ ಬಿರಾದಾರ್, ವಿದ್ಯಾಧರ್ ಮಂಗಳೂರೆ, ನಿಂಗಣ್ಣ ಹುಳಗೋಳಕರ್, ದೇವಿಂದ್ರ ಮುತ್ತಕೋಡ್, ಶರಣಗೌಡ ಪಾಟೀಲ್, ಬಸವರಾಜ್ ಗುಂಡಲಗೇರಿ ಮುಂತಾದವರು ಉಪಸ್ಥಿತರಿದ್ದರು.

## 11 ರಂದು 'ಸ್ವಾತಂತ್ರ್ಯದ ಓಟ' ನಾಟಕ ಪ್ರದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.08–ಕಲಬುರಗಿರಂಗಾಯಣದಸಂಯುಕ್ತಾಶ್ರಯದಲ್ಲಿ "ಸ್ವಾತಂತ್ರ್ಯದ ಓಟ"ನಾಟಕ ಪ್ರದರ್ಶನವು ಜುಲೈ 11 ರಂದು ಶನಿವಾರ ಸಂಜೆ 6 ಗಂಟೆಗೆ ಕಲಬುರಗಿ ನಗರದ ಡಾ. ಎಸ್. ಎಂ. ಪಂಡಿತ ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿದೆ ಎಂದು ಕಲಬುರಗಿ ರಂಗಾಯನ ನಿರ್ದೇಶಕರಾದ ಡಾ. ಸುಜಾತಾ ಜಂಗಮಶೆಟ್ಟಿ ಅವರು ತಿಳಿಸಿದ್ದಾರೆ.ಶಿವಮೊಗ್ಗ ರಂಗಾಯಣದ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಶ್ರೀ ಬೊಳುವಾರ ಮಹಮ್ಮದ್ ಕುಂಞ ಅವರ ಕಾದಂಬರಿಯ ರಂಗರೂಪ, ಶ್ರೀ ನಟರಾಜ್ ಹೊನ್ನವಳ್ಳಿ ಅವರ ನಿರ್ದೇಶನದ ಶ್ರೀ ರಾಘವ ಕಮ್ಮಾರ ಇವರ ಸಂಗೀತದ, ರಂಗಾಯಣ,



ಶಿವಮೊಗ್ಗ ಪ್ರಸ್ತುತಿಯ ಈ ನಾಟಕ ಪ್ರದರ್ಶನಕ್ಕೆ ಸಾರ್ವಜನಕರಿಗೆ ಪ್ರವೇಶ ಉಚಿತವಿದ್ದು, ರಂಗಾಸಕ್ತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಾಟಕ ವೀಕ್ಷಿಸಬೇಕೆಂದು ಅವರು ತಿಳಿಸಿದ್ದಾರೆ.

## ಪದ್ಮ ಶ್ರೇಣಿಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪದ್ಮಶ್ರೇಣಿಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2027ನೇ ಸಾಲಿನ ಪದ್ಮಶ್ರೇಣಿ ಪ್ರಶಸ್ತಿಗಳಿಗೆ ಮಹಿಳಾ ಸಾಧಕರು, ಸಾಮಾಜಿಕ ಕಾರ್ಯಕರ್ತರು, ಗ್ರಾಮೀಣ ಮತ್ತು ಬುಡಕಟ್ಟು ಪ್ರದೇಶಗಳಲ್ಲಿ ಕೆಲಸ ಮಾಡುತ್ತಿರುವವರು ಮತ್ತು ಮಹಿಳೆಯರು ಮತ್ತು ಮಕ್ಕಳ ಕಲ್ಯಾಣ, ಪೋಷಣೆ, ಮಹಿಳೆಯರ ಮೇಲಿನ ಅಪರಾಧಗಳ ತಡೆಗಟ್ಟುವಿಕೆ, ಹೆಣ್ಣು ಮಕ್ಕಳ ರಕ್ಷಣೆ, ದುರ್ಬಲ ವರ್ಗಗಳ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಂಬಂಧಿತ ವಲಯಗಳಿಗೆ ಕೊಡುಗೆ ನೀಡಿರುವವರನ್ನು ಗುರುತಿಸಿ ಅಂತಹ ಮಹಿಳೆಯರ ಹೆಸರುಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಶಿಫಾರಸ್ಸು ಮಾಡುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರು ಸೂಚನೆ ನೀಡಿದ್ದು, ವಿವಿಧ ಕ್ಷೇತ್ರಗಳಲ್ಲಿ ಕೊಡುಗೆ ನೀಡಿದಂತಹ ಕೊಪ್ಪಳ ಜಿಲ್ಲೆಯ ಅರ್ಹ ಮಹಿಳೆಯರು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಇಲ್ಲಿ ಅರ್ಜಿಗಳನ್ನು ಪಡೆದು ಜುಲೈ 9ರ (ಕಛೇರಿ ಅವಧಿಯೊಳಗೆ) ಅರ್ಜಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಅಥವಾ ದೂರವಾಣಿ ಸಂ: 08539–230121ಗೆ ಸಂಪರ್ಕಿಸುವಂತೆ ಇಲಾಖಾ ಸಹಾಯಕ ನಿರ್ದೇಶಕರು ಪ್ರಕಟಣೆ ತಿಳಿಸಿದ್ದಾರೆ.

# ಅತಿ ಶೀಘ್ರ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ; ಅದ್ಧೂರಿ ಕಾರ್ಯಕ್ರಮಕ್ಕೆ ಯೋಜನೆ: ಶಾಸಕ ಭರತ್ ರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೆಲ ಕಾರಣಗಳಿಂದ ಮಹರ್ಷಿ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮ ಮುಂದೂಡಲ್ಪಟ್ಟಿದ್ದು, ಅತಿ ಶೀಘ್ರ ಅನಾವರಣ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಮಂಗಳವಾರ ನಗರದ ಸೊಂತ ಲಿಂಗಣ್ಣ ಕಾಲೋನಿಯಲ್ಲಿ ಏರ್ಪಡಿಸಿದ್ದ ಪಾರ್ಕ್ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆಯಲ್ಲಿ ಭಾಗವಹಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಈ ಹಿಂದೆ ಒಂದು ದುರ್ಘಟನೆ ನಡೆದು ಕಾರ್ಯಕ್ರಮ ಮುಂದೂಡಲ್ಪಟ್ಟಿತ್ತು, ಆದರೆ ಈಗ ಯಾರೇ ಅಡ್ಡ ಬಂದರೂ ಕಾರ್ಯಕ್ರಮ ನಿಲ್ಲುವುದಿಲ್ಲ, ಈ ಹಿಂದೆ ಅಂದುಕೊಂಡದ್ದಕ್ಕಿಂತ ಅದ್ಧೂರಿಯಾಗಿ ಅನಾವರಣ ಕಾರ್ಯಕ್ರಮ ಏರ್ಪಡಿಸಲಿದ್ದೇವೆ ಎಂದರು.

ಕೊಳಗಲ್ ರಸ್ತೆಯ ಅಭಿವೃದ್ಧಿಗೆ ಸಂಬಂಧಿಸಿ ಮರಗಳ ತೆರವು ವಿಚಾರಕ್ಕೆ ಪ್ರತಿಕ್ರಿಯಿಸಿದ ಶಾಸಕ ನಾರಾ ಭರತ್ ರೆಡ್ಡಿ, ರಸ್ತೆ ಸೇರಿದಂತೆ ಯಾವುದೇ ರೀತಿಯ ಅಭಿವೃದ್ಧಿ ಮಾಡುವಾಗ ಮರ ಸೇರಿದಂತೆ ವಿವಿಧ ಅಡೆತಡೆಗಳನ್ನು ತೆರವು ಮಾಡುವುದು ಸಹಜ, ಮರಗಳ ತೆರವನ್ನು ಪ್ರಶ್ನಿಸುವವರು ಯಾರೂ ಒಂದು ಮರ ನೆಡುವುದಿಲ್ಲ, ಹೆಸರಿಗೆ ಪರಿಸರ ಪ್ರೇಮಿ ಎಂದು ಹೇಳಿಕೊಳ್ಳುತ್ತಾರೆ, ನಾನು ಶಾಸಕನಾದ ಒಂದೇ ವರ್ಷಕ್ಕೆ ಮಿಯಾವಾಕಿ ಮಾದರಿಯಲ್ಲಿ 25 ಸಾವಿರ ಸಸಿಗಳನ್ನು ನೆಟ್ಟಿರುವೆ, ಜಿಪಂ ಸದಸ್ಯ ಆಗಿದ್ದ ವೇಳೆ ಕೊರ್ಲಗುಂದಿ ಕ್ಷೇತ್ರದಲ್ಲಿ 45 ಸಾವಿರ ಸಸಿಗಳನ್ನು ನೆಟ್ಟಿರುವೆ, ನಗರವನ್ನು ಪ್ರವೇಶಿಸುವ ರಸ್ತೆಗಳು ಅಭಿವೃದ್ಧಿ ಆಗಲೇ ಬೇಕು, ಇಲ್ಲದಿದ್ದರೆ ಅಭಿವೃದ್ಧಿ ಕುಂಠಿತ ಆಗುತ್ತದೆ ಎಂದರು.



ಜಿಲ್ಲೆಯ ಶಾಸಕರ ಬೆಂಬಲವಿದ್ದವರಿಗೆ ಸಚಿವ ಸ್ಥಾನ: ನೀವು ಸಚಿವ ಸ್ಥಾನ ಆಕಾಂಕ್ಷಿಯೇ? ಯುವಕರ ಕೋಟಾದಲ್ಲಿ ನಿಮಗೆ ಅವಕಾಶ ಸಿಗಲಿದೆಯೇ? ಎಂದು ಕೇಳಿದ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಶಾಸಕ ನಾರಾ ಭರತ್ ರೆಡ್ಡಿ; ನನ್ನ ಮೇಲಿನ ಅಭಿಮಾನಕ್ಕೆ ನನ್ನ ಸಹದ್ಯೋಗಿ ಶಾಕರು ನನಗೆ ಸಚಿವ ಸ್ಥಾನ ಸಿಗಲಿ ಎಂದಿದ್ದಾರೆ, ಅದು ಅವರ ಪ್ರೀತಿ ಅಭಿಮಾನ. ಯುವಕರ ಕೋಟಾದಡಿ ಅವಕಾಶ ಸಿಗುವುದಾದರೆ ಶಾಸಕರಾದ ಬಸವರಾಜ ಶಿವಗಂಗಾ ಹಾಗೂ ರವಿ ಗಣಿಗ ಅವರಿಗೆ ಅವಕಾಶ ಸಿಗಲಿ ಎಂದರು.

ಮುಂದುವರಿದು; ಜಿಲ್ಲೆಯಲ್ಲಿ ನಾವು ಈಗಾಗಲೇ ಯಾರಿಗೆ ಕೊಡಬೇಕು ಎಂದು ಹೇಳಿದ್ದೇವೆಯೋ ಅವರಿಗೆ ಸಚಿವ ಸ್ಥಾನದ ಅವಕಾಶ ಸಿಗಲಿದೆ ಎಂದರು.

ಪಾರ್ಕ್'ಗಳ ಅಭಿವೃದ್ಧಿಗೆ ಸಂಬಂಧಿಸಿ, ಸಾರ್ವಜನಿಕರು ಆಸ್ಥೆ ವಹಿಸಿ ಪಾರ್ಕ್'ಗಳ ಅಭಿವೃದ್ಧಿಗೆ ಮುಂದಾಗಬೇಕು, ಪಾರ್ಕ್ ಸಮಿತಿಗಳನ್ನು ಮಾಡಿಕೊಂಡರೆ ಪಾಲಿಕೆಯಿಂದ ಮಾಸಿಕ 10 ಸಾವಿರ ರೂ.ಗಳನ್ನು ನಿರ್ವಹಣಾ ವೆಚ್ಚ ನೀಡಲಾಗುವುದು ಎಂದರು.

ಎಪಿಎಂಸಿಯಲ್ಲಿ ನಿಯಮ ಮೀರಿ ಅಂಗಡಿಗಳನ್ನು ವ್ಯಾಪಾರಿಗಳಿಗೆ ನೀಡಬಾರದು ಎಂದ ಅವರು, ಇತ್ತೀಚೆಗೆ ನಗರದಲ್ಲಿ ನಡೆಯುತ್ತಿರುವ ಲೋಕಾಯುಕ್ತ ದಾಳಿಗಳನ್ನು ಸಮರ್ಥಿಸಿದರಲ್ಲದೇ ಲೋಕಾಯುಕ್ತರಿಗೆ ಬೆಂಬಲಿಸುವುದಾಗಿ ಹೇಳಿದರು.

ಈ ಸಂದರ್ಭ ಪಾಲಿಕೆಯ ವಾರ್ಡಿನ ಸದಸ್ಯ ಹನುಮಂತಪ್ಪ, ಮೇಯರ್ ಪಿ.ಗಾದೆಪ್ಪ, ಪಾಲಿಕೆಯ ಇತರ ಸದಸ್ಯರಾದ ನೂರ್ ಮೊಹಮ್ಮದ್, ಕುಬೇರಾ, ಕಾಂಗ್ರೆಸ್ ಮುಖಂಡರಾದ ಬಜ್ಜಪ್ಪ, ದುರ್ಗಾ ಮೋಹನ್, ಯರಗುಡಿ ಸೋಮಣ್ಣ, ನಾಗರಾಜ್, ಬಿಆರೆಲ್ ಸೀನಾ, ಹೊನ್ನಪ್ಪ, ಪರಶುರಾಮುಡು, ಹಗರಿ ಗೋವಿಂದ, ಚಾನಾಳ್ ಶೇಖರ್, ಪದ್ಮಾ ಮತ್ತಿತರರು ಹಾಜರಿದ್ದರು.

# ನಕಲಿ ಜಾತಿ ಪ್ರಮಾಣಪತ್ರ ವಿತರಣೆ ತಡೆಗೆ ಆಗ್ರಹಿಸಿ ಮನವಿ



• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಇಂದು ಹಗರಿಬೊಮ್ಮನಹಳ್ಳಿ ತಾಲೂಕು ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ ) 47/ 74–75 ವತಿಯಿಂದ ನಕಲಿ ಜಾತಿ ಪ್ರಮಾಣ ಪತ್ರ ವಿತರಣೆ ತಡೆಯುವಂತೆ ಆಗ್ರಹಿಸಿ ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸಲಾಯಿತು. ಮನವಿ ಸಲ್ಲಿಸಿ ಮಾತನಾಡಿದ ತಾಲೂಕು ದಲಿತ ಸಂಘರ್ಷ ಸಮಿತಿ ಸಂಚಾಲಕರಾದ ಪರಶುರಾಮ್ ಹೆಗ್ಡಳ್ ಅವರು, ಕಳೆದ ವರ್ಷ ಆಗಸ್ಟ್ 08 2025 ರಲ್ಲಿ ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ಅನ್ವಯಿಸಿ, ಪ್ರವರ್ಗ ಂ ಮಾದಿಗ ಸಂಬಂಧಿತ ಜಾತಿಗಳು, ಪ್ರವರ್ಗ ಃ ಹೊಲೆಯ ಸಂಬಂಧಿತ ಜಾತಿಗಳು, ಹಾಗೂ ಪ್ರವರ್ಗ ಅ ಬೋವಿ ಲಂಬಾಣಿ ಕೊರವ ಮತ್ತು ಅಲೆಮಾರಿಗಳು ಸಂಬಂಧಿತ ಜಾತಿಗಳಿಗೆ ಮೂರು ವರ್ಗಗಳಾಗಿ ಜಾತಿ ಪ್ರಮಾಣ ಪತ್ರ ನೀಡಲು ಸರ್ಕಾರ ಆದೇಶ ಮಾಡಿದೆ. ಆದರೆ ಕೆಲವು ಪಟ್ಟಭದ್ರ ಹಿತಾಸಕ್ತಿ ಜನರು, ಪ್ರವರ್ಗ ಂ ಗೆ ಸಂಬಂಧವಿಲ್ಲದ ಜಾತಿಗಳು ಮಾದಿಗ ಪ್ರವರ್ಗ ಂ ಜಾತಿ ಪ್ರಮಾಣ ಪತ್ರ ಪಡೆಯುತ್ತಿದ್ದಾರೆ. ಉದಾಹರಣೆಗೆ ಕೂಡ್ಲಿಗಿ ತಾಲೂಕಿನ ಬಡೇಲಡುಕು ಗ್ರಾಮದ ಇಂದಿರಾ ಎಂಬ ಮಹಿಳೆ ಅವರ ಮೂಲಜಾತಿ ಸುಡುಗಾಡು ಸಿದ್ದರು ಎಂಬುದಾಗಿದ್ದು, ಅವರು ಪ್ರವರ್ಗ ಅ ನಲ್ಲಿ ಬರುತ್ತಾರೆ. ಆದರೆ ಅಧಿಕಾರಿಗಳ ಬೇಜವಾಬ್ದಾರಿಯಿಂದ ಮಾದಿಗ ಪ್ರವರ್ಗ ಂ ಎಂದು ಜಾತಿ ಪ್ರಮಾಣಪತ್ರ ಪಡೆದಿರುತ್ತಾರೆ. ಆದ್ದರಿಂದ ನಮ್ಮ ತಾಲೂಕಿನಲ್ಲಿ ಜಾತಿ ಪ್ರಮಾಣ ಪತ್ರ ವಿತರಿಸುವ ಸಂದರ್ಭದಲ್ಲಿ ಅಧಿಕಾರಿಗಳು ಖುದ್ದು ದಾಖಲಾತಿ ಪರಿಶೀಲಿಸಿ ನಕಲಿ ಪ್ರಮಾಣಪತ್ರ ವಿತರಿಸದಂತೆ ಸೂಕ್ತ ಕ್ರಮವಹಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಅಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಹಿರಿಯರಾದ ಯಡ್ರಾಮ್ಮನಹಳ್ಳಿ ಮರಿಯಪ್ಪ ಕೇಚ್ಚಿನಬಂಡಿ ದುರುಗಪ್ಪ ಲಿಂಗರಾಜ್ ಶಿವಾನಂದನಗರ ಕಿತ್ತನೂರು

ದುರುಗಪ್ಪ ತೆಲುಗೋಳಿ ಮೈಲಾರಪ್ಪ ಜಿಲ್ಲಾ ಸಂಘಟನಾ ಸಂಚಾಲಕರಾದ ಪ್ರಭು ಆನಂದಳ್ಳಿ ಕೋಗಳಿ ಉಮೇಶ್ ಮೇಘರಾಜ್ ಒಂಟಿ ನಾಗರಾಜ್ ಕಲ್ಲಹಳ್ಳಿ ಗಣೇಶ್ ಅಲಬೂರು ತಾಲೂಕು ಸಂಘಟನಾ ಸಂಚಾಲಕರಾದ ಮರಿಯಪ್ಪ ದಶಮಾಪುರ ಪಕೀರಪ್ಪ ಕಡಲಬಾಳು, ಶಿವಮೂರ್ತಿ ನೆಲ್ಕುದ್ರಿ, ಕೋಟೆಪ್ಪ ದೂಪದಹಳ್ಳಿ ತೀರ್ಥ ಪ್ರಸಾದ್, ಮೈಲಪ್ಪ ಕೋಗಳಿ, ಕೇಚ್ಚಿನಬಂಡಿ ಕೆಂಚಪ್ಪ, ಮದ್ದಾನಸ್ವಾಮಿ, ಗೋಣೆಪ್ಪ, ಬ್ಯಾಲಾಳ್ ಅಜಯ ಸೇರಿದಂತೆ ಸಮಾಜದ ಹಲವರು ಭಾಗವಹಿಸಿದ್ದರು.

# ಬಳ್ಳಾರಿ ಜಿಲ್ಲೆಯಲ್ಲಿ ಮನೆ-ಮನೆಗೆ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ನಮೂನೆ ವಿತರಣೆ: ಶೇ. 85.56 ರಷ್ಟು ಪ್ರಗತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದ್ದು, ಬೂತ್ ಮಟ್ಟದ ಅಧಿಕಾರಿಗಳು ಮತದಾರರಿಗೆ ಎಸ್‌ಐಆರ್ ಎನ್ಯುಮರೇಶನ್ ನಮೂನೆಗಳನ್ನು ತಲುಪಿಸಲು ಮನೆ–ಮನೆಗೆ ಭೇಟಿ ನೀಡುವ ಪ್ರಕ್ರಿಯೆ ನಡೆಯುತ್ತಿದೆ. ಜಿಲ್ಲೆಯಲ್ಲಿ ಈವರೆಗೆ ಶೇ.85.56 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ. ಜಿಲ್ಲೆಯ ಒಟ್ಟು 12,29,586 ಮತದಾರರಿಗೆ ಈಗಾಗಲೇ ಅಗತ್ಯವಿರುವ ಗಣತಿ ನಮೂನೆಗಳನ್ನು ಮುದ್ರಿಸಿ ಬಿ.ಎಲ್.ಒ ಗಳಿಗೆ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟಾರೆ ಶೇ. 97.83 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ.*ಗಣತಿ ಮತ್ತು ಡಿಜಿಟಲೀಕರಣ:*ಮನೆ–ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜೂನ್ 30 ರಿಂದ ಆರಂಭವಾಗಿದ್ದು, ಜುಲೈ 29 ರವರೆಗೆ ನಡೆಯಲಿದೆ. ಜಿಲ್ಲೆಯಾದ್ಯಂತ ಇದುವರೆಗೆ ಒಟ್ಟು 10,55,044 (ಶೇ. 85.56) ಗಣತಿ ನಮೂನೆಗಳನ್ನು ಈಗಾಗಲೇ ವಿತರಿಸಲಾಗಿದೆ. ಪ್ರಸ್ತುತ 1,73,142 (ಶೇ. 14.08) ನಮೂನೆಗಳ ಡಿಜಿಟಲೀಕರಣ ಕಾರ್ಯ ಮುಕ್ತಾಯಗೊಂಡಿದೆ. ಇದಲ್ಲದೆ, 1,348 ಮತದಾರರು ಆನ್‌ಲೈನ್ ಮೂಲಕ ಸ್ವತಃ ನಮೂನೆಗಳನ್ನು ಸಲ್ಲಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.ಪಟ್ಟಿ ಪರಿಷ್ಕರಣೆ ವೇಳೆ ಒಟ್ಟು 1,626 ಮತದಾರರನ್ನು ವಿಶೇಷ ವರ್ಗದಡಿ ಗುರುತಿಸಲಾಗಿದೆ. ಇದರಲ್ಲಿ 808 ಮೃತ ಮತದಾರರು, 593 ಕಾಯಂ ಸ್ಥಳಾಂತರಗೊಂಡವರು, 195 ಈಗಾಗಲೇ ನೊಂದಾಯಿತರಾಗಿರುವವರು, 11 ಗೈರುಹಾಜರಿ/ಪತ್ತೆಯಾಗದ ಮತದಾರರು ಹಾಗೂ 19 ಇತರ ಪ್ರಕರಣಗಳು ಒಳಗೊಂಡಿವೆ.*ವಿಧಾನಸಭಾವಾರು ಪ್ರಗತಿ (ಜುಲೈ 7, ಸಂಜೆ 06 ಗಂಟೆಯ ವರೆಗೆ):**ಕಂಪ್ಲಿ (91):* 2,28,666 ಮತದಾರರಿದ್ದು, 2,18,984 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 48,727 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.*ಸಿರುಗುಪ್ಪ (92):* 2,28,277 ಮತದಾರರಿದ್ದು, 2,20,893 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 42,625 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.*ಬಳ್ಳಾರಿ ಗ್ರಾಮೀಣ (93):*2,51,325 ಮತದಾರರಿದ್ದು, 2,01,240 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 11,419 ನಮೂನೆ ಡಿಜಿಟಲೀಕರಣವಾಗಿವೆ.*ಬಳ್ಳಾರಿನಗರ (94):* 2,79,144 ಮತದಾರರಿದ್ದು, 1,91,950 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 11,583 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.*ಸಂಡೂರು(95):*2,42,174 ಮತದಾರರಿದ್ದು, 2,18,977 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 58,788 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.ಜಿಲ್ಲೆಯಲ್ಲಿ ಮತದಾರರ ಪಟ್ಟಿಯನ್ನು ಅತ್ಯಂತ ಪಾರದರ್ಶಕವಾಗಿ ರೂಪಿಸಲು ಸಾರ್ವಜನಿಕರು ಮತ್ತು ಮತದಾರರು ತಮ್ಮ ಮನೆಗೆ ಭೇಟಿ ನೀಡುವ ಬಿ.ಎಲ್.ಒ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ವಿದ್ಯಾರ್ಥಿಗಳ ಸಂಕಲ್ಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಧೃಢ ಸಂಕಲ್ಪ ಮಾಡಿ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣದಲ್ಲಿ ತಮ್ಮ ಪಾತ್ರವನ್ನು ಜವಬ್ದಾರಿಯಿಂದ ನಿರ್ವಹಿಸಬೇಕು ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ತರಬೇತುದಾರರಾದ ವೆಂಕಟೇಶ್ ರವರು ತಿಳಿಸಿದ್ದಾರೆ.ಶ್ರೀ ವಾಸವಿ ವಿದ್ಯಾಲಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ,ಜನ ಜಾಗೃತಿ ವೇದಿಕೆ ಹಾಗೂ ಶಾಲೆಯ ಸಹಯೋಗದಲ್ಲಿ ಮಾದಕ ವ್ಯಸನ ಮುಕ್ತ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.ಕಾರ್ಯಕ್ರಮವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ, ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಉತ್ತಮ ವ್ಯಕ್ತಿತ್ವವನ್ನು ಬೆಳಸಿಕೊಳ್ಳಬೇಕು ಎಂದು ಮುಖ್ಯ ಅತಿಥಿಗಳಾಗಿ ಕರೆ ನೀಡಿದರು.ಶಾಲೆಯ ಮುಖ್ಯೋಪಾಧ್ಯಾಯರಾದ ವೀರೇಶ್. ಯು ರವರು ಮಾತನಾಡಿ, ಶಾಲೆಯ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ಜವಾಬ್ದಾರಿಯುತ ನಾಗರಿಕರನ್ನು ರೂಪಿಸುವ ಪವಿತ್ರ ತಾಣವಾಗಿದೆ. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮ ಗುರಿಯನ್ನು ಹೊಂದಿ, ದುಶ್ಚಟಗಳಿಂದ ದೂರವಿದ್ದು, ಆರೋಗ್ಯಕರ ಜೀವನ ಶೈಲಿಯನ್ನು ಆಳವಡಿಸಿಕೊಳ್ಳಬೇಕು. ಪೋಷಕರು,ಶಿಕ್ಷಕರು ಮತ್ತು ಸಮಾಜದ ಸಹಕಾರದಿಂದ ಮಾತ್ರ ಡ್ರಗ್ಸ್ ಮುಕ್ತ ಸಮಾಜವನ್ನು ನಿರ್ಮಿಸಲು ಸಾಧ್ಯ. ಇಂದಿನ ಜಾಗೃತಿ ಕಾರ್ಯಕ್ರಮದ ಸಂದೇಶವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಕುಟುಂಬ ಹಾಗೂ ಸಮಾಜಕ್ಕೂ ತಲುಪಿಸಬೇಕು ಎಂದು ಕರೆ ನೀಡಿದರು.

ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್ ನ ಅಧ್ಯಕ್ಷರಾದ ವಿಟ್ಟ ಕೃಷ್ಣಕುಮಾರ್, ಕಾರ್ಯದರ್ಶಿಗಳಾದ ಪಿ.ಎನ್.ಸುರೇಶ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಮೇಲ್ವಿಚಾರಕರಾದ ಶ್ರೀಮತಿ ರತ್ನ, ಸೇವಾ ಪ್ರತಿನಿಧಿಗಳಾದ ಗೌಸಿಯಾ ಬೇಗಂ, ಜನಜಾಗೃತಿ ವೇದಿಕೆಯ ಉಪಾಧ್ಯಕ್ಷರಾದ ಶ್ರೀಮತಿ ರೂಪ, ಶಾಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.ವಿದ್ಯಾರ್ಥಿನಿಯಾದ ಕು. ಹರಣಿ ಪ್ರಾರ್ಥನಾ ಗೀತೆಯನ್ನು ಸಲ್ಲಿಸಿದರು. ಶಿಕ್ಷಕಿಂ–ಯಾದ ಬಸವರಾಜೇಶ್ವರಿ ಜೆ.ಎಸ್. ಕಾರ್ಯಕ್ರಮವನ್ನು ನಿರ್ವಹಿಸಿದರು.ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿ, ಆರೋಗ್ಯಕರ, ಶಿಸ್ತಿನ ಹಾಗೂ ಜವಾಬ್ದಾರಿಯುತ ಜೀವನ ನಡೆಸುವ ಸಂದೇಶವನ್ನು ಯಶಸ್ವಿಯಾಗಿ ಸಾರಿತು.

# ಆರಂಭಿಕ ಬಾಲ್ಯದ ಆರೈಕೆ ಮತ್ತು ಆರೋಗ್ಯ ಶಿಕ್ಷಣ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು.08.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಸಿಂಧನೂರಿನ ಗೌಡನಬಾವಿ ಆರೋಗ್ಯ ಮತ್ತು ಕ್ಷೇಮ ಮಂದಿರದ ಸಂಯುಕ್ತ ಆಶ್ರಯದಲ್ಲಿ, ಆರಂಭಿಕ ಬಾಲ್ಯದ ಆರೈಕೆ ಮತ್ತು ಆರೋಗ್ಯ ಶಿಕ್ಷಣ ದಿನಾಚರಣೆಯನ್ನು ಅಂಗನವಾಡಿ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ವೇಳೆ ತಾಯಂದಿರಿಗೆ ಮಕ್ಕಳ ಆರೋಗ್ಯ ಮತ್ತು ಪೋಷಣೆಯ ಕುರಿತು ವಿಶೇಷ ಜಾಗೃತಿ ಮೂಡಿಸಲಾಯಿತು.ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ, "ಬಾಲ್ಯಾವಸ್ಥೆಯಲ್ಲಿ ಮಕ್ಕಳಿಗೆ ಬರುವ ಬಹುತೇಕ ಕಾಯಿಲೆಗಳನ್ನು ತಡೆಗಟ್ಟಲು ಲಸಿಕಾಕರಣವು ಅತ್ಯಗತ್ಯ. ಹುಟ್ಟಿದ ಆರು ತಿಂಗಳವರೆಗೆ ಕಡ್ಡಾಯವಾಗಿ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು. ನಂತರದ ದಿನಗಳಲ್ಲಿ ಪೌಷ್ಟಿಕಾಂಶಯುಕ್ತ ಲಘು ಆಹಾರವನ್ನು ನೀಡುವ ಮೂಲಕ ಮಕ್ಕಳ ದೈಹಿಕ ಮತ್ತು ಮಾನಸಿಕ ಆರೋಗ್ಯದ ಬೆಳವಣಿಗೆಗೆ ತಾಯಂದಿರು ವಿಶೇಷ ಕಾಳಜಿ ವಹಿಸಬೇಕು" ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರುಗಳಾದ ನಂದೀಶ ಎಚ್. ಮಾತನಾಡಿ, "ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ, ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಬಾಲ್ಯವೇ ಅಡಿಪಾಯ. ಪೌಷ್ಟಿಕ ಆಹಾರದ ಜೊತೆಗೆ ಮಕ್ಕಳನ್ನು ಚಟುವಟಿಕೆಯಿಂದ ಇರಿಸುವ ಮೂಲಕ ಆರಂಭಿಕ ಅಕ್ಷರ ಜ್ಞಾನವನ್ನು ನೀಡುವ ಕೆಲಸ ತಾಯಂದಿರು ಮತ್ತು ಶಿಕ್ಷಕರಿಂದ ಆಗಬೇಕು ಎಂದು ಕರೆ ನೀಡಿದರು.ಕಾರ್ಯಕ್ರಮದ ಅಂಗವಾಗಿ ಅಂಗನವಾಡಿ ಕೇಂದ್ರದ ಮಕ್ಕಳಿಂದ ಅಕ್ಷರ ದಾಸೋಹ ಮತ್ತು ಆಕರ್ಷಕ ನೃತ್ಯ ಪ್ರದರ್ಶನ ನಡೆಯಿತು. ಮಕ್ಕಳ ಈ ಸಾಂಸ್ಕೃತಿಕ ಪ್ರದರ್ಶನವು ನೆರೆದಿದ್ದ ಪೋಷಕರ ಗಮನ ಸೆಳೆಯಿತು. ಈ ಕಾರ್ಯಕ್ರಮವನ್ನು ಅಂಗನವಾಡಿ ಕಾರ್ಯಕರ್ತೆ ಸರಸ್ವತಿ ಅವರು ಅಚ್ಚುಕಟ್ಟಾಗಿ ಸಂಘಟಿಸಿದ್ದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಪಾರ್ವತಿ, ಸಮುದಾಯ ಆರೋಗ್ಯ ಅಧಿಕಾರಿ ಶೋಭಾ, ಮಕ್ಕಳ ತಾಯಂದಿರು ಹಾಗೂ ಅಂಗನವಾಡಿ ಸಿಬ್ಬಂದಿ ಉಪಸ್ಥಿತರಿದ್ದರು.

## ಎಸ್‌ಐಆರ್ ಕರ್ತವ್ಯ ನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ 5 ಸಾವಿರ ಗೌರವಧನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)–2026ರ ಕಾರ್ಯದಲ್ಲಿ ಬಿಎಲ್‌ಒ (BLO) ಸಹಾಯಕರಾಗಿ ನಿಯೋಜಿಸಿರುವ ಆಶಾ ಕಾರ್ಯಕರ್ತೆಯರಿಗೆ ?5 ಸಾವಿರ ಗೌರವಧನ ನೀಡಬೇಕು ಎಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ (ಎಐಯುಟಿಯುಸಿ) ಜಿಲ್ಲಾ ಸಮಿತಿ ಒತ್ತಾಯಿಸಿದೆ.ಈ ಕುರಿತು ಜಿಲ್ಲಾಧಿಕಾರಿಗಳಿಗೆ ಬುಧವಾರ ಮನವಿ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಟಿಎಚ್‌ಒ ಹಾಗೂ ತಹಸೀಲ್ದಾರರ ಆದೇಶದಂತೆ ಆಶಾ ಕಾರ್ಯಕರ್ತೆಯರನ್ನು ಬಿಎಲ್‌ಒ ಸಹಾಯಕರಾಗಿ ಹೆಚ್ಚುವರಿ ಸಿಬ್ಬಂದಿಯನ್ನಾಗಿ ನಿಯೋಜಿಸಲಾಗಿದೆ. ಆದರೆ, ಈ ಕರ್ತವ್ಯ ನಿರ್ವಹಿಸುವ ಆಶಾ ಕಾರ್ಯಕರ್ತೆಯರಿಗೆ ನೀಡಬೇಕಾದ ಗೌರವಧನದ ಬಗ್ಗೆ ಅಧಿಕೃತ ಆದೇಶದಲ್ಲಿ ಯಾವುದೇ ಸ್ಪಷ್ಟ ಉಲ್ಲೇಖ ಇಲ್ಲ ಎಂದು ದೂರಿದರು.ಈಗಾಗಲೇ ಅಲ್ಪ ಗೌರವಧನಕ್ಕೆ ಸೇವೆ ಸಲ್ಲಿಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ ಎಸ್‌ಐಆರ್ ಕರ್ತವ್ಯಕ್ಕಾಗಿ ಪ್ರತ್ಯೇಕವಾಗಿ ತಲಾ ?5 ಸಾವಿರ ಗೌರವಧನ ನೀಡಬೇಕು ಎಂದು ಆಗ್ರಹಿಸಿದರು. ಆಶಾ ಕಾರ್ಯಕರ್ತೆಯರು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಗರ್ಭಿಣಿಯರು,

ಬಾಣಂತಿಯರು, ನವಜಾತ ಶಿಶುಗಳ ಆರೈಕೆ, ಲಸಿಕಾಕರಣ ಸೇರಿದಂತೆ ಸರ್ಕಾರದ ವಿವಿಧ ಆರೋಗ್ಯ ಕಾರ್ಯಕ್ರಮಗಳನ್ನು ತಳಮಟ್ಟಕ್ಕೆ ತಲುಪಿಸುವ ಮಹತ್ವದ ಸೇವೆಯಲ್ಲಿ ತೊಡಗಿದ್ದಾರೆ. ಇಂತಹ ಸಂದರ್ಭದಲ್ಲಿ ಜೂನ್ 30ರಿಂದ ಜುಲೈ 29ರವರೆಗೆ ಮನೆ ಮನೆಗೆ ತೆರಳಿ ಎಸ್‌ಐಆರ್ ಮಾಹಿತಿ ಸಂಗ್ರಹಿಸುವ ಕಾರ್ಯವನ್ನು ನಿರ್ವಹಿಸಿದರೆ ಸಾರ್ವಜನಿಕ ಆರೋಗ್ಯ ಸೇವೆಗಳ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಲಿದೆ. ಆದ್ದರಿಂದ ಈ ಕರ್ತವ್ಯ ನಿರ್ವಹಿಸಲು ಅಗತ್ಯ ಸಮಯಾವಕಾಶ ಕಲ್ಪಿಸಿ, ಆರೋಗ್ಯ ಸೇವೆಗೆ ಯಾವುದೇ ತೊಂದರೆಯಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ , ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಬಳ್ಳಾರಿ ಜಿಲ್ಲಾ ಸಮಿತಿಯ ವತಿಯಿಂದ ಸಂಘದ ಗೌರವಾಧ್ಯಕ್ಷರಾದ ಎ. ಶಾಂತಾ ಹಾಗೂ ಉಪಾಧ್ಯಕ್ಷರುಗಳು ಶ್ರೀಮತಿ. ಅಮೃತಾ, ಶ್ರೀಮತಿ.ಪಾವನಿ ಯವರ ನೇತೃತ್ವದಲ್ಲಿ, ಮಾನ್ಯ ತಾಹಶೀಲ್ದಾರ ರವರ ಮೂಲಕ ಮಾನ್ಯ ಜಿಲ್ಲಾಧಿಕಾರಿಗಳು ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

# ಅಹಿಂದ ಹೆಸರಿನಲ್ಲಿ ಹಿಂದುಳಿದ ವರ್ಗಗಳಿಗೆ ಅನ್ಯಾಯ: ರವಿಕುಮಾರ್ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಹೆಸರಿನಲ್ಲಿ ರಾಜಕೀಯ ಮಾಡಿರುವ ಕಾಂಗ್ರೆಸ್ ಸರ್ಕಾರವು ಅವರಿಗೆ ನ್ಯಾಯ ಒದಗಿಸುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಎನ್. ರವಿಕುಮಾರ್ ಆರೋಪಿಸಿದರು.

ನಗರದ ಮೋಕಾ ರಸ್ತೆಯ ವಾಜಪೇ ಬಡಾವಣೆಯಲ್ಲಿರುವ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಹಿಂದ ಹೆಸರಿನಲ್ಲಿ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರೂ ಹಿಂದುಳಿದ ವರ್ಗಗಳಿಗೆ ನೀಡಿದ ಕೊಡುಗೆ ಏನು ಎಂಬುದನ್ನು ರಾಜ್ಯದ ಜನತೆಗೆ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಕಾಂತರಾಜ್ ವರದಿಯನ್ನು ಸರ್ಕಾರ ಸಮರ್ಪಕವಾಗಿ ಜಾರಿಗೊಳಿಸುವ ಬದಲು ಇತಿಹಾಸದ ಪುಟಗಳಿಗೆ ಸೇರಿಸಿದೆ.



ಮಧುಸೂದನ್ ನೇತೃತ್ವದ ವರದಿಯನ್ನು ಸರ್ಕಾರ ರಾಜೀನಾಮೆಗೆ ಒಂದು ದಿನ ಮುಂಚಿತವಾಗಿ ಸ್ವೀಕರಿಸಿದ್ದು, ಬಳಿಕ ಹೈಕೋರ್ಟ್ ವರದಿಯನ್ನು ಬಹಿರಂಗಪಡಿಸದಂತೆ ತಡೆ ನೀಡಿದೆ. ವರದಿಗಳ ಹೆಸರಿನಲ್ಲಿ ಸರ್ಕಾರ ಕಾಲಹರಣ ಮಾಡುತ್ತಿದೆ ಎಂದು ಟೀಕಿಸಿದರು.

ಸಾಮಾಜಿಕ–ಆರ್ಥಿಕ ಸಮೀಕ್ಷೆಯಲ್ಲಿ ಸುಮಾರು 4.24 ಲಕ್ಷ ಕುಟುಂಬಗಳು ಭಾಗಿಯಾಗಿಲ್ಲ. ಈಗ ಪಥವತ್ತಾಲಂ ವರದಿಯನ್ನು ಜಾರಿಗೊಳಿಸುವುದಾಗಿ ಹೇಳುತ್ತಿರುವ ಸರ್ಕಾರ ಜನರನ್ನು ಗೊಂದಲಕ್ಕೀಡು ಮಾಡುತ್ತಿದೆ ಎಂದು ಆರೋಪಿಸಿದರು.ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಸರ್ಕಾರ ವಿಫಲವಾಗಿದೆ. ರೈತರ ಪರಿಸ್ಥಿತಿ ಅತ್ಯಂತ ದುಸ್ಥಿತಿಯಲ್ಲಿದ್ದು, ಅವರನ್ನು ದೇವರೇ ಕಾಪಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಸಚಿವರು ತಮ್ಮ ಜಿಲ್ಲೆಗಳಿಗೆ ಸಮರ್ಪಕವಾಗಿ ಭೇಟಿ ನೀಡುತ್ತಿಲ್ಲ ಎಂದು ದೂರಿದರು.ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿಯೂ ಸರ್ಕಾರ ವಿಫಲವಾಗಿದೆ.

# ಪಾಕಿಸ್ತಾನ ಕಾಂಗ್ರೆಸ್‌ನ ಪಾಪದ ಕೂಸು: ಸಿ.ಟಿ. ರವಿ

**ಬಾಗಲಕೋಟೆ:** ಪಾಕಿಸ್ತಾನ ಕಾಂಗ್ರೆಸ್‌ನ ಪಾಪದ ಕೂಸು ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಹೇಳಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶ ವಿಭಜನೆ ಹಾಗೂ ಪಾಕಿಸ್ತಾನ ಉಗಮದ ಕುರಿತು ಕಾಂಗ್ರೆಸ್ ವಿರುದ್ಧ ಹರಿಹಾಯ್ದರು.

ಗೃಹ ಸಚಿವರು ಈ ಹಿಂದೆ ಹೇಳಿದ್ದ ಪಾಪ ಪಾಕಿಸ್ತಾನ ಎಂಬ ಹೇಳಿಕೆಯನ್ನು ಸಮರ್ಥಿಸಿಕೊಂಡ ಸಿ.ಟಿ. ರವಿ, ಕಾಂಗ್ರೆಸ್‌ನವರ ಪಾಪದ ಕೂಸೇ ಪಾಕಿಸ್ತಾನ. ಭಾರತ ವಿಭಜನೆಯಾಗಿ ಪಾಕಿಸ್ತಾನ ರಚನೆಯಾಗುವ ಸಂದರ್ಭದಲ್ಲಿ ಅಂದು ಮೂರು ಪ್ರಮುಖ ಶಕ್ತಿಗಳ ನಡುವೆ ತ್ರಿಪಕ್ಷೀಯ ಒಪ್ಪಂದ ನಡೆದಿತ್ತು. ಬ್ರಿಟಿಷ್ ಸರ್ಕಾರ, ಕಾಂಗ್ರೆಸ್ ಮತ್ತು ಮುಸ್ಲಿಂ ಲೀಗ್ ಈ ಒಪ್ಪಂದದ ಭಾಗವಾಗಿದ್ದವು. ಹೀಗಾಗಿ ಪಾಕಿಸ್ತಾನ ನಿರ್ಮಾಣದಲ್ಲಿ ಕಾಂಗ್ರೆಸ್‌ನ ಪಾತ್ರವೂ ಇದೆ. ಅದಕ್ಕಾಗಿಯೇ ಅದನ್ನು ಪಾಪದ ಕೂಸು ಎಂದು ಕರೆಯಲಾಗಿದೆ ಎಂದರು.

ಆರ್.ಎಸ್.ಎಸ್. ಕುರಿತು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಆರ್.ಎಸ್.ಎಸ್. ಅತ್ಯುನ್ನತ ದೇಶಭಕ್ತ ಸಂಘಟನೆಯಾಗಿದೆ. ಆದರೆ ಕೆಲವರು ಕೇವಲ ಪ್ರಚಾರಕ್ಕಾಗಿ ದಿನ ಬೆಳಗಾದರೆ ಆರ್.ಎಸ್.ಎಸ್. ಟೀಕಿಸುವುದನ್ನೇ ಕಾಯಕ ಮಾಡಿಕೊಂಡಿದ್ದಾರೆ. ಆ ಮೂಲಕ ಅವರಿಗೆ ಪ್ರಚಾರ ಸಿಗುತ್ತದೆ ಎನ್ನುವುದಾದರೆ ಪಡೆದುಕೊಳ್ಳಲಿ ಎಂದು ಟಾಂಗ್ ನೀಡಿದರು. ದೊಡ್ಡವರ ಮಕ್ಕಳಿಗೆ ಎಲ್ಲವೂ ಬಹಳ ಸುಲಭವಾಗಿ ಸಿಕ್ಕಿಬಿಡುತ್ತದೆ. ಅದೇ ರೀತಿ ಕೆಲವರಿಗೆ ವಿವೇಚನೆ ಎನ್ನುವುದು ಇಲ್ಲದಂತಾಗಿದೆ. ದೇಶಕ್ಕೆ ಒಳ್ಳೆಯದು ಮಾಡುವ ಸಂಘಟನೆ ಯಾವುದು ಮತ್ತು ದೇಶಕ್ಕೆ ಹಾನಿ ಮಾಡುವ ಸಂಘಟನೆ ಯಾವುದು ಎಂಬ ಕನಿಷ್ಠ ಜ್ಞಾನ ಇರಬೇಕು.

ಎಂದ ಸಿ.ಟಿ.ರವಿ, ದೇಶಕ್ಕೆ ಕಂಟಕಪ್ರಾಯವಾಗಿರುವ, ಹಾನಿ ಉಂಟುಮಾಡುವ ಸಂಘಟನೆಗಳ ವಿರುದ್ಧ ಕಾಂಗ್ರೆಸ್‌ನವರು ಇದುವರೆಗೆ ಒಂದು ಶಬ್ದವನ್ನೂ ಆಡಿಲ್ಲ. ಆದರೆ ದೇಶಭಕ್ತ ಸಂಘಟನೆಯನ್ನು ನಿರಂತರವಾಗಿ ದೂಷಿಸುತ್ತಿದ್ದಾರೆ ಇದು ಖಂಡನೀಯ ಎಂದರು.

ಅನುಮತಿ ಪಡೆಯದೇ ಯಾವುದೇ ಪಥಸಂಚಲನ ನಡೆಸಲು ಸಾಧ್ಯವಿಲ್ಲ ಎಂದ ಅವರು, ನಿಯಮಾವಳಿಗಳ ಪ್ರಕಾರವೇ ಈ ಹಿಂದೆಯೂ ಪಥಸಂಚಲನಗಳು ನಡೆದಿವೆ ಎಂದು ಸ್ಪಷ್ಟಪಡಿಸಿದರು.

# ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವ ಹುಟ್ಟುಹಬ್ಬ ಹೆಚ್ಚು ಅರ್ಥಪೂರ್ಣ



**ಚಿಕ್ಕಬಳ್ಳಾಪುರ:** ಹುಟ್ಟುಹಬ್ಬವನ್ನು ಕೇಕ್ ಕತ್ತರಿಸಿ ಸಂಭ್ರಮಿಸುವುದಕ್ಕಿಂತ ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವುದು ಹೆಚ್ಚು ಅರ್ಥಪೂರ್ಣ ಎಂಬ ಸಂದೇಶವನ್ನು ಮಾಜಿ ನಗರಸಭೆ ಸದಸ್ಯ ಹಾಗೂ ವಕೀಲ ಮಟಮಪ್ಪ ಆರ್.ಅವರು ತಮ್ಮ ಜನ್ಮದಿನದ ಅಂಗವಾಗಿ ನೀಡಿದರು.

ತಮ್ಮ ಹುಟ್ಟುಹಬ್ಬದ ಪ್ರಯುಕ್ತ ಅವರು ಬುಧವಾರ ತಾಲೂಕಿನ ರಂಗಸ್ಥಳದಲ್ಲಿರುವ ಮಾನಸ ವೃದ್ಧಾಶ್ರಮಕ್ಕೆ ಭೇಟಿ ನೀಡಿ ವೃದ್ಧರೊಂದಿಗೆ ಸಮಯ ಕಳೆದು ಆರೋಗ್ಯ ವಿಚಾರಿಸಿ ಹಣ್ಣು,ಬ್ರೆಡ್ ವಿತರಿಸುವುದರ ಜೊತೆಗೆ ಅನ್ನಸಂತರ್ಪಣೆಯ ವ್ಯವಸ್ಥೆ ಮಾಡಿದರು. ವೃದ್ಧರ ಆಶೀರ್ವಾದ ಪಡೆದು ಜನ್ಮದಿನವನ್ನು ಸರಳವಾಗಿ ಆಚರಿಸಿದರು. ಬಳಿಕ ಜೈಭೀಮ್ ನಗರದ ಪಂಚಗಿರಿ ಬೋಧನಾ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಸುಮಾರು 100 ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳು ಹಾಗೂ ಡಿಕ್ಷನರಿಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಟಮಪ್ಪ ಆರ್, ಹುಟ್ಟುಹಬ್ಬದಂದು ಕೇಕ್ ಕತ್ತರಿಸುವುದು ತಪ್ಪಲ್ಲ ಆದರೆ ಪಾಶ್ಚಾತ್ಯ ದೇಶಗಳ ಸಂಸ್ಕೃತಿಯನ್ನು ಯೋಚನೆ ಮಾಡದೆ ಹಾಗೆಯೇ ಅನುಸರಿಸುವ ಬದಲು, ನಮ್ಮ ಭಾರತೀಯ ಸಂಸ್ಕೃತಿ, ಸಂಪ್ರದಾಯ, ಆಚರಣೆ ಮತ್ತು ಮೌಲ್ಯಗಳನ್ನು ಗೌರವಿಸಿ, ಅವುಗಳನ್ನು ಉಳಿಸಿ ಬೆಳೆಸಬೇಕು ಹಾಗಾಗಿ ಹುಟ್ಟುಹಬ್ಬವನ್ನು ವಿಜ್ರಂಭಣೆಯಿಂದ ಆಚರಿಸದೇ ಸಮಾಜ ಸೇವೆ ಮಾಡುವ ಮೂಲಕ ಆಚರಿಸಿದ್ದೇನೆ ಎಂದರು.

ನಾನು ರೈತ ಕುಟುಂಬದಲ್ಲಿ ಹುಟ್ಟಿ ಕೃಷಿಯ ಮೂಲಕ ಬದುಕು ಕಟ್ಟಿಕೊಂಡವನು.ನನ್ನ ಪೋಷಕರು ಸಮಾಜದಲ್ಲಿ ಹೇಗೆ ಬದುಕಬೇಕು, ಕಷ್ಟದಲ್ಲಿರುವವರಿಗೆ ನೆರವಾಗಬೇಕು ಮತ್ತು ನಮ್ಮ ಶ್ರಮದ ಹಣದಲ್ಲಿ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂದು ಕಲಿಸಿಕೊಟ್ಟಿದ್ದಾರೆ.ಅದೇ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದೇನೆ. ಇಂದು ವೃದ್ಧಾಶ್ರಮದಲ್ಲಿ ವೃದ್ಧರಿಗೆ ಉಪಾಹಾರ ನೀಡಿ ಅವರ ಆಶೀರ್ವಾದ ಪಡೆದಿರುವುದು ನನ್ನ ಜೀವನದ ಸಂತಸದ ಕ್ಷಣ ಎಂದು ಹೇಳಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಬಡತನ ಪ್ರತಿಭೆಗೆ ಅಡ್ಡಿಯಲ್ಲ. ನಿಮ್ಮಲ್ಲಿ ಅಪಾರ ಸಾಮರ್ಥ್ಯವಿದೆ. ಪೋಷಕರು ನಿಮ್ಮ ಉಜ್ವಲ ಭವಿಷ್ಯಕ್ಕಾಗಿ ಶಾಲೆಗೆ ಕಳುಹಿಸುತ್ತಿದ್ದಾರೆ ಅವರ ಮಾತನ್ನು ಗೌರವಿಸಿ, ಶಿಕ್ಷಕರ ಮಾರ್ಗದರ್ಶನವನ್ನು ಪಾಲಿಸಿ ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಬೇಕು. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಹೇಳಿದಂತೆ ಶಿಕ್ಷಣವೇ ಸಮಾಜದಲ್ಲಿ ತಲೆ ಎತ್ತಿ ಬದುಕುವ ಶಕ್ತಿ ನೀಡುತ್ತದೆ ಯಾವುದೇ ಕಾರಣಕ್ಕೂ ವಿದ್ಯಾಭ್ಯಾಸವನ್ನು ಅರ್ಧಕ್ಕೆ ಬಿಡಬಾರದು ಎಂದು ಕಿವಿಮಾತು ಹೇಳಿದರು. ಉತ್ತಮ ಗುಣಗಳನ್ನು ಬೆಳೆಸಿಕೊಳ್ಳಬೇಕು. ಛಲವನ್ನು ಬಿಡದೆ ಗುರಿಯತ್ತ ಸಾಗಬೇಕು. ಒಳ್ಳೆಯ ಆಲೋಚನೆಗಳು ಜೀವನದಲ್ಲಿ ಯಶಸ್ಸಿಗೆ ದಾರಿ ತೋರಿಸುತ್ತವೆ. ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳುವುದರಿಂದ ಜ್ಞಾನ ವೃದ್ಧಿಯಾಗುತ್ತದೆ. ಬರವಣಿಗೆಗೆ ಸಮಾಜವನ್ನು ಬದಲಾಯಿಸುವ ಶಕ್ತಿಯಿದೆ. ಆದ್ದರಿಂದ ಓದು, ಬರಹ ಮತ್ತು ಉತ್ತಮ ಸಂಸ್ಕಾರಗಳನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಪರಿಸರ ಪ್ರೇಮಿ ಶಿಕ್ಷಕರಾದ ಗುಂಪು ಮರದ ಆನಂದ್, ಸಮಾಜ ಸೇವಕ ಹೋಟೆಲ್ ರಾಮಣ್ಣ,ಗಂಗರಾಜು ಇತರರು ಉಪಸ್ಥಿತರಿದ್ದರು.

# ಅಂಕಿ ಅಂಶಗಳು ದೇಶದ ಅಭಿವೃದ್ಧಿಗೆ ಭದ್ರ ಬುನಾದಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನಿಖರವಾದ ಅಂಕಿ-ಅಂಶಗಳು ದೇಶದ ಅಭಿವೃದ್ಧಿ ಯೋಜನೆಗಳ ರೂಪಿಸುವಿಕೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕೆ ಭದ್ರ ಬುನಾದಿಯಾಗಿವೆ ಎಂದು ಜಿಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು ಅಲ್ಲಾಪೂರ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಆರೋಗ್ಯ ಇಲಾಖೆಯ ಸಭಾಭವನದಲ್ಲಿ ಬುಧವಾರ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ ಸಂಖ್ಯಾ ಶಾಸ್ತ್ರಜ್ಞ ಪಿ.ಸಿ.ಮಹಾಲನೋಬಿಸ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ, ಆರೋಗ್ಯ, ಶಿಕ್ಷಣ, ಕೈಗಾರಿಕೆ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ವೈಜ್ಞಾನಿಕ ದತ್ತಾಂಶ ಮತ್ತು ವಿಶ್ವಾಸಾರ್ಹ ಸಾಂಖ್ಯಿಕ ಮಾಹಿತಿಯ ಆಧಾರದ ಮೇಲೆ ಯೋಜನೆಗಳನ್ನು ರೂಪಿಸಿದಾಗ ಮಾತ್ರ ಅಭಿವೃದ್ಧಿಯ ಗುರಿಗಳನ್ನು ಸಮರ್ಥವಾಗಿ ತಲುಪಲು ಸಾಧ್ಯವಾಗುತ್ತದೆ ಎಂದರು.

ಮಹಾಲನೋಬಿಸ್ ಅವರು ಪಂಚವಾರ್ಷಿಕ ಯೋಜನೆ ರೂಪಿಸುವಿಕೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದು, ದೇಶದ ಆರ್ಥಿಕ ಬೆಳವಣಿಗೆಯನ್ನು ವೈಜ್ಞಾನಿಕ ಅಂಕಿ ಅಂಶಗಳು ಮತ್ತು ದತ್ತಾಂಶಗಳ ಆಧಾರದ ಮೇಲೆ ಯೋಜಿಸುವ ಪರಿಕಲ್ಪನೆಯನ್ನು ಬಲಪಡಿಸಿದ್ದಾರೆ. ಯೋಜನೆ ರೂಪಿಸುವಿಕೆ, ಸಂಪನ್ಮೂಲ ಹಂಚಿಕೆ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಮೌಲ್ಯಮಾಪನದಲ್ಲಿ ಸಂಖ್ಯಾಶಾಸ್ತ್ರದ ಮಹತ್ವವನ್ನು ಸ್ಥಾಪಿಸಿದವರು ಮಹಾಲನೋಬಿಸ್ ಎಂದರು.



ಕೃಷಿ ಜಂಟಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಮಾತನಾಡಿ, ರೈತರ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳನ್ನು ರೂಪಿಸುವುದರಿಂದ ಹಿಡಿದು ಬೆಳೆಗಳ ಉತ್ಪಾದನೆ, ಮಾರುಕಟ್ಟೆ ವ್ಯವಸ್ಥೆ ಹಾಗೂ ಸಂಪನ್ಮೂಲಗಳ ಸಮರ್ಪಕ ನಿರ್ವಹಣೆಯಲ್ಲಿಯೂ ಸಾಂಖ್ಯಿಕ ಮಾಹಿತಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪಿ.ಸಿ.ಮಹಾಲನೋಬಿಸ್ ಅವರು ಭಾರತೀಯ ಸಂಖ್ಯಾಶಾಸ್ತ್ರಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರವಾಗಿದ್ದು, ಅವರ ಸಂಶೋಧನೆಗಳು ಹಾಗೂ ಸಂಖ್ಯಾಶಾಸ್ತ್ರೀಯ ವಿಧಾನಗಳು ಇಂದಿಗೂ ದೇಶದ ಯೋಜನಾ ವ್ಯವಸ್ಥೆಗೆ ಮಾರ್ಗದರ್ಶಿಯಾಗಿವೆ ಎಂದು ತಿಳಿಸಿದರು.

ಉಪನ್ಯಾಸ ನೀಡಿದ ಬಾದಾಮಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊ.ಮಲ್ಲೇಶ ಸಿದ್ದಲಿಂಗಪ್ಪನವರ, ಸರಕಾರದ ಅಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ರೂಪಿಸಿ ಅನುಷ್ಠಾನಗೊಳಿಸಲು ಸಾಂಖ್ಯಿಕ ಮಾಹಿತಿಯು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ. ಕೃಷಿ ವಲಯದ ಪ್ರಗತಿ, ಆರ್ಥಿಕ ಅಭಿವೃದ್ಧಿಯನ್ನು ಸಂಖ್ಯೆ ಮೂಲಕ ಹೇಳಲಾಗುತ್ತದೆ. ಮಾನವ ಅಭಿವೃದ್ಧಿಯಲ್ಲಿಯೂ ಕೂಡಾ ಸಂಖ್ಯಾಶಾಸ್ತ್ರ ಮಹತ್ವದ ಪಾತ್ರ, ಸವಾಲುಗಳು, ಹಂಚಿಕೆ ಕುರಿತು ವಿವರವಾಗಿ ತಿಳಿಸಿಕೊಟ್ಟರು.

**ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದ ಗಣತಿ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿದ ಜಮಖಂಡಿ ಗಣತಿದಾರ ಗೋಪಾಲ ಮಾದೂರ ಅವರಿಗೆ ಜಿಲ್ಲಾ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂಧರ್ಭದಲ್ಲಿ ವಿವಿಧ ಸೇವೆಯಲ್ಲಿ ಮುಂಬಡ್ತಿ ಹೊಂದಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಸಹ ಸನ್ಮಾನಿಸಲಾಯಿತು.**

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಗೌರಮ್ಮ ಸುಂಕದ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀನಿವಾಸ ಚಿಕ್ಕೂರ, ಜಿ.ಪಂ ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಮುಬಶೀರ ಅಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಾಣಂತಿಯರ ಸಾವು ತಪ್ಪಿಸಲು ಸೂಕ್ತ ಕ್ರಮ ಕೈಗೊಳ್ಳಿ: ಡಿಸಿ ಸಂಗಪ್ಪ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಬಾದಾಮಿ ತಾಲೂಕಿನಲ್ಲಿ ಅತೀ ಹೆಚ್ಚು ಬಾಣಂತಿಯರ ಸಾವು ಆಗಿರುವುದು ವರದಿಯಾಗಿದ್ದು, ತಾಲೂಕು ಆರೋಗ್ಯ ಅಧಿಕಾರಿ ಸೇರಿದಂತೆ ಎಲ್ಲಾ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಹೆರಿಗೆ ಸಾವುಗಳನ್ನು ತಪ್ಪಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಸೂಚಿಸಿದರು.

ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಜರುಗಿದ ಆರೋಗ್ಯ ಇಲಾಖೆಯ ಜಿಲ್ಲಾ ಮಟ್ಟದ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವರದಿಯಾದಂತಹ ಹೆರಿಗೆ ಸಾವಿನ ಹೆಣ್ಣು ಮಕ್ಕಳೆಲ್ಲ ಅತೀ ಸಣ್ಣ ವಯಸ್ಸಿನವರಾಗಿದ್ದು, ಮೇಲ್ನೋಟಕ್ಕೆ ಬಾಲ್ಯವಿವಾಹಕ್ಕೆ ಒಳಗಾಗಿರಬಹುದೆಂದು ಕಂಡುಬರುತ್ತಿರುವುದರಿಂದ ಬಾಲ್ಯ ವಿವಾಹ ಕುರಿತು ಇನ್ನೂ ಹೆಚ್ಚಿನ ಜನ ಜಾಗೃತಿ ಮೂಡಿಸುವ ಕಾರ್ಯವನ್ನು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮಾಡಬೇಕು ಎಂದು ಹೇಳಿದರು.



ಆರೋಗ್ಯ ಇಲಾಖೆ ಅಧಿಕಾರಿಗಳು ಆಶಾ ಕಾರ್ಯಕರ್ತೆಯರಿಗೆ ಸರಿಯಾದ ತರಬೇತಿಯನ್ನು ನೀಡಬೇಕು, ಗ್ರಾಮೀಣ ಪ್ರದೇಶಗಳಲ್ಲಿ ಗರ್ಭಿಣಿ ಸ್ತ್ರೀಯರು ಆಶಾ ಕಾರ್ಯಕರ್ತೆಯರನ್ನೇ ಹೆಚ್ಚು ನಂಬುವುದರಿಂದ ಸರಿಯಾದ ಸಮಯಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ತಪಾಷಣೆಗೆ ಒಳಪಡಿಸುವುದು, ಔಷಧಿ ದೊರಕಿಸಿ ಕೊಡುವ ಕೆಲಸ ಮಾಡಬೇಕು. ಹೆರಿಗೆ ನೋವು ಕಾಣಿಸಿಕೊಳ್ಳುವ ಸಂದರ್ಭಗಳಲ್ಲಿ ಗರ್ಭಿಣಿ ಸ್ತ್ರೀಯರನ್ನು ಅಂಬ್ಯುಲೆನ್ಸ್ ಮೂಲಕ ಖಾಸಗಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಸೀಜರಿನ್ ಹೆರಿಗೆ ಮಾಡಿಸಲಾಗುತ್ತದೆ ಎಂಬ ದೂರುಗಳಿದ್ದು, ಈ ಕುರಿತು ಆರೋಗ್ಯ ಅಧಿಕಾರಿಗಳು ಗಮನಹರಿಸಬೇಕು ಎಂದು ಎಚ್ಚರಿಸಿದರು.

ಹುಚ್ಚು ನಾಯಿ ಕಡಿತದ ಸಾವು ಹಾಗೂ ಹಾವು ಕಡಿತದಿಂದ ಸಾವು ಸಂಭವಿಸಿರುವುದು ಕೂಡ ಸಾಕಷ್ಟು ಸಂಖ್ಯೆಯಲ್ಲಿ ವರದಿಯಾಗಿದೆ. ಜಿಲ್ಲೆಯಲ್ಲಿ ಜನೇವರಿಯಿಂದ ಜೂನ್ ಮಾಹೆಯವರೆಗೆ 17196 ಹುಚ್ಚು ನಾಯಿ ಕಡಿತದ ಪ್ರಕರಣಗಳು ದಾಖಲಾಗಿ, ರೇಬೀಸ್ ನಿಂದ 6ಸಾವು ಸಂಭವಿಸಿರುತ್ತವೆ. ಅದೇ ರೀತಿ ಜನೇವರಿಯಿಂದ ಜೂನ್ ಮಾಹೆಯವರೆಗೆ 309 ಹಾವು ಕಡಿತದ ಪ್ರಕರಣಳು ದಾಖಲಾಗಿ 5 ಸಾವುಗಳು ಸಂಭವಿಸಿರುತ್ತವೆ. ಹುಚ್ಚು ನಾಯಿ ಕಡಿತ ಮತ್ತು ಹಾವು ಕಡಿತದ ಪ್ರಕರಣಗಳಿಗೆ ಸಕಾಲದಲ್ಲಿ ಲಸಿಕೆ ನೀಡುವ ಕೆಲಸವಾಗಬೇಕು ಅಲ್ಲದೇ ಸಾರ್ವಜನಿಕರಲ್ಲಿ ಈ ಕುರಿತು ಹೆಚ್ಚಿನ ಸಂಖ್ಯೆಯಲ್ಲಿ ಜನ ಜಾಗೃತಿ ಮೂಡಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಮಂಜುನಾಥ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೇಣ್ಣನವರ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಮಹೇಶ ಕೋನಿ, ತಾಲೂಕು ವೈಧ್ಯಾಧಿಕಾರಿ ಡಾ. ಮಂಜುಳಾ ಸೇರಿದಂತೆ ಇತರರು ಇದ್ದರು.

# ಮದುವೆಯಲ್ಲಿ ಪರಿಸರ ಜಾಗೃತಿ, ಪ್ಲಾಸ್ಟಿಕ್ ಬಳಕೆ ನಿಷೇಧಿಸಬೇಕು

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಮದುವೆಗಳು ಸರಳತೆಯಿಂದ ಮಾಡಬೇಕೆಂದು ಬಸವಕಲ್ಯಾಣ ತಾಲೂಕಿನ ಖೇರ್ಡ (ಬಿ) ಗ್ರಾಮದ ಶ್ರೀ ಶಿವಲಿಂಗೇಶ್ವರ ಮಂದಿರದಲ್ಲಿ ಹುಮನಾಬಾದ್ ಪತ್ರಿಕೆ ವಿತರಕ ಬಾಬುರಾವ್ ಕಾಳೇ ಇವರ ಸುಪುತ್ರಿ ಪೂಜಾ ಇವಳ ವಿವಾಹವು ಧನ್ನೂರ್ (ಆರ್) ಗ್ರಾಮದ ಶಿವಲಿಂಗಪ್ಪ ಉಪ್ಪಿನ್ ಇವರ ಸುಪುತ್ರ ಮುರುಗೇಂದ್ರ ಇವರ ಜೊತೆಗೆ ಶ್ರೀ ಶಿವಲಿಂಗೇಶ್ವರ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಮಹಾದೇವ ಮಂದಿರದಲ್ಲಿ ಸಡಗರ ಸಂಭ್ರಮದಿಂದ ಜರುಗಿ-ತು. ಪರಿಸರ ವಾಹಿನಿ ಬೀದರ್ ಹಮ್ಮಿಕೊಂಡಿದ್ದ ಮದುವೆಯಲ್ಲಿ ಪರಿಸರ ಜಾಗೃತಿ ಅಂಗವಾಗಿ. ಈ ಕಾರ್ಯಕ್ರಮಕ್ಕೆ ಶಿವಲಿಂಗೇಶ್ವರ ಸಂಸ್ಥಾನ ಮಠದ ಪೂಜಾ ಶ್ರೀ ಶಿವಲಿಂಗೇಶ್ವರ ಮಹಾಸ್ವಾಮಿಗಳು ವಧು ವರರಿಗೆ ಸಸಿ ಕೊಟ್ಟು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮದುವೆಯಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮ ಇದೊಂದು ಅತ್ಯುತ್ತಮ ಪರಿಸರ ಜಾಗೃತಿಯ ಸಹಾಯವಾಗಿದೆ ಎಂದರು.



ಮದುವೆಯಲ್ಲಿ ಮನಬಂದಂತೆ ಪ್ಲಾಸ್ಟಿಕ್ ಬಳಸುತ್ತಿರುವುದಕ್ಕೆ ಪೂಜ್ಯರು ವಿಷಾದ ವ್ಯಕ್ತಪಡಿಸಿದರು. ಮದುವೆಯಲ್ಲಿ ಪ್ರತಿಯೊಬ್ಬರು ಕಡ್ಡಾಯವಾಗಿ ಪ್ಲಾಸ್ಟಿಕ್ ನಿಷೇಧಿಸಬೇಕೆಂದು ಮನವಿ ಮಾಡಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಮದುವೆಯಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮ ಇದೊಂದು ಅತ್ಯುತ್ತಮ ಜಾಗೃತಿಯ ಕಾರ್ಯಕ್ರಮವಾಗಿದೆ ಎಂದರು.

ಚಿಟಗುಪ್ಪ ಪಟ್ಟಣದ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ವಧು ವರರು ಅನ್ಯೋನ್ಯವಾಗಿ ಜೀವನ ಸಾಗಿಸಬೇಕೆಂದು ತಿಳಿಸಿದರು. ತಮ್ಮ ಮನೆಯಲ್ಲಿ ಹೊಲದಲ್ಲಿ ಕಡ್ಡಾಯವಾಗಿ ಮರ ಗಿಡ ಬೆಳೆಸಿ ಸಂರಕ್ಷಿಸಬೇಕು ಎಂದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಉಪಸ್ಥಿತರಿದ್ದರು.

# ಯುಕೆಪಿಗೆ ಪ್ರತ್ಯೇಕ ಅನುದಾನ ಮೀಸಲಿಡಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಲು ವಾರ್ಷಿಕ ಕನಿಷ್ಠ 20 ರಿಂದ 25 ಸಾವಿರ ಕೋಟಿ ರೂಪಾಯಿ ಅನುದಾನವನ್ನು ಪ್ರತ್ಯೇಕವಾಗಿ ಕಾಯ್ದಿರಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದ್ದಾರೆ.

ಬುಧವಾರ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯೋಜನೆಯ ಅನುಷ್ಠಾನಕ್ಕೆ ಕೇವಲ ಇಚ್ಛಾಶಕ್ತಿ ಮಾತ್ರವಲ್ಲದೆ, ಆರ್ಥಿಕ ಸಂಪನ್ಮೂಲ ಕ್ರೋಢೀಕರಣವೂ ಅಷ್ಟೇ ಮುಖ್ಯವಾಗಿದೆ. ಇದನ್ನು ಮಾಡದಿದ್ದರೆ ಕೃಷ್ಣಾ ಮೇಲ್ದಂಡೆ ಯೋಜನೆ ಕೇವಲ ಕಾಗದದ ಮೇಲಿನ ಇಚ್ಛೆಯಾಗಿ ಉಳಿಯಲಿದೆ ಎಂದು ಕಳವಳ ವ್ಯಕ್ತಪಡಿಸಿದರು.



ಕೃಷ್ಣಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು 75 ಸಾವಿರ ಕೋಟಿ ಅನುದಾನ ಮೀಸಲಿಡುವುದಾಗಿ ಈ ಹಿಂದೆ ಕಾಂಗ್ರೆಸ್ ಸರ್ಕಾರ ಸಂಕಲ್ಪ ಪ್ರಕಟಿಸಿತ್ತು. ಈಗ ಮೂರು ವರ್ಷಗಳು ಕಳೆದರೂ ಅದನ್ನು ಮಾಡುತ್ತಿಲ್ಲ ಎಲ್ಲಿದೆ ನಿಮ್ಮ ಭರವಸೆ ಎಂದು ಸಿ.ಟಿ.ರವಿ ಕಾಂಗ್ರೆಸ್ ಸರ್ಕಾರವನ್ನು ಪ್ರಶ್ನಿಸಿದರು.

ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಳುಗಡೆ ಸಂತ್ರಸ್ತರ ಪರಿಹಾರ ಮೊತ್ತವನ್ನು 1.40 ಲಕ್ಷದಿಂದ 25 ಲಕ್ಷಕ್ಕೆ ಹೆಚ್ಚಿಸಲಾಗಿತ್ತು. ಪ್ರಸ್ತುತ ಅದನ್ನು ಎಕರೆಗೆ 40 ಲಕ್ಷಕ್ಕೆ ಏರಿಸಿರುವುದು ಸ್ವಾಗತಾರ್ಹ ಎಂದ ರವಿ, ಕೇವಲ ಪರಿಹಾರ ನೀಡಿದರೆ ಸಾಲದು, ಇಡೀ ಯೋಜನೆ ಮುಕ್ತಾಯಗೊಳ್ಳಬೇಕು ಎಂದರು.

ವರದಿಗಳ ಪ್ರಕಾರ ಇಡೀ ಯೋಜನೆಯನ್ನು ಪೂರ್ಣ ಮುಗಿಸಲು ಸದ್ಯ ಸುಮಾರು 1.20 ಲಕ್ಷ ಕೋಟಿಗೂ ಅಧಿಕ ಮೊತ್ತದ ಅವಶ್ಯಕತೆ ಇದೆ. ಈ ಬೃಹತ್ ಮೊತ್ತವನ್ನು ಸರಿದೂಗಿಸಲು ಸರ್ಕಾರ ಪ್ರತಿ ವರ್ಷ ಕನಿಷ್ಠ 20 ದಿಂದ 25ಸಾವಿರ ಕೋಟಿಯನ್ನು ಈ ಯೋಜನೆಗಾಗಿಯೇ ಮೀಸಲಿಡಬೇಕು ಎಂದು ತಿಳಿಸಿದರು. ಈ ವಿಷಯದಲ್ಲಿ ಯಾವುದೇ ರಾಜಕೀಯ ಮಾಡಲು ಬಯಸುವುದಿಲ್ಲ. ಆದರೆ ಯೋಜನೆ ಪೂರ್ಣಗೊಳ್ಳದೆ ಅದಕ್ಕೆ ಶತಮಾನೋತ್ಸವ ಆಚರಿಸುವ ಪರಿಸ್ಥಿತಿ ಬಂದರೆ ಅದು ಯಾರಿಗೂ ಗೌರವ ತರುವ ಸಂಗತಿಯಲ್ಲ. ಜನರು ವ್ಯವಸ್ಥೆಯ ಮೇಲಿನ ನಂಬಿಕೆ ಕಳೆದುಕೊಳ್ಳದಂತೆ ಸರ್ಕಾರ ಶೀಘ್ರವಾಗಿ ಸಂಪನ್ಮೂಲ ಕ್ರೋಢೀಕರಿಸಬೇಕು ಎಂದು ಅವರು ಹೇಳಿದರು.

ಬಾಗಲಕೋಟೆ ಕ್ಷೇತ್ರದಲ್ಲಿ ಬಾಕಿ ಇರುವ ವಿವಿಧ ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ಶೀಘ್ರವಾಗಿ ಅನುಷ್ಠಾನಕ್ಕೆ ತರುವಂತೆ ಸರ್ಕಾರವನ್ನು ಒತ್ತಾಯಿಸಿದ ಅವರು, ಭರವಸೆ ನೀಡಿರುವ ಯೋಜನೆಗಳನ್ನು ಸರ್ಕಾರ ಮರೆಯಬಾರದು. ರಾಜಕಾರಣದ ಜಂಜಾಟದಲ್ಲಿ ರಾಜಕಾರಣಿಗಳು ಜನರ ಬದುಕಿನ ಸಮಸ್ಯೆಗಳನ್ನು ಹಾಗೂ ಅಭಿವೃದ್ಧಿ ವಿಚಾರಗಳನ್ನು ಮರೆಯುವುದು ಸ್ವಾಭಾವಿಕ. ಅದಕ್ಕಾಗಿಯೇ ನಾವು ಈ ಯೋಜನೆಗಳನ್ನು ನೆನಪಿಸುತ್ತಿದ್ದೇವೆ ಎಂದು ಅವರು ತಿಳಿಸಿದರು.

ಪ್ರಸ್ತಾಪಿತ ಬಾಗಲಕೋಟೆ ಸರ್ಕಾರಿ ವೈದ್ಯಕೀಯ ಕಾಲೇಜು ಶೀಘ್ರದಲ್ಲೇ ಪ್ರಾರಂಭವಾಗಬೇಕು ಮತ್ತು ಅದಕ್ಕೆ ಸಂಬಂಧಿಸಿದ ಕಾಮಗಾರಿಗಳು ವೇಗವಾಗಿ ನಡೆಯಬೇಕು. ಈ ಹಿಂದೆ ನೀಡಲಾಗಿದ್ದ ಭರವಸೆಯಂತೆ ಜವಳಿ ಪಾರ್ಕ ಸ್ಥಾಪನೆಯ ಕೆಲಸ ಯಾವಾಗ ಪೂರ್ಣಗೊಳ್ಳುತ್ತದೆ ಎನ್ನುವುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದ ರವಿ, ಬೀಳಗಿ ಏತ ನೀರಾವರಿ ಯೋಜನೆಗೆ ಶೀಘ್ರದಲ್ಲೇ ಅನುಮೋದನೆ ನೀಡಬೇಕು. ನೂತನ ಮುಖ್ಯಮಂತ್ರಿಗಳು ಈ ಯೋಜನೆಗೆ ಅಗತ್ಯ ಅನುಮೋದನೆ ನೀಡಿ ರೈತರಿಗೆ ನೆರವಾಗಬೇಕು. ಕೈಗಾರಿಕಾ ಹಬ್‌ಗಳ ಸ್ಥಾಪನೆ ಮತ್ತು ಉದ್ಯೋಗ ಸೃಷ್ಟಿಯ ಭರವಸೆಗಳು ಕೇವಲ ಪ್ರಣಾಳಿಕೆ ಅಥವಾ ಪುಸ್ತಕಕ್ಕೆ ಸೀಮಿತವಾಗಬಾರದು. ಇದು ವಾಸ್ತವ ನೆಲೆಯಲ್ಲಿ ಕಾರ್ಯಾರಂಭ ಮಾಡಬೇಕು ಎಂದು ಅವರು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಶಾಸಕ ಸಿದ್ದು ಸವದಿ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ಮಾಜಿ ಸಚಿವ ಮುರುಗೇಶ ನಿರಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ, ಮಾಜಿ ಶಾಸಕ ರಾಜಶೇಖರ ಶೀಲವಂತ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ ಸೇರಿದಂತೆ ಮತ್ತಿತರರು ಇದ್ದರು.

## ಚಿಂತಕಿ ಶಕುಂತಲಾಬಾಯಿ ನಿಧನ

**ಸುರಪುರ:** ನಿವೃತ್ತ ಶಿಕ್ಷಕಿ ಹಾಗೂ ಆಧ್ಯಾತ್ಮಿಕ ಚಿಂತಕಿ ಶಕುಂತಲಾಬಾಯಿ



ಭೀಮಾಚಾರ್ಯ ಜೋಶಿ (91) ಅವರು ರವಿವಾರ ನಿಧನರಾದರು. ವಿಜಯಪುರದಲ್ಲಿ ಅವರ ಅಂತ್ಯಕ್ರಿಯೆ ನೆರವೇರಿತು. ಚಿಂತಕಿ ಶಕುಂತಲಾಬಾಯಿ ಅವರು, ಸುರಪುರದ ಹಿರಿಯ ಸಾಹಿತಿ ಹಾಗೂ ಜಿಲ್ಲಾ ಗಮಕ ಕಲಾ ಪರಿಷತ್ತಿನ ಅಧ್ಯಕ್ಷರಾದ ಶ್ರೀನಿವಾಸ ಜಾಲವಾದಿ ಅವರು ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

**ಗಣ್ಯರ ಸಂತಾಪ:** ಮೃತರ ನಿಧನಕ್ಕೆ ಸುರಪುರ ಸಂಸ್ಥಾನದ ರಾಜಾ ಕೃಷ್ಣಪ್ಪ ನಾಯಕ, ಹಿರಿಯ ಮುಖಂಡ ರಾಜಾ ಮುಕುಂದ ನಾಯಕ, ನಿವೃತ್ತ ಎಸ್ಪಿ ಸಿ.ಎನ್. ಭಂಡಾರಿ, ಹೈಕೋರ್ಟ್ ವಕೀಲ ಜೆ. ಆಗಸ್ಟಿನ್, ಕನ್ನಡ ಸಾಹಿತ್ಯ ಸಂಘದ ಅಧ್ಯಕ್ಷ ಬಸವರಾಜ ಜಮದ್ರಖಾನಿ ಹಾಗೂ ರಂಗಂಪೇಟೆ ಕಸಾಸಂ ಅಧ್ಯಕ್ಷ ಸೂಗುರೇಶ ವಾರದ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಹಾಗೆಯೇ ಸಾಹಿತಿಗಳಾದ ನಬೀಲಾಲ ಮಕಾನದಾರ, ಸಿದ್ರಾಮ ಹೊನ್ಕಲ್, ಪ್ರಕಾಶಚಂದ ಜೈನ, ಲಕ್ಷ್ಮಿಕಾಂತ ಮೊಹರೀರ, ನಾಗರಾಜ ಜಮದರಖಾನಿ, ಡಾ. ಸತ್ಯನಾರಾಯಣ ಆಲದರ್ತಿ, ಡಾ. ಜಾಗೀರದಾರ, ಐ.ಜಿ. ನಾರಾಯಣಾಚಾರ್ಯ, ಕನಕಪ್ಪ ವಾಗನಗೇರಿ, ಕಸಾಪ ಅಧ್ಯಕ್ಷ ಶರಣಬಸಪ್ಪ ಯಾಳವಾರ, ಎಚ್. ರಾಠೋಡ, ವೆಂಕಟೇಶಗೌಡ ಪಾಟೀಲ, ವೀರಣ್ಣ ಕಲಕೇರಿ, ಡಾ. ಯಂಕನಗೌಡ ಪಾಟೀಲ್, ಮಲ್ಲಿಕಾರ್ಜುನ ಉದ್ಧಾರ, ಸಜ್ಜನಶೆಟ್ಟಿ, ಪ್ರಕಾಶ ಬಣಗಾರ, ಲಕ್ಷ್ಮಣ ಗುತ್ತೇದಾರ, ಕವಿ ಮಲ್ಲೇಶಿ ಕೋನಾಳ, ನ್ಯಾಯವಾದಿ ಜಯಲಲಿತಾ ಪಾಟೀಲ, ಪಾರ್ವತಿ ದೇಸಾಯಿ, ಕರವೇ ಅಧ್ಯಕ್ಷ ವೆಂಕಟೇಶ ಭೈರಿಮಡ್ಡಿ, ಮುದ್ದಪ್ಪ ಅಪ್ಪಾಗೋಳ, ಪ್ರಕಾಶ ಅಲಬನೂರ, ಅರ್ಷದ್ ದಖನಿ, ಶಿಕ್ಷಕರ ಸಂಘದ ಅಧ್ಯಕ್ಷ ಸೋಮರೆಡ್ಡಿ ಮಂಗಿಹಾಳ, ನರಸಿಂಹ ಬಾಡಿಹಾಳ, ಕಾರ್ಮಿಕ ನಾಯಕ ದೇವೇಂದ್ರಪ್ಪ ಪತ್ತಾರ, ರೈತ ನಾಯಕ ಮಲ್ಲಿಕಾರ್ಜುನ ಸತ್ಯಂಪೇಟೆ, ದಸಂಸ ಮುಖಂಡ ಮಲ್ಲಿಕಾರ್ಜುನ ಕ್ರಾಂತಿ ಹಾಗೂ ರಾಘವೇಂದ್ರ ಭಕ್ರಿ ಸೇರಿದಂತೆ ಹಲವು ಗಣ್ಯರು ಮೃತರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿ, ಶೋಕ ತಪ್ತ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ.

## ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ: ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ



**ವಿಜಯಪುರ:** ಜಿಲ್ಲೆಯಲ್ಲಿ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯವು ಅತ್ಯಂತ ಚುರುಕಿನಿಂದ ಸಾಗಿದ್ದು, ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಬುಧವಾರ ವಿಜಯಪುರ ನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಳೆದ ಜೂನ್ 29 ರಿಂದಲೇ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣಾ ಕಾರ್ಯವು ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ನಗರದ ಚುನಾವಣೆ ಭಾಗ ಸಂಖ್ಯೆ 2ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪರಿಷ್ಕರಣಾ ಕಾರ್ಯದ ಪ್ರಗತಿಯನ್ನು ಖುದ್ದಾಗಿ ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಇಡೀ ಪ್ರಕ್ರಿಯೆಯ ಮೇಲ್ವಿಚಾರಣೆ ನಡೆಸಿದರು. ಇದೇ ವೇಳೆ ಸ್ಥಳದಲ್ಲಿದ್ದ ನಿಯೋಜಿತ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಚರ್ಚಿಸಿದ ಅವರು, ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದಂತೆ ಅತ್ಯಂತ ನಿಖರವಾಗಿ ಕಾರ್ಯನಿರ್ವಹಿಸಲು ಅಗತ್ಯ ಸಲಹೆ- ಸೂಚನೆಗಳನ್ನು ನೀಡಿದರು.

ಈ ಪರಿಶೀಲನಾ ಕಾರ್ಯದ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ನೋಡಲ್ ಅಧಿಕಾರಿಯಾದ ವಿಜಯ ಮೆಕ್ಕಳಕಿ ಸೇರಿದಂತೆ ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ವಿವಿಧ ಇಲಾಖೆಯ ಅಧಿಕಾರಿ,ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಗುಗ್ಗರಹಟ್ಟಿಯಲ್ಲಿ ಡಬಲ್ ಮರ್ಡರ್...!

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಗುಗ್ಗರಹಟ್ಟಿ ಪ್ರದೇಶದಲ್ಲಿ ನಿನ್ನೆ ಸಂಜೆ ಮಹಿಳೆ ಮತ್ತು ಆಕೆಯ ತಂದೆಯನ್ನು, ಆಕೆಯ ಪತಿ ಮತ್ತು ಮಾವನೇ ಚಾಕುವಿನಿಂದ ಇರಿದು ಭೀಕರವಾಗಿ ಕೊಲೆ ಮಾಡಿದ್ದಾರೆ.

ಮೃತರನ್ನು ನಾಗಲಕ್ಷ್ಮೀ (24) ಆಕೆಯ ತಂದೆ ಶ್ರೀನಿವಾಸ (48) ಎಂದು ಗುರುತಿಸಲಾಗಿದೆ. ದೋಬಿ ವೃತ್ತಿಯಲ್ಲಿ ತೊಡಗಿದ್ದ, ಆರೋಪಿಗಳಾದ ತೇಜಾ (29), ಆತನ ತಂದೆ ಗುರುಶಂಕರ (50) ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪತ್ನಿ ನಾಗಲಕ್ಷ್ಮೀ ಮೇಲೆ ಅನುಮಾನ ಹೊಂದಿದ್ದ ತೇಜ ಆಗಾಗ ಜಗಳವಾಡುತ್ತಿದ್ದ. ತಮ್ಮಿಬ್ಬರ ನಡುವಿನ ಕಲಹವನ್ನು ಬಗೆಹರಿಸಲೆಂದು ಆರೋಪಿ ತೇಜ ರಾಜಿ ಪಂಚಾಯಿತಿ ಮಾಡಲು ಮಾವ ಶ್ರೀನಿವಾಸ ಮತ್ತು ಸಂಬಂಧಿಗಳನ್ನು ಮಂಗಳವಾರ ಮನೆಗೆ ಕರೆಸಿಕೊಂಡಿದ್ದ. ಮಾತುಕತೆ ವೇಳೆ, ವಾಗ್ವಾದ, ಹಲ್ಲೆ ನಡೆದಿದೆ. ಜಗಳ ವಿಕೋಪಕ್ಕೆ ಹೋಗಿ ತೇಜ ಮತ್ತು ಆತನ ತಂದೆ ಇಬ್ಬರೂ ಸೇರಿ ನಾಗಲಕ್ಷ್ಮೀ ಹಾಗೂ ಆಕೆಯ ತಂದೆ ಶ್ರೀನಿವಾಸಗೆ ಚಾಕುವಿನಿಂದ ಇರಿದಿದ್ದಾರೆ. ಪರಿಣಾಮ ಇಬ್ಬರೂ ಮನೆ ಆವರಣದಲ್ಲೇ ಮೃತಪಟ್ಟಿದ್ದಾರೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಎಪಿಎಂಸಿ ಠಾಣೆ-ಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದರು. ಆರೋಪಿಗಳಿಬ್ಬರೂ ಸ್ಥಳದಲ್ಲೇ ಪೊಲೀಸರಿಗೆ ಸಿಕ್ಕರು. ಕೊಲೆಯ ನಿಖರ ಕಾರಣ ಹಾಗೂ ಘಟನೆಗೆ ಸಂಬಂಧಿಸಿದ ಇತರ ಅಂಶಗಳ ಕುರಿತು ತನಿಖೆ ನಡೆದಿದೆ.

ಸ್ಥಳಕ್ಕೆ ಭೇಟಿ ನೀಡಿದ್ದ ಬಳ್ಳಾರಿ ವಲಯ ಐಜಿಪಿ ಪಿ.ಎಸ್ ಹರ್ಷ ಮಾತನಾಡಿ, ಆರೋಪಿ ತೇಜುಗೆ ಪತ್ನಿಯ ಮೇಲೆ





ಅನುಮಾನಗಳಿದ್ದವು. ಹೀಗಾಗಿ ಕೃತ್ಯವೆಸಗಿದ್ದಾನೆ. ಆರೋಪಿ ಮತ್ತು ಆತನ ತಂದೆಯನ್ನು ವಶಕ್ಕೆ ಪಡೆಯಲಾಗಿದೆ. ಅವರನ್ನು ನ್ಯಾಯಾಲಯಕ್ಕೆ ಒಪ್ಪಿಸಿ ಬಳಿಕ ವಶಕ್ಕೆ ಪಡೆದು ಮತ್ತಷ್ಟು ವಿಚಾರಣೆ ನಡೆಸಲಾಗುವುದು' ಎಂದು ಹೇಳಿದ್ದಾರೆ.

ಇದೇ ವೇಳೆ ತನಿಖೆಯನ್ನು ಸಮಗ್ರ ಹಾಗೂ ಶೀಘ್ರಗತಿಯಲ್ಲಿ ಪೂರ್ಣಗೊಳಿಸಿ, ಸತ್ಯಾಂಶವನ್ನು ಹೊರತರುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಬರಪೀಡಿತ ಜಿಲ್ಲೆ ಘೋಷಣೆಗೆ ಈಶ್ವರ ಖಂಡ್ರೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಗೆ ಬೀದರನಲ್ಲಿ ನಿರೀಕ್ಷಿತ ಮಳೆ ಬಾರದೆ, ಬರದ ಛಾಯೆ ಆವರಿಸಿದೆ. ಕಾರಣ ಬೀದರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಗೆ ರೈತ ಮುಖಂಡ ಕಿರಣಕುಮಾರ ಖಂಡ್ರೆ ಒತ್ತಾಯಿಸಿದ್ದಾರೆ.



ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ಬೀದರನ ಎಲ್ಲ ಭಾಗದಲ್ಲಿ ಮಳೆ ಸಂಪೂರ್ಣ ಕೈ ಕೊಟ್ಟಿರುವುದರಿಂದ ನೀರಾವರಿ ಆಧಾರಿತ ವಾಣಿಜ್ಯ ಮತ್ತು ವಾಣಿಜ್ಯಯೇತರ ಬೆಳೆಗಳು ಬಾಡುತ್ತಿವೆ. ಕುಡಿಯುವ ನೀರು ಮತ್ತು ಜಾನುವಾರಗಳಿಗೆ ಮೇವಿನ ಕೊರತೆಯಾಗಿದೆ.ಜನ ಉದ್ಯೋಗಕ್ಕಾಗಿ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.ಕೆಲವು ಕಡೆ ರೈತರು ಮಳೆ ಬರಬಹುದು ಎಂದು ನಿರೀಕ್ಷೆ ಮಾಡಿ ದುಬಾರಿ ಬೆಲೆಯ ಬೀಜ,ರಸಗೊಬ್ಬರ ಖರೀದಿ ಮಾಡಿ ಬಿತ್ತನೆ ಮಾಡಿದ್ದಾರೆ.ಆದರೆ ಯಾವ ರೈತನ ಹೊಲದಲ್ಲಿ ಮೊಳಕೆ ಒಡೆದಿಲ್ಲ. ರೈತ ಮುಗಿಲು ಕಡೆ ಮುಖ ಮಾಡಿ ಆತಂಕದಲ್ಲಿ ಕಾಲ ಕಳೆಯುತ್ತಿದ್ದಾನೆ. ಕಾರಣ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸರ್ಕಾರದ ಮೇಲೆ ಒತ್ತಡ ಹೇರಿ ಬೀದರ ಜಿಲ್ಲೆ ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ ,ಕುಡಿಯುವ ನೀರಿಗಾಗಿ ಮತ್ತು ಮೇವಿಗಾಗಿ ಅನುದಾನ ಒದಗಿಸಿ ಅಗತ್ಯ ಬರ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ರೈತ ಮುಖಂಡ ಕಿರಣಕುಮಾರ ಖಂಡ್ರೆ ಒತ್ತಾಯಿಸಿದ್ದಾರೆ.

## ವೆಂಕಟೇಶ ವಿರುದ್ಧದ ಆರೋಪಕ್ಕೆ ಖಂಡನೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ (ಇ.ಇ.) ವೆಂಕಟೇಶಗಲಗ ಅವರ ವಿರುದ್ಧ ಮಾಡಲಾಗುತ್ತಿರುವ ಆಧಾರರಹಿತ ಆರೋಪಗಳನ್ನು ತಕ್ಷಣವೇ ನಿಲ್ಲಿಸಬೇಕು ಎಂದು ತಾಲೂಕು ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಂಘದ ಉಪಾಧ್ಯಕ್ಷರಾದ ಓಬಳೇಶ್ ನಾಯಕ ಗೊರೆಬಾಳ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೇಳಿಕೆ ನೀಡಿರುವ ಅವರು, "ಅಧಿಕಾರಿ ವೆಂಕಟೇಶ ಗಲಗ ಅವರು ತಾಲೂಕಿನಲ್ಲಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರ ವಿರುದ್ಧ ಯಾವುದೇ ಅವ್ಯವಹಾರ ಅಥವಾ ಹಣ ದುರುಪಯೋಗದ ಆರೋಪಗಳು ಸಾಬೀತಾಗಿಲ್ಲ. ಹೀಗಿದ್ದರೂ, ವಿನಾಕಾರಣ ಆರೋಪಗಳನ್ನು ಮಾಡಿ ಅವರ ಹೆಸರಿಗೆ ಕಳಂಕ ತರುವ ಕೆಲಸವನ್ನು ಕೆಲವರು ಮಾಡುತ್ತಿದ್ದಾರೆ. ಇದನ್ನು ನಮ್ಮ ಸಮಾಜ ತೀವ್ರವಾಗಿ



ಖಂಡಿಸುತ್ತದೆ ಎಂದು ತಿಳಿಸಿದ್ದಾರೆ.

ಸಮಾಜದ ಕನಿಷ್ಠ ಮಟ್ಟದಿಂದ ಕಷ್ಟಪಟ್ಟು ಓದಿ, ಉನ್ನತ ಹುದ್ದೆಗೇರಿದ ವೆಂಕಟೇಶ ಗಲಗ ಅವರಂತಹ ದಕ್ಷ ಅಧಿಕಾರಿಗಳನ್ನು ಸುಳ್ಳು ಆರೋಪಗಳ ಮೂಲಕ ಮಾನಸಿಕವಾಗಿ ಕುಗ್ಗಿಸುವ ಮತ್ತು ತುಳಿಯುವ ಪ್ರಯತ್ನಗಳು ನಡೆಯುತ್ತಿವೆ. ಕೆಲವರು ಯಾವುದೇ ಸತ್ಯಾಸತ್ಯತೆಯನ್ನು ಪರಿಶೀಲಿಸದೆ ಪತ್ರಿಕೆಗಳಲ್ಲಿ ವರದಿ ಪ್ರಕಟಿಸುವ ಮೂಲಕ ಅಧಿಕಾರಿಗೆ ಮಾನಸಿಕ ಹಿಂಸೆ ನೀಡುತ್ತಿದ್ದಾರೆ ಎಂದು ಅವರು ದೂರಿದರು.

## ಸಚಿವ ಯು.ಟಿ ಖಾದರ್‌ಗೆ ಮಲ್ಲಮ್ಮನುಡಿ ಜಿಲ್ಲಾ ವರದಿಗಾರರಿಂದ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಕರ್ನಾಟಕ ರಾಜ್ಯದ ಘನಸರಕಾರದ ಸಚಿವರಾದ ಯು.ಟಿ. ಖಾದರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಮತ್ತು ಉಡುಪಿ ದಕ್ಷಿಣ ಕನ್ನಡ ಹಾಗೂ ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಿಗೆ ಇತ್ತೀಚಿಗೆ ಕಾರವಾರಕ್ಕೆ ಆಗಮಿಸಿದಾಗ ಜಿಲ್ಲಾ ಕೇಂದ್ರದಲ್ಲಿ ಸಭೆಯ ನಂತರದಲ್ಲಿ ಉತ್ತರ ಕನ್ನಡ ಜಿಲ್ಲಾ ಮಲ್ಲಮ್ಮ ನುಡಿ ಪತ್ರಿಕೆಯ ಜಿಲ್ಲಾ ವರದಿಗಾರರಿಂದ ಮಲ್ಲಮ್ಮನುಡಿ ಪತ್ರಿಕೆ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಸಚಿವರಿಗೆ ಈ ಹಿಂದೆ ಮಲ್ಲಮ್ಮನುಡಿ ಪತ್ರಿಕೆಯ ಉದ್ಘಾಟನೆಯ ಕಾರ್ಯಕ್ರಮಕ್ಕೆ ಆಹ್ವಾನಿಸಿದನ್ನು ನೆನಪಿಸಿಕೊಂಡರು.

ತಾವು ಸಭಾಪತಿಯ ಕಾರ್ಯಕ್ರಮದಲ್ಲಿ ಸಮಯ ಸಿಗದೇ ಬರಲು ಆಗಿಲ್ಲ ಎಂದು ತಿಳಿಸುತ್ತ ನಿಮ್ಮ ಪತ್ರಿಕೆ ಸಂಪಾದಕರು ಹಾಗೂ ಬಳಗದವರಿಗೆ ಶುಭಹಾರೈಸುತ್ತ ರಾಜ್ಯಾದ್ಯಂತವಲ್ಲದೇ ನಮ್ಮ ದೇಶದ



ಮೂಲೆ ಮೂಲೆಗಳಲ್ಲಿ ಪತ್ರಿಕೆಯು ಪಸರಿಸಲಿ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಓದುಗಾರರು ಪತ್ರಿಕೆಯ ಬಗ್ಗೆ ಶ್ಲಾಘಿಸಲಿ ಎಂದರು. ಈ ವೇಳೆ ಉತ್ತರ ಕನ್ನಡ ಜಿಲ್ಲೆಯ ಕಾರವಾರ-ಅಂಕೋಲಾ ಶಾಸಕರಾದ ಸತೀಶ ಸೈಲ್, ಕುಮಟಾ ಶಾಸಕರಾದ ದಿನಕರ ಶೆಟ್ಟಿ, ಯಲ್ಲಾಪುರ-ಮುಂಡಗೋಡ ಶಾಸಕ ಶಿವರಾಮ ಹೆಬ್ಬಾರ, ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್, ದಿಲೀಶ ಶಶಿ ಹಾಗೂ ಅನೇಕ ಜನಪ್ರತಿನಿಧಿಗಳು, ಜಿಲ್ಲಾಮಟ್ಟದ ಎಲ್ಲ ಇಲಾಖಾಧಿಕಾರಿಗಳು ಹಾಜರಿದ್ದರು.

## ಪೊಲೀಸ್ ಠಾಣೆಯಲ್ಲೇ ಸ್ವಾಮೀಜಿಯವರ ಮೇಲೆ ಕೊಲೆ ಯತ್ನ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಚಿತ್ರದುರ್ಗ ಜಿಲ್ಲೆಯ ಐಮಂಗಲ ಗ್ರಾಮದ ಹರಳಯ್ಯ ಸ್ವಾಮೀಜಿಯವರ ಮೇಲೆ ದುಷ್ಕರ್ಮಿಗಳು ನಡೆಸಿರುವ ಮಾರಣಾಂತಿಕ ಹಲ್ಲೆ ಹಾಗೂ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲೇ ಮರುದಾಳಿ ನಡೆಸಿ ಕೊಲೆಯತ್ನಕ್ಕೆ ಯತ್ನಿಸಿರುವ ಘಟನೆ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಯ ಸಂಪೂರ್ಣ ವೈಫಲ್ಯವನ್ನು ಬಯಲಿಗೆಳೆದಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ.) 47/74-75 ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಹಗರಿಬೊಮ್ಮನಹಳ್ಳಿ ತಹಶೀಲ್ದಾರರ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದ ಸಮಿತಿಯು, ರಾತ್ರಿ ವೇಳೆ ಮಠಕ್ಕೆ ನುಗ್ಗಿ ಸ್ವಾಮೀಜಿಯವರ ಮೇಲೆ ಹಲ್ಲೆ ನಡೆಸಿದ ದುಷ್ಕರ್ಮಿಗಳು, ದೂರು ದಾಖಲಿಸಲು ತೆರಳಿದ್ದ ಪೊಲೀಸ್ ಠಾಣೆಯ ಸಮೀಪದಲ್ಲಿಯೇ ಮತ್ತೊಮ್ಮೆ



ಹಲ್ಲೆ ನಡೆಸಿರುವುದು ಅತ್ಯಂತ ಖಂಡನೀಯ. ಕಾನೂನಿನ ರಕ್ಷಣೆ ಸಿಗಬೇಕಾದ ಸ್ಥಳದಲ್ಲಿಯೇ ಇಂತಹ ಕೃತ್ಯ ನಡೆದಿರುವುದು ರಾಜ್ಯದ ಜನರಲ್ಲಿ ಭಯ ಮತ್ತು ಅಭದ್ರತೆಯ ವಾತಾವರಣ ನಿರ್ಮಾಣ ಮಾಡಿದೆ ಎಂದು ಆರೋಪಿಸಿದೆ.

ಪ್ರಕರಣದ ಎಲ್ಲಾ ಆರೋಪಿಗಳನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಕರ್ತವ್ಯಲೋಪ ಎಸಗಿದ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ ಇಲಾಖಾ ತನಿಖೆಗೆ ಒಳಪಡಿಸಬೇಕು. ಪ್ರಕರಣವನ್ನು ತ್ವರಿತಗತಿಯಲ್ಲಿ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಾನೂನಿನ ಅಡಿಯಲ್ಲಿ ಅತ್ಯಂತ ಕಠಿಣ ಶಿಕ್ಷೆ ವಿಧಿಸಬೇಕು. ಶ್ರೀ ಹರಳಯ್ಯ ಸ್ವಾಮೀಜಿಯವರಿಗೆ, ಅವರ ಕುಟುಂಬಕ್ಕೆ ಹಾಗೂ ಮಠಕ್ಕೆ ಶಾಶ್ವತ ಪೊಲೀಸ್ ಭದ್ರತೆ ಒದಗಿಸಬೇಕು ಎಂದು ಸಮಿತಿ ಸರ್ಕಾರವನ್ನು ಆಗ್ರಹಿಸಿದೆ.

ಸರ್ಕಾರ ಹಾಗೂ ಪೊಲೀಸ್ ಇಲಾಖೆ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ರಾಜ್ಯಾದ್ಯಂತ ತೀವ್ರ ಹೋರಾಟ ಹಮ್ಮಿಕೊಳ್ಳಬೇಕಾದ ಅನಿವಾರ್ಯತೆ ಎದುರಾಗಲಿದೆ ಎಂದು ಸಮಿತಿಯು ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಪರಶುರಾಮ ಹೆಗ್ಡಳ್, ಜಿಲ್ಲಾ ಸಂಘಟನಾ ಸಂಚಾಲಕ ಕೋಗಳಿ ಉಮೇಶ್, ನಾಗರಾಜ ಕಲ್ಲಹಳ್ಳಿ, ಕೆ.ಎಚ್. ಪ್ರಭಾಕರ್, ಮೆಘರಾಜ್ ಓಂಟಿ, ಗಣೇಶ್ ಅಲಬೂರ್, ಮರಿಯಪ್ಪ ಯಡ್ರಮ್ಮನಹಳ್ಳಿ, ದುರುಗಪ್ಪ ಕೆಚ್ಚಿನಬಂಡಿ, ಖಜಾಂಚಿ ರಮೇಶ್ ಚಿಂತ್ರಪಳ್ಳಿ, ಮರಿಯಪ್ಪ ದಶಮಾಪುರ, ಪಕ್ಕೀರಪ್ಪ ಕಡ್ಲಬಾಳು, ದುರುಗಪ್ಪ ಕಿತ್ತೂರು, ಮೈಲಪ್ಪ ಕೊಗಳಿ, ಪ್ರಸಾದ್ ಹಂಪಾಪಟ್ಟಣ, ಶಿವಮೂರ್ತಿ ನೆಲ್ಲಕುದುರೆ, ಕೆಂಚಪ್ಪ ಕೆಚ್ಚಿನಬಂಡಿ, ಮೈಲಾರಪ್ಪ ತೆಲುಗೋಳಿ, ಗೋಣೆಪ್ಪ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದು ಮನವಿ ಸಲ್ಲಿಸಿದರು.

## ಶಾಶ್ವತ ನಿವಾಸ ಪ್ರಮಾಣ ಪತ್ರ ನೀಡುವ ಮಾರ್ಗಸೂಚಿ ಹೊರಡಿಸಿರುವ ಸರ್ಕಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಪ್ರಸ್ತುತ ಕಂದಾಯ ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸರ್ಕಾರಿ ಆದೇಶಗಳು ಹಾಗೂ ಸುತ್ತೋಲೆಗಳ ಅನುಸಾರ ಕಂದಾಯ ಆಡಳಿತದ ಮೂಲಕ ಅರ್ಹ ವ್ಯಕ್ತಿಗಳಿಗೆ ವಾಸಸ್ಥಳ ಪ್ರಮಾಣ ಪತ್ರ ಹಾಗೂ ಡೊಮಿಸೈಲ್ ಪ್ರಮಾಣ ಪತ್ರ ಗಳನ್ನು ನೀಡಲಾಗುತ್ತಿದೆ.



ಮತ್ತು ಕಂದಾಯ ಇಲಾಖೆಯಿಂದ ನೀಡಲಾಗುತ್ತಿರುವ ಡೊಮಿಸೈಲ್ ಪ್ರಮಾಣ ಪತ್ರವು ಅದನ್ನು ಹೊಂದಿರುವ ವ್ಯಕ್ತಿಯು ಕರ್ನಾಟಕ ರಾಜ್ಯದ ಶಾಶ್ವತ ನಿವಾಸಿಯಾಗಿರುವುದನ್ನು ದೃಢೀಕರಿಸುವ ದಾಖಲೆಯಾಗಿದ್ದು, ಪ್ರವೇಶಾತಿ, ವಿದ್ಯಾರ್ಥಿವೇತನ, ಉದ್ಯೋಗ, ಕಲ್ಯಾಣ ಯೋಜನೆಗಳು ಹಾಗೂ ಇತರೆ ಕಾನೂನುಬದ್ಧ ಆಡಳಿತಾತ್ಮಕ ಉದ್ದೇಶಗಳಿಗಾಗಿ ವ್ಯಾಪಕವಾಗಿ ಬಳಸಲ್ಪಡುತ್ತಿದೆ.

ಮತ್ತು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964, ಕರ್ನಾಟಕ ಭೂ ಕಂದಾಯ ನಿಯಮಗಳು, 1966, ಕರ್ನಾಟಕ ಭೂ ಮಂಜೂರು ನಿಯಮಗಳು, 1969 ಹಾಗೂ ಕಂದಾಯ ಇಲಾಖೆಯ ಆಡಳಿತಕ್ಕೆ ಒಳಪಡುವ ವಿವಿಧ ಸರ್ಕಾರಿ ಯೋಜನೆಗಳು ಮತ್ತು ಕಾರ್ಯಕ್ರಮಗಳಲ್ಲಿ ಶಾಶ್ವತ ನಿವಾಸದ ದೃಢೀಕರಣವು ಅರ್ಹತೆಯ ಮಾನದಂಡಗಳಲ್ಲಿ ಒಂದಾಗಿದ್ದು, ರಾಜ್ಯಾದ್ಯಂತ ಶಾಶ್ವತ ನಿವಾಸ ಪ್ರಮಾಣ ಪತ್ರಗಳನ್ನು ನೀಡುವ ಸಂಬಂಧ ಏಕರೂಪದ, ಪಾರದರ್ಶಕ ಹಾಗೂ ಕಾನೂನುಬದ್ಧವಾಗಿ ಸುಸ್ಥಿರವಾದ ವ್ಯವಸ್ಥೆಯನ್ನು ರೂಪಿಸುವುದು ಅಗತ್ಯವೆಂದು ಸರ್ಕಾರವು ಮನಗಂಡಿರುತ್ತದೆ.

ಅನ್ವಯವಾಗುವ ಅಧಿನಿಯಮಗಳು, ನಿಯಮಗಳು, ಸರ್ಕಾರಿ ಆದೇಶಗಳು, ಅಧಿಸೂಚನೆಗಳು ಹಾಗೂ ಯೋಜನಾ ಮಾರ್ಗಸೂಚಿಗಳಲ್ಲಿ ಶಾಶ್ವತ ನಿವಾಸವನ್ನು ಅರ್ಹತೆಯ ಮಾನದಂಡವಾಗಿ ನಿಗದಿಪಡಿಸಿರುವ ಸಂದರ್ಭಗಳಲ್ಲಿ, ಶಾಶ್ವತ ನಿವಾಸವನ್ನು ದೃಢೀಕರಿಸಲು ಏಕರೂಪದ ವ್ಯವಸ್ಥೆಯನ್ನು ಕಲ್ಪಿಸುವುದು ಹಾಗೂ ಅರ್ಹತೆಯನ್ನು ನಿರ್ಧರಿಸಲು ಅನುಕೂಲವಾಗುವ ಉದ್ದೇಶದಿಂದ ಶಾಶ್ವತ ನಿವಾಸ ಪ್ರಮಾಣ ಪತ್ರವನ್ನು ನೀಡುವುದು ಅಗತ್ಯವೆಂದು ಸರ್ಕಾರವು ಅಭಿಪ್ರಾಯಪಟ್ಟಿರುತ್ತದೆ.

ಆದ್ದರಿಂದ, ಭಾರತದ ಸಂವಿಧಾನದ ಅನುಚ್ಛೇದ 162ರ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಕಾರ್ಯನಿರ್ವಾಹಕ ಅಧಿಕಾರ ಹಾಗೂ ಅನುಚ್ಛೇದ 166ರ ಅನ್ವಯ, ಕರ್ನಾಟಕ ಭೂ ಕಂದಾಯ ಅಧಿನಿಯಮ, 1964, ಕರ್ನಾಟಕ ಭೂ ಕಂದಾಯ ನಿಯಮಗಳು, 1966, ಕರ್ನಾಟಕ ಭೂ ಮಂಜೂರು ನಿಯಮಗಳು, 1969, ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಹಾಗೂ ಅದರಡಿ ಹೊರಡಿಸಲಾದ ಅಧಿಸೂಚನೆಗಳು, ವಾಸಸ್ಥಳ ಮತ್ತು ಡೊಮಿಸೈಲ್ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಹೊರಡಿಸಲಾದ ಸರ್ಕಾರಿ ಆದೇಶಗಳು ಹಾಗೂ ಸುತ್ತೋಲೆಗಳು ಮತ್ತು ಈ ಸಂಬಂಧ ಸರ್ಕಾರಕ್ಕೆ ಪ್ರದತ್ತವಾದ ಇತರೆ ಎಲ್ಲಾ ಅಧಿಕಾರಗಳನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶವನ್ನು ರಾಜ್ಯ ಸರ್ಕಾರ ದಿನಾಂಕ: 29-06-2026 ರಂದು ಹೊರಡಿಸಿದೆ.

ಸರ್ಕಾರದ ಈ ಆದೇಶವನ್ನು ಕಂದಾಯ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದರ್



ಕುಮಾರ್ ಕಟಾರಿಯಾ ಅವರು ಹೊರಡಿಸಿದ್ದಾರೆ.

**ಸರ್ಕಾರದ ಆದೇಶದಲ್ಲಿ ನೀಡಿರುವ ಮಾರ್ಗಸೂಚಿಗಳೇನು..**

ರಾಜ್ಯಾದ್ಯಂತ ಶಾಶ್ವತ ನಿವಾಸ ಪ್ರಮಾಣ ಪತ್ರಗಳನ್ನು ನೀಡುವ ಸಂಬಂಧ (Permanent Residence Certificate - PRC) ಸರ್ಕಾರ ಈ ಕೆಳಕಂಡ ಮಾರ್ಗಸೂಚಿಗಳನ್ನು ನೀಡಿದೆ.

**1. ಸಂಕ್ಷಿಪ್ತ ಶೀರ್ಷಿಕೆ:** ಈ ಮಾರ್ಗಸೂಚಿಗಳನ್ನು "ಕರ್ನಾಟಕ ಶಾಶ್ವತ ನಿವಾಸ ಪ್ರಮಾಣ ಪತ್ರ (Permanent Residence Certificate-PRC) ಮಾರ್ಗಸೂಚಿಗಳು, 2026" ಎಂದು ಕರೆಯತಕ್ಕದ್ದು.

**2. ಉದ್ದೇಶ:** ರಾಜ್ಯದಾದ್ಯಂತ ಶಾಶ್ವತ ನಿವಾಸ ಪ್ರಮಾಣ ಪತ್ರ ಹಾಗೂ ಡೊಮಿಸೈಲ್ ಪ್ರಮಾಣ ಪತ್ರಗಳನ್ನು ನೀಡುವ ಸಂಬಂಧ ಏಕರೂಪದ, ಪಾರದರ್ಶಕ ಹಾಗೂ ಕಾನೂನುಬದ್ಧವಾಗಿ ಸುಸ್ಥಿರವಾದ ವ್ಯವಸ್ಥೆಯನ್ನು ರೂಪಿಸುವುದು ಈ ಮಾರ್ಗಸೂಚಿಗಳ ಉದ್ದೇಶವಾಗಿದೆ.

**3. ಸಕ್ಷಮ ಪ್ರಾಧಿಕಾರ:** (i) ಸರ್ಕಾರ ಅಥವಾ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಯಿಂದ ಅಧಿಕೃತಗೊಳಿಸಲಾದ ಉಪ ತಹಶೀಲ್ದಾರ್ / ತಹಶೀಲ್ದಾರ್ ಅಥವಾ ಇತರೆ ಯಾವುದೇ ಅಧಿಕಾರಿ – ಪ್ರಮಾಣ ಪತ್ರ (Issuing Authority) ನೀಡುವ ಪ್ರಾಧಿಕಾರ.

(ii) ಸಹಾಯಕ ಆಯುಕ್ತರು – ಮೇಲ್ಮನವಿ ಪ್ರಾಧಿಕಾರ (Appellate Authority).

(iii) ಜಿಲ್ಲಾಧಿಕಾರಿಗಳು ಪುನರ್ ಪರಿಶೀಲನಾ ಪ್ರಾಧಿಕಾರ (Revisional Authority).

**4. ಶಾಶ್ವತ ನಿವಾಸ ಪ್ರಮಾಣ ಪತ್ರ ನೀಡಲು ಅರ್ಹತೆ**

**4.1–** ಪ್ರಮಾಣ ಪತ್ರ ನೀಡುವ ಪ್ರಾಧಿಕಾರವು ಅಗತ್ಯ ವಿಚಾರಣೆ ಹಾಗೂ ಪರಿಶೀಲನೆಯ ನಂತರ ಅರ್ಜಿದಾರರು ಕರ್ನಾಟಕ ರಾಜ್ಯದ ನಿಜವಾದ ಮತ್ತು ಶಾಶ್ವತ ನಿವಾಸಿಯಾಗಿದ್ದಾರೆ ಎಂಬ ಬಗ್ಗೆ ಖಚಿತಪಡಿಸಿಕೊಂಡು ಶಾಶ್ವತ ನಿವಾಸ ಪ್ರಮಾಣ ಪತ್ರವನ್ನು ನೀಡಬಹುದು.

**4.2 –** ಮೇಲ್ಕಂಡಂತೆ ಖಚಿತಗೊಳಿಸಿಕೊಳ್ಳುವ ಸಂದರ್ಭದಲ್ಲಿ ಪ್ರಮಾಣ ಪತ್ರ ನೀಡುವ ಪ್ರಾಧಿಕಾರವು ಈ ಕೆಳಕಂಡ ಒಂದು ಅಥವಾ ಹೆಚ್ಚಿನ ಅಂಶಗಳನ್ನು ಪರಿಗಣಿಸಬಹುದು:

- ಕರ್ನಾಟಕದಲ್ಲಿ ಜನನ– ಅರ್ಜಿದಾರರು ಕರ್ನಾಟಕ ರಾಜ್ಯದಲ್ಲಿ ಜನಿಸಿರಬೇಕು.
- ಸಾಮಾನ್ಯ ವಾಸಸ್ಥಳ ಅರ್ಜಿದಾರರು ಅಥವಾ ಅವರ ತಂದೆ/ತಾಯಿ ಅಥವಾ ಕಾನೂನುಬದ್ಧ ಪಾಲಕರು ಕರ್ನಾಟಕ ರಾಜ್ಯದಲ್ಲಿ ಸತತವಾಗಿ ಕನಿಷ್ಠ ಹತ್ತು (10) ವರ್ಷಗಳ ಕಾಲ ಸಾಮಾನ್ಯವಾಗಿ ವಾಸವಾಗಿರಬೇಕು.
- ಶಿಕ್ಷಣ ಅರ್ಜಿದಾರರು ಕರ್ನಾಟಕದಲ್ಲಿನ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ದ್ವಿತೀಯ ಪಿಯುಸಿ/12ನೇ ತರಗತಿ ಅಥವಾ ತತ್ಸಮಾನ ಹಂತದವರೆಗೆ ಕನಿಷ್ಠ ಹತ್ತು ಶೈಕ್ಷಣಿಕ ವರ್ಷಗಳ ಕಾಲ ವ್ಯಾಸಂಗ ಮಾಡಿರಬೇಕು.
- ಪೋಷಕರು ಅಥವಾ ಸಂಗಾತಿಯ ವಾಸಸ್ಥಳ ಅರ್ಜಿದಾರರ ತಂದೆ, ತಾಯಿ, ಕಾನೂನುಬದ್ಧ ಪಾಲಕರು ಅಥವಾ ಪತಿ/ಪತ್ನಿಯು ಕರ್ನಾಟಕದಲ್ಲಿ ಸಾಮಾನ್ಯ ಹಾಗೂ ಶಾಶ್ವತ ನಿವಾಸಿಯಾಗಿರಬೇಕು.
- ವಸತಿ ಆಸ್ತಿ ಅರ್ಜಿದಾರರು ಅಥವಾ ಅವರ ಕುಟುಂಬವು ಕರ್ನಾಟಕದಲ್ಲಿ ವಸತಿ ಅಥವಾ ಇತರೆ ಸ್ಥಿರಾಸ್ತಿಯ ಮಾಲೀಕತ್ವವನ್ನು ಹೊಂದಿರಬೇಕು. ಕಾನೂನುಬದ್ಧವಾದ ವಾರಸುದಾರರಾಗಿರಬೇಕು ಅಥವಾ ಬಳಸುತ್ತಿರಬೇಕು.
- **ಸರ್ಕಾರಿ ದಾಖಲೆಗಳು:** ಮತದಾರರ ಪಟ್ಟಿ, ಆಧಾರ್, ಪಡಿತರ ಚೀಟಿ, ಕಂದಾಯ ದಾಖಲೆಗಳು ಅಥವಾ ಇತರೆ ಸರ್ಕಾರಿ ದಾಖಲೆಗಳಲ್ಲಿ ಅರ್ಜಿದಾರರು ಅಥವಾ ಅವರ ಪೋಷಕರ ಹೆಸರು ಸಾಮಾನ್ಯ ನಿವಾಸಿಯಾಗಿ ದಾಖಲಾಗಿರಬೇಕು.
- **ಸರ್ಕಾರಿ / ಸಾರ್ವಜನಿಕ ಸೇವೆ:** ಅರ್ಜಿದಾರರು ಅಥವಾ ಅವರ ತಂದೆ/ತಾಯಿಯು ಕರ್ನಾಟಕ ರಾಜ್ಯ ಸರ್ಕಾರ, ಸ್ಥಳೀಯ ಸಂಸ್ಥೆ ಅಥವಾ ಸಾರ್ವಜನಿಕ ಸಂಸ್ಥೆಗಳಲ್ಲಿ ಗಣನೀಯ ಅವಧಿಯ ಸೇವೆ ಸಲ್ಲಿಸಿರಬೇಕು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)